ಸಂಪುಟ: 22, ಸಂಚಿಕೆ: 7, ಪುಟಗಳು: 8, ಬುಧವಾರ, 16 ಅಕ್ಟೋಬರ್ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ವೇಣು ಸಾರಥ್ಯದಲ್ಲಿ...

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
We Undertake Printing of Newspapers | Tabloids | Magazines
Contact: +91 9483589085 | e-mail: dashapramathimudranalaya@gmail.com

### ಸುಭಾಷಿತ

ಎಲ್ಲವೂ ಸರಿಯಿಲ್ಲದಿರುವಾಗ ಯಾವುದು ತಪ್ಪು ಎಂಬ ಪ್ರಶ್ನೆಗೆ ಉತ್ತರಿಸುವುದು ಕಷ್ಟ- **ಅನಾಮಿಕ**

### ಪಂಚಾಂಗ

(ಬುಧವಾರ 16, ಅಕ್ಟೋಬರ್-2024)

- ವಾರ: ಬುಧವಾರ, ತಿಥಿ: ಚತುರ್ದಶಿ
- ನಕ್ಷತ್ರ: ಉತ್ತರಭಾದ್ರ
- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು,
- ಆಶ್ವಯುಜ ಮಾಸ, ಶುಕ್ಲ ಪಕ್ಷ,
- ರಾಹುಕಾಲ: 12:09 ರಿಂದ 1:38
- ಗುಳಿಕಕಾಲ: 10:40 ರಿಂದ 12:09
- ಯಮಗಂಡಕಾಲ: 7:42 ರಿಂದ 9:11

## ಸಂಕ್ಷಿಪ್ತ ಸುದ್ದಿ

### ಮಳೆ ಆರ್ಭಟ

**ಚೆನ್ನೈ:** ತಮಿಳುನಾಡಿನಲ್ಲಿ ಸುರಿಯುತ್ತಿರುವ ಭಾರೀ ಮಳೆಯ ಪರಿಣಾಮ ಚೆನ್ನೈನಿಂದ ಬೆಂಗಳೂರಿಗೆ ಸಂಚರಿಸುವ ಕೆಲವು ರೈಲುಗಳನ್ನು ರೈಲ್ವೇ ಇಲಾಖೆ ರದ್ದುಗೊಳಿಸಿದೆ. ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತದ ಪರಿಣಾಮ ತಮಿಳುನಾಡಿನ ಕೆಲವು ಕಡೆ ಭಾರೀ ಮಳೆ ಸುರಿಯುತ್ತಿದೆ. ಚೆನ್ನೈನಲ್ಲಿ ಕಳೆದ ಎರಡು ದಿನಗಳಿಂದ ಬಿಟ್ಟುಬಿಡದೇ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಇದರಿಂದಾಗಿ ಭಾರತೀಯ ಹವಾಮಾನ ಇಲಾಖೆ ತಮಿಳುನಾಡು ರಾಜ್ಯಾದ್ಯಂತ ಹೆಚ್ಚು ಮಳೆಯಾಗುವ ಮುನ್ಸೂಚನೆಯನ್ನು ನೀಡಿದೆ. ಈ ಹಿನ್ನೆಲೆಯಲ್ಲಿ ತೀವ್ರ ಮಳೆಯ ಪರಿಣಾಮ ರೈಲ್ವೆ ಇಲಾಖೆ ಇಂದು (ಅ.16) ಚೆನ್ನೈನಿಂದ ಬೆಂಗಳೂರು ಹಾಗೂ ಮೈಸೂರಿಗೆ ಸಂಚರಿಸುವ ಕೆಲವು ರೈಲುಗಳನ್ನು ರದ್ದುಗೊಳಿಸಿದೆ. ಮಳೆಯಿಂದಾಗಿ ಮುನ್ನೆಚ್ಚರಿಕೆ ಕ್ರಮವಾಗಿ ರೈಲುಗಳನ್ನು ರದ್ದುಗೊಳಿಸಿದೆ. ಪುಟ 2



### ಮಸೀದಿ ಆವರಣದಲ್ಲಿ ಜೈ ರಾಮ್ ಘೋಷಣೆ ಕೂಗಿದರೆ ಧಾರ್ಮಿಕ ಭಾವನೆಗೆ ಧಕ್ಕೆಯಾಗಲ್ಲ

**ಬೆಂಗಳೂರು:** ಮಹತ್ವದ ಬೆಳವಣಿಗೆಯೊಂದರಲ್ಲಿ, ಮಸೀದಿ ಆವರಣದಲ್ಲಿ 'ಜೈ ಶ್ರೀರಾಮ್' ಘೋಷಣೆ ಕೂಗಿದ ಆರೋಪದ ಮೇಲೆ ದಕ್ಷಿಣ ಕನ್ನಡ ಜಿಲ್ಲೆಯ ಇಬ್ಬರು ವ್ಯಕ್ತಿಗಳ ವಿರುದ್ಧ ದಾಖಲಿಸಿದ್ದ ಕ್ರಿಮಿನಲ್ ಮೊಕದ್ದಮೆಯ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ರದ್ದುಗೊಳಿಸಿದೆ. ಮೊಕದ್ದಮೆಯ ವಿಚಾರಣೆ ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರಿದ್ದ ಏಕ ಸದಸ್ಯ ಪೀಠ, 'ಜೈ ಶ್ರೀರಾಮ್' ಎಂದು ಕೂಗುವುದು ಯಾವುದೇ ವರ್ಗದ ಧಾರ್ಮಿಕ ಭಾವನೆಯನ್ನು ಹೇಗೆ ಕೆರಳಿಸುತ್ತದೆ, ಭಾವನೆಗೆ ಹೇಗೆ ಧಕ್ಕೆಯಾಗುತ್ತದೆ ಎಂಬುದು ಅರ್ಥವಾಗುತ್ತಿಲ್ಲ ಎಂದಿದ್ದಾರೆ.2023 ರ ಸೆಪ್ಟೆಂಬರ್ 24 ರ ರಾತ್ರಿ, ದಕ್ಷಿಣ ಕನ್ನಡ ಜಿಲ್ಲೆಯ ಐತ್ತೂರು ಗ್ರಾಮದ ಕಡಬ-ಮರ್ದಾಳ ರಸ್ತೆಯಲ್ಲಿರುವ ಮಸೀದಿ ಆವರಣಕ್ಕೆ ನುಗ್ಗಿದ್ದ ಕೆಲವು ಅಪರಿಚಿತ ವ್ಯಕ್ತಿಗಳು 'ಜೈ ಶ್ರೀ ರಾಮ್' ಎಂದು ಘೋಷಣೆಗಳನ್ನು ಕೂಗಿದ್ದರು. ಪುಟ 2



## ಇನ್ನೆರಡು ದಿನ ಮಳೆ ಸಾಧ್ಯತೆ ಶಾಲೆಗಳಿಗೆ ರಜೆ ಘೋಷಣೆ

# ರಾಜಧಾನಿಯಲ್ಲಿ ಮಳೆ ಅಬ್ಬರ

### ಕೆಲಸಕ್ಕೆ ಹೋಗುವವರ ಪರದಾಟ

### ಹಲವು ಜಿಲ್ಲೆ ಯೆಲ್ಲೋ ಅಲರ್ಟ್

**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಕಳೆದ ಮೂರ್ನಾಲ್ಕು ದಿನದಿಂದ ಬಿಟ್ಟು ಬಿಡದೇ ಸುರಿಯುತ್ತಿರುವ ಮಳೆ ಜನರನ್ನು ಹೈರಾಣಾಗಿಸಿದೆ. ಮುಂದಿನ ಎರಡು ದಿನ ಕೂಡ ಮಳೆಯ ಅಬ್ಬರ ಮುಂದುವರಿಯುವ ಸಾಧ್ಯತೆ ಇದ್ದು, ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಹವಾಮಾನ ಇಲಾಖೆ ಅಲರ್ಟ್ ಘೋಷಣೆ ಮಾಡಿದೆ. ಬೆಂಗಳೂರಲ್ಲಿ ಮೊನ್ನೆ ರಾತ್ರಿ ಆರಂಭವಾದ ಮಳೆ ನಿನ್ನೆಯೆಲ್ಲ ಸುರಿದು ನಗರದಲ್ಲಿ ಹತ್ತಾರು ಅವಾಂತರಗಳನ್ನ ಸೃಷ್ಟಿ ಮಾಡಿತ್ತು. ನಗರದ ಹಲವೆಡೆ ಜನಜೀವನ ಅಸ್ತವ್ಯಸ್ತ ಮಾಡಿದೆ. ಈ ಮಧ್ಯೆ, ಹವಾಮಾನ ಇಲಾಖೆ ಮತ್ತೊಮ್ಮೆ ಎಚ್ಚರಿಕೆಯನ್ನ ನೀಡಿದ್ದು, ನಗರದಲ್ಲಿ ಮತ್ತೆರೆಡು ದಿನ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತದ ಎಫೆಕ್ಟ್‌ನಿಂದ ಕರ್ನಾಟಕ, ತಮಿಳುನಾಡು, ಆಂಧ್ರಪ್ರದೇಶ ಸೇರಿದಂತೆ ಹಲವು ರಾಜ್ಯಗಳಲ್ಲಿ ಭಾರೀ ಮಳೆಯಾಗುತ್ತಿದೆ. ಇದು ಮುಂದಿನ ಎರಡು ದಿನ ಮುಂದುವರೆಯಲಿದ್ದು, ಇಂದು, ನಾಳೆ ರಾಜ್ಯದ್ಯಾಂತ ಬಹುತೇಕ ಜಿಲ್ಲೆಗಳಿಗೆ ಯೆಲ್ಲೋ, ಆರೆಂಜ್ ಅಲರ್ಟ್ ಘೋಷಣೆ ಮಾಡಲಾಗಿದೆ. ಇಂದು ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿತ್ರದುರ್ಗ, ದಾವಣಗೆರೆ, ಕೊಡಗು, ಕೋಲಾರ, ಮಂಡ್ಯ, ರಾಮನಗರ, ಉಡುಪಿ, ದಕ್ಷಿಣ ಕನ್ನಡ ಯೆಲ್ಲೋ ಅಲರ್ಟ್ ನೀಡಲಾಗಿದೆ. ಪುಟ 2



## ನೀರಲ್ಲಿ ಸಿಲುಕಿದ ಬಸ್



**ಬೆಂಗಳೂರು:** ರಾಜ್ಯದಲ್ಲಿ ದಿನದಿಂದ ದಿನಕ್ಕೆ ಮಳೆಯ ಅಬ್ಬರ ಜೋರಾಗುತ್ತಲೇ ಇದೆ. ವರುಣನ ಅಬ್ಬರಕ್ಕೆ ಜನರು ತತ್ತರಿಸಿ ಹೋಗಿದ್ದಾರೆ. ರಾಜ್ಯದ ಹಲವು ಕಡೆಗಳಲ್ಲಿ ಮಳೆರಾಯನ ಆಗಮನದಿಂದ ಅನೇಕ ಅವಾಂತರಗಳು ಸೃಷ್ಟಿಯಾಗಿದೆ. ಬಿಟ್ಟು ಬಿಡದೇ ಸುರಿಯುತ್ತಿರುವ ಮಳೆಗೆ ರಸ್ತೆಗಳು ಜಲಾವೃತ ಆಗಿದೆ. ಇನ್ನು ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಎರಡು ದಿನದಿಂದ ಮಳೆ ಸುರಿಯುತ್ತಿದ್ದು, ಹಲವು ರೀತಿಯ ಅನಾಹುತಗಳು ಸಂಭವಿಸಿದೆ. ಅತೀಯಾಗಿ ಸುರಿಯುತ್ತಿರುವ ಮಳೆಗೆ ಸಿಲಿಕಾನ್ ಸಿಟಿ ಜನ ಬೆಚ್ಚಿಬಿದ್ದಿದ್ದಾರೆ. ಮಳೆಯ ಪರಿಣಾಮ ರಸ್ತೆ ಮಧ್ಯೆ ನೀರಿನಲ್ಲಿ ಶಾಲಾ ಬಸ್ ಸಿಲುಕಿರುವ ಘಟನೆ ನಡೆದಿದೆ. ಪುಟ 2

### ನೇರಳೆ ಮಾರ್ಗದ ಮೆಟ್ರೋ ಸಂಚಾರ ವ್ಯತ್ಯಯ

## ಟ್ರ್ಯಾಕ್‌ಗೆ ಬಿದ್ದ ಮರ



**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಸುರಿಯುತ್ತಿರುವ ಭಾರೀ ಮಳೆಯ ಪರಿಣಾಮ ಟ್ರ್ಯಾಕ್‌ಗೆ ಮರ ಉರುಳಿ, ನೇರಳ ಮಾರ್ಗದಲ್ಲಿ ನಮ್ಮ ಮೆಟ್ರೋ ರೈಲು ಸಂಚಾರದಲ್ಲಿ ವ್ಯತ್ಯಯ ಉಂಟಾಗಿತ್ತು. ಸಿಬ್ಬಂದಿ ಮರ ತೆರವುಗೊಳಿಸಿದ ಬಳಿಕ ಮೆಟ್ರೋ ಸಂಚಾರ ಮತ್ತೆ ಆರಂಭವಾಯಿತು. ಪುಟ 2

## ಗಂಡು ಮಗುವಿಗೆ ಜನ್ಮ ನೀಡಿದ ರೇಣುಕಾ ಸ್ವಾಮಿ ಪತ್ನಿ

**ಚಿತ್ರದುರ್ಗ:** ರೇಣುಕಾ ಸ್ವಾಮಿ ಬರ್ಬರ ಹತ್ಯೆ ನಡೆದು ನಾಲ್ಕು ತಿಂಗಳು ಕಳೆದಿದೆ. ಈ ಕೊಲೆ ಮಾಡಿದ್ದು ನಟ ದರ್ಶನ್ ಹಾಗೂ ಗ್ಯಾಂಗ್ ಎನ್ನುವ ಆರೋಪ ಇದೆ. ಈ ಪ್ರಕರಣ ಕೋರ್ಟ್ ಅಂಗಳದಲ್ಲಿ ಇದೆ. ರೇಣುಕಾ ಸ್ವಾಮಿ ನಿಧನ ಹೊಂದುವಾಗ ಅವರ ಪತ್ನಿ ಸಹನಾಗೆ ಐದು ತಿಂಗಳು. ಈಗ ಅವರು ಗಂಡುಮಗುವಿಗೆ ಜನ್ಮ ನೀಡಿದ್ದಾರೆ. ಈ ವಿಚಾರ ಕುಟುಂಬದ ಖುಷಿ ಹೆಚ್ಚಿಸಿದೆ. ದರ್ಶನ್ ಆಪ್ತ ಗೆಳತಿ ಪವಿತ್ರಾಗೆ ರೇಣುಕಾ ಸ್ವಾಮಿ ಫೇಕ್ ಖಾತೆ ಮೂಲಕ ಮೆಸೇಜ್ ಮಾಡಿದ್ದರು. ಈ ವಿಚಾರ ದರ್ಶನ್ ಅವರ ಕೋಪಕ್ಕೆ ಕಾರಣ ಆಗಿತ್ತು. ರೇಣುಕಾ ಸ್ವಾಮಿಯನ್ನು ಪತ್ತೆ ಹಚ್ಚಿಸಿ ಬೆಂಗಳೂರಿಗೆ ಕರೆತರುವ ಕೆಲಸ ದರ್ಶನ್ ಗ್ಯಾಂಗ್‌ನಿಂದ ಆಗಿತ್ತು. ಬೆಂಗಳೂರಿನ ಪಟ್ಟಣಗೆರೆಯ ಶೆಡ್‌ನಲ್ಲಿ ರೇಣುಕಾಸ್ವಾಮಿ ಕೊಲೆ ನಡೆಯಿತು.



## ಬಿಬಿಎಂಪಿಯ 110 ಹಳ್ಳಿಗಳಿಗೆ ಜೀವಜಲ!



**ಬೆಂಗಳೂರು:** ದೇಶದ ಅತಿದೊಡ್ಡ ಕುಡಿಯುವ ನೀರಿನ ಯೋಜನೆ ಕಾವೇರಿ 5ನೇ ಹಂತಕ್ಕೆ ಇಂದು ಚಾಲನೆ ಸಿಗಲಿದೆ. ಬೆಂಗಳೂರು ಭಾಗದ 110 ಹಳ್ಳಿಯ 4 ಲಕ್ಷ ಜನರಿಗೆ ಕುಡಿಯೋ ನೀರು ಸಿಗಲಿದೆ. ಈ ಬೃಹತ್ ಯೋಜನೆಯನ್ನ ಇಂದು ಸಿಎಂ ಮತ್ತು ಡಿಸಿಎಂ ಲೋಕಾರ್ಪಣೆ ಮಾಡಲಿದ್ದಾರೆ. ಕಾವೇರಿ 5ನೇ ಹಂತ, ಇದು ದೇಶದ ಅತಿದೊಡ್ಡ ಕುಡಿಯುವ ನೀರಿನ ಯೋಜನೆಗಳಲ್ಲೊಂದು. ಬೆಂಗಳೂರು ಸುತ್ತ ಮುತ್ತಲಿನ ಲಕ್ಷಾಂತರ ಜನ ಚಾತಕ ಪಕ್ಷಿಗಳಂತೆ ಕಾಯುತ್ತಿದ್ದ ಯೋಜನೆ ಇದು. ಇವತ್ತು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್, ಈ ಬೃಹತ್ ಯೋಜನೆಯನ್ನ ಲೋಕಾರ್ಪಣೆಗೊಳಿಸಲಿದ್ದಾರೆ. ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕಿನ ತೊರೆಕಾಡನಹಳ್ಳಿಯ ಬೆಂಗಳೂರು ಜಲಮಂಡಳಿ ಜಲಶುದ್ಧೀಕರಣ ಘಟಕದ ಆವರಣದಲ್ಲಿ ಕಾರ್ಯಕ್ರಮ ನಡೆಯಲಿದೆ. ಪುಟ 2

## ದೇಶದ ದೊಡ್ಡ ಕುಡಿಯೋ ನೀರಿನ ಯೋಜನೆಗೆ ಇಂದು ಚಾಲನೆ

### ಯಾವೆಲ್ಲಾ ಏರಿಯಾಗಳಿಗೆ ನೀರು?

**ಈ ಯೋಜನೆ ಮೂಲಕ ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿಗಳಿಗೆ ನೀರು ಸಿಗಲಿದೆ. ಯಶವಂತಪುರ, ಬೆಂಗಳೂರು ದಕ್ಷಿಣ, ಬ್ಯಾಟರಾಯನಪುರ, ಟಿ.ದಾಸರಹಳ್ಳಿ, ಮಹದೇವಪುರ, ರಾಜರಾಜೇಶ್ವರಿ ನಗರ ಯಲಹಂಕ ಹಾಗೂ ಬೊಮ್ಮನಹಳ್ಳಿ ವಲಯದ ಜನರಿಗೆ ಕಾವೇರಿ ನೀರು ಲಭ್ಯವಾಗಲಿದೆ. ಯೋಜನೆಯ ವೆಚ್ಚ ಹಾಗೂ ವಿನ್ಯಾಸ ನೋಡೋದಾದರೆ, ಜೈಕಾ ಕಂಪನಿ ಸಹಭಾಗಿತ್ವದಲ್ಲಿ 4336 ಕೋಟಿ ರೂ.ವೆಚ್ಚದಲ್ಲಿ ಈ ಯೋಜನೆಯನ್ನ 2014 ರಲ್ಲಿ ಕೈಗೆತ್ತಿಕೊಳ್ಳಲಾಗಿತ್ತು. ಟಿ.ಕೆ. ಹಳ್ಳಿ, ಹಾರೋಹಳ್ಳಿ ಮತ್ತು ತಾತಗುಣಿಯಲ್ಲಿ ಮೂರು ಅತ್ಯಾಧುನಿಕ ತಂತ್ರಜ್ಞಾನದ ಸುಧಾರಿತ ಬೂಸ್ಟರ್ ಪಂಪಿಂಗ್ ಕೇಂದ್ರಗಳನ್ನು ನಿರ್ಮಿಸಲಾಗಿದೆ. ಈ ಪಂಪಿಂಗ್ ಕೇಂದ್ರಗಳ ಸಹಾಯದಿಂದ ಸುಮಾರು 110 ಕಿಲೋಮೀಟರ್ ದೂರದಿಂದ 500 ಹಾಗೂ 2200 ಎಂಎಂನಷ್ಟು ವ್ಯಾಸದ ಬೃಹತ್ ಉಕ್ಕಿನ ಪೈಪ್ಗಳ ಮೂಲಕ ಕಾವೇರಿ ನೀರನ್ನು 450 ಮೀಟರ್ ಎತ್ತರಕ್ಕೆ ಹರಿಸಿ ನಗರಕ್ಕೆ ನೀರನ್ನು ಪೂರೈಸಲಾಗುತ್ತದೆ. ಈ ಯೋಜನೆಗೆ 1,45,000 ಮೆಗಾ ಟನ್ ಸ್ಟೀಲ್ ಪ್ಲೇಟ್‌ಗಳ ಬಳಕೆ ಮಾಡಲಾಗಿದೆ.**

## ಜಮ್ಮು-ಕಾಶ್ಮೀರದ ಸಿಎಂ ಆಗಿ ಒಮರ್ ಅಬ್ದುಲ್ಲಾ ಇಂದು ಪ್ರಮಾಣವಚನ ಸ್ವೀಕಾರ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ನೂತನ ಸಿಎಂ ಆಗಿ ಒಮರ್ ಅಬ್ದುಲ್ಲಾ ಇಂದು ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಪ್ರಮಾಣವಚನ ಸ್ವೀಕಾರ ಸಮಾರಂಭವು ಶೇರ್ ಇ ಕಾಶ್ಮೀರ ಅಂತಾರಾಷ್ಟ್ರೀಯ ಕನ್ವೆನ್ಷನ್ ಸೆಂಟರ್‌ನಲ್ಲಿ 11:30ಕ್ಕೆ ನಡೆಯಲಿದ್ದು, ಒಮರ್ ಅಬ್ದುಲ್ಲಾ ಎರಡನೇ ಬಾರಿಗೆ ಜಮ್ಮು ಮತ್ತು ಕಾಶ್ಮೀರದ ಸಿಎಂ ಆಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಆರ್ಟಿಕಲ್ 370 ರದ್ಧತಿಯ ಬಳಿಕ ನಡೆದ ಚೊಚ್ಚಲ ವಿಧಾನಸಭೆಯಲ್ಲಿ ಗೆದ್ದ ನ್ಯಾಷನಲ್ ಕಾನ್ಫರೆನ್ಸ್‌ನ ಮುಖ್ಯಸ್ಥ ಒಮರ್ ಅಬ್ದುಲ್ಲಾ ಮೊದಲ ಮುಖ್ಯಮಂತ್ರಿಯಾಗಿ ಸ್ಥಾನಕ್ಕೇರಲಿದ್ದಾರೆ. ಇದಕ್ಕೂ ಮುನ್ನ 2009-2014 ರಲ್ಲಿ ಮುಖ್ಯ



ಮಂತ್ರಿಯಾಗಿ ಕಾರ್ಯನಿರ್ವಹಿಸಿದ್ದರು. ಬುಧವಾರ ನಡೆಯಲಿರುವ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಜಮ್ಮು ಮತ್ತು ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಜನರಲ್ ಮನೋಜ್ ಸಿನ್ಹಾ ಪ್ರಮಾಣ ವಚನ ಬೋಧಿಸಲಿದ್ದಾರೆ. ಪುಟ 2

# ರಾತ್ರಿಪೂರ ವಿಜೃಂಭಣೆಯಿಂದ ಜರುಗಿದ ದೇವರ ಉತ್ಸವ

**ಮಂಡ್ಯ:** ತಾಲೂಕು ಹೊಳಲು ಗ್ರಾಮದಲ್ಲಿ ನವರಾತ್ರಿ (ದಸರಾ) ಹಬ್ಬದ ಪ್ರಯುಕ್ತ ಗ್ರಾಮದ ಪ್ರತಿಯೊಂದು ಬೀದಿಗಳಲ್ಲಿ ವಿಶೇಷವಾಗಿ ವಿದ್ಯುತ್ ದೀಪಾಲಂಕಾರ ಹಾಗೂ ಆರ್ಚ್ (ದೇವರ ಮೂರ್ತಿಗಳು) ಗಳನ್ನು ಹಾಕಲಾಗಿತ್ತು .ಸೋಮವಾರ ರಾತ್ರಿ ಶ್ರೀ ಬಲಮುರಿ ಗಣಪತಿ ದೇವಾಲಯದ ಆವರಣದಲ್ಲಿ ಶ್ರೀ ದೊಡ್ಡಯ್ಯ ಸ್ವಾಮಿ ,ಶ್ರೀ ಚಿಕ್ಕಯ್ಯ ಸ್ವಾಮಿ, ಮಲ್ಲಿಗೆರೆ ಮಂತ್ರಿ, ಏಳೂರಮ್ಮ ದೇವಿ, ಹುಚ್ಚಮ್ಮ ದೇವಿ ಎಂಬ 5 ದೇವರುಗಳಿಗೆ ವಿವಿಧ ಹೂಗಳಿಂದ ಅಲಂಕರಿಸಿ, ಹೂವು ಹೊಂಬಾಳೆ ಮಾಡಿ ನಂತರ ಪೂಜೆ ಆದ ಮೇಲೆ ಶ್ರೀ ದೊಡ್ಡಮ್ಮತಾಯಿ ದೇಗುಲದ ಆವರಣದಲ್ಲಿ ಮೆರವಣಿಗೆ ಮಾಡಿ ,ನಂತರ ಗ್ರಾಮದ ರಂಗಮಂದಿರ ಆವರಣದಲ್ಲಿ ರಾತ್ರಿಪೂರ ದೇವರ ಉತ್ಸವ ವಿಜೃಂಭಣೆಯಿಂದ ಜರುಗಿತು. ಮಂಗಳವಾರ ಬೆಳಿಗ್ಗೆ ಶ್ರೀದೊಡ್ಡಯ್ಯ ಸ್ವಾಮಿಗೆ ವಿಶೇಷ ಪೂಜೆ ಹಾಗೂ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ಜರುಗಿತು ಭಕ್ತಾದಿಗಳಿಗೆ ಜಾನಕಮ್ಮ ಬೇಕರಿಯ ಪ್ರಶಾಂತ್ ಮತ್ತು ರವಿ ಕುಟುಂಬದ ವತಿಯಿಂದ ಹಾಗೂ ರಾಮಚಂದ್ರ ಕುಟುಂಬದವತಿಯಿಂದ ಪ್ರಸಾದ ವಿನಿಯೋಗ ಮಾಡಲಾಗಿತ್ತು. ನಂತರ ಶ್ರೀದೊಡ್ಡಯ್ಯ ಸ್ವಾಮಿ ದೇವಸ್ಥಾನದ ಅರ್ಚಕರಾದ ದೊಡ್ಡಯ್ಯ ಮಾತನಾಡುತ್ತಾ ಈ ದೇವರಿಗೆ ವಿಶೇಷ ಪೂಜೆ ಮಾಡಿದರೆ ಅವರ ಆಸೆ ಈಡೇರುತ್ತದೆ ಎಂದು ತಿಳಿಸಿದರು.

ಗ್ರಾಮದ ಮಹಿಳೆಯರು ಹಾಗೂ ಮಕ್ಕಳು ದೇವರಿಗೆ ಆರತಿ ಬೆಳಗಿಸಿ ವಿಶೇಷ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಎಚ್ .ಬಿ .ರಾಮು, ರಾಜ್ಯ ಒಕ್ಕಲಿಗರ ಮಾಜಿ ಉಪಾಧ್ಯಕ್ಷರಾದ ಎಚ್ ಎಲ್ ಶಿವಣ್ಣ, ಶ್ರೀ ದೊಡ್ಡಯ್ಯ ಸ್ವಾಮಿ ದೇವಸ್ಥಾನ ಟ್ರಸ್ಟ್ ಪದಾಧಿಕಾರಿಗಳಾದ ಶಂಕರ್ ಪೂಜಾರಿ ,ತಮ್ಮಣ್ಣ, ಸದಾನಂದ, ಹಾಗೂ ಗ್ರಾಮದ ಮುಖಂಡರಾದ ಹರಿಪ್ರಸಾದ್, ವಿಜಯಕುಮಾರ್, ಯೋಗೇಶ್ ಕುಮಾರ್ , ಜಟ್ಟಿ ಕುಮಾರ್, ಎಚ್ .ಡಿ .ರವಿ, ನವೀನ್, ಚಂದನ್, ನಾಗೇಶ್, ಪಪ್ಪಿ ಸಚಿದಾನಂದ , ನಿಂಗೇಗೌಡ , ಶ್ಯಾಮ್, ಚೇತನ್ ,ಹಾಗೂ ಅರ್ಚಕರಾದ ಪ್ರಕಾಶ್, ದೊಡ್ಡಯ್ಯ ,ಜೈ ಶಂಕರ್ , ಲೋಕೇಶ್ ಹಾಗೂ ಹೊಳಲು ಗ್ರಾಮಸ್ಥರು ಉಪಸ್ಥಿತರಿದ್ದರು.



# ಪೂರ್ವಭಾವಿ ಸಭೆ

**ಮಾಲೂರು:** ಕರ್ನಾಟಕ ರಾಜ್ಯ ಅನುದಾನಿತ ಪದವಿ ಪೂರ್ವ ಕಾಲೇಜುಗಳ ನೌಕರರ ಸಂಘದ 2ನೇ ರಾಜ್ಯ ಮಟ್ಟದ ಪೂರ್ವಭಾವಿ ಸಭೆಯನ್ನು ಇದೇ ಅಕ್ಟೋಬರ್ 20 ರಂದು ಭಾನುವಾರ ಬೆಳಗ್ಗೆ 11 ಗಂಟೆಗೆ ರವೀಂದ್ರ ಕಲಾನಿಕೇತನ, ಆರ್ .ಟಿ ನಗರ, ತುಮಕೂರುನಲ್ಲಿ (ಸರ್ವೋದಯ ಪದವಿಪೂರ್ವ ಕಾಲೇಜಿನ ಹತ್ತಿರ) ಕ.ರಾ.ಅ.ಪ.ಪೂ.ಕಾ.ನೌ. ಸಂಘದ ರಾಜ್ಯಾಧ್ಯಕ್ಷ ಡಾ.ಎನ್.ಹರೀಶ್ ನೇತೃತ್ವದಲ್ಲಿ ಸಭೆಯನ್ನು ಕರೆಯಲಾಗಿದೆ ಎಂದು ಕ.ರಾ.ಅ.ಪ.ಪೂ.ಕಾ.ನೌ.ಸಂಘದ ಸಹ ಕಾರ್ಯದರ್ಶಿ ಚಿಕ್ಕಾಪುರ ಶ್ರೀನಿವಾಸ್ ಕರೆ ನೀಡಿದರು.

ಈ ಸಭೆಯಲ್ಲಿ ಅನುದಾನಿತ ನೌಕರರ ಪ್ರಸ್ತುತ ಸಮಸ್ಯೆಗಳ ಬಗ್ಗೆ ಸಮಗ್ರ, ಚರ್ಚೆ, ಸರ್ಕಾರದ ಗಮನ ಸೆಳೆದು ಪರಿಹಾರ ಕಂಡುಕೊಳ್ಳುವುದು ಹಾಗೂ ಸಂಘದ ರಾಜ್ಯ ಮಟ್ಟದ ಸಮಾವೇಶ ಮಾಡುವ ಬಗ್ಗೆ ನಿರ್ಣಯಗಳನ್ನು ತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯದ ಅನುದಾನಿತ ಪದವಿ ಪೂರ್ವ ಕಾಲೇಜುಗಳ ನೌಕರರ ಸಂಘದ ರಾಜ್ಯ ಘಟಕದ ಎಲ್ಲಾ ಪದಾಧಿಕಾರಿಗಳು ಮತ್ತು ಜಿಲ್ಲಾ ಘಟಕಗಳ ಅಧ್ಯಕ್ಷರು ಕಾರ್ಯದರ್ಶಿಗಳು ಮತ್ತು ಎಲ್ಲ ಪದಾಧಿಕಾರಿಗಳು ಸಭೆಗೆ ತಪ್ಪದೆ ಕಡ್ಡಾಯವಾಗಿ ಹಾಜರಾಗಬೇಕೆಂದು ಕರೆ ನೀಡಿದರು.

# ಸದಾಶಿವ ಆಯೋಗ ಜಾರಿ ಮಾಡದ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಭಟನೆ

**ಬೆಂಗಳೂರು ಗ್ರಾಮಾಂತರ:** ದೇವನಹಳ್ಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ಮಾದಿಗ ದಂಡೋರ ಮೀಸಲಾತಿ ಹೋರಾಟ ಸಮಿತಿ ಯಿಂದ ಅ.16 ರಂದು ನಡೆಯುವ

ನ್ಯಾ॥ಎಜೆ.ಸದಾಶಿವ ಆಯೋಗ ಜಾರಿ ಮಾಡದ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಭಟನೆ ಕುರಿತು ಪತ್ರಿಕಾ ಘೋಷ್ಠಿ ನಡೆಸಿದರು.

ಕರ್ನಾಟಕ ಮಾದಿಗ ದಂಡೋರ ಮೀಸಲಾತಿ ಹೋರಾಟ ಸಮಿತಿಯ ಪ್ರಚಾರ ಸಮಿತಿ ರಾಜ್ಯಾದ್ಯಕ್ಷ ಬುಳ್ಳಹಳ್ಳಿ ರಾಜಪ್ಪ ಮಾತನಾಡಿ, ಸುಪ್ರೀಂ ಕೋರ್ಟ್ ಆದೇಶ ಜಾರಿಯಾಗಿ 3-4 ತಿಂಗಳು ಕಳೆದರು ಎಜೆ ಸದಾಶಿವ ಆಯೋಗದ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕ್ರಮ ಕೈಗೊಂಡಿಲ್ಲ ಹಾಗಾಗಿ ಅಕ್ಟೋಬರ್ 16 ರ ಬುಧವಾರ ಬೆಂಗಳೂರು ಗ್ರಾಮಾಂತರ ಬೀರಸಂದ್ರ, ಗ್ರಾಮದ ಜಿಲ್ಲಾಡಳಿತ ಕಚೇರಿ ಬಳಿ ಜಿಲ್ಲೆಯ 4 ತಾಲ್ಲೂಕಿನ ಜನಾಂಗದ ಮುಖಂಡರು ಭಾಗವಹಿಸ ಲಿದ್ದಾರೆ. ವಿಶೇಶವಾಗಿ ನಮ್ಮ ಜನಾಂಗದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಸಂಘಟಿಸುವ ಕೆಲಸ ಆಗಲಿದೆ. ಕಳೆದ ವಿಧಾನಸಭೆ ಚುನಾವಣಾ ಪ್ರಣಾಳಿಕೆಯಲ್ಲಿ ಎಜೆ. ನ್ಯಾ॥ ಸದಾಶಿವ ಆಯೋಗ ಜಾರಿ ಮಾಡುವ ಆಶ್ವಾಸನೆ ಕೇವಲ ಭರವಸೆಯಾಗಿ ಉಳಿದಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ತರಲು ನಮ್ಮ ಜನಾಂಗದ ಶ್ರಮ ಬಹಳಷ್ಟು ಇರುವುದನ್ನು ಸರ್ಕಾರ ಕಂಡು ಕಾಣದಂತೆ ಮೌನ ವಹಿಸುತ್ತಿದೆ ಸರ್ಕಾರಕ್ಕೆ ಎಚ್ಚರಿಕೆ ನೀಡುವ ಉದ್ದೇಶದಿಂದ ಬೈಕ್ ರಾಲಿಗೂ ಕೂಡ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ನಮ್ಮ ಈ ಹೋರಾಟಕ್ಕೆ ಸುಮಾರು 3 ಸಾವಿರಕ್ಕೂ ಹೆಚ್ಚು ಜನಾಂಗದ ಕುಲಭಾಂದ ವರು ಪಾಲ್ಗೊಳ್ಳವ ನಿರೀಕ್ಷೆಯನ್ನು ಹೊಂದಿದ್ದೇವೆ. ತರಾತುರಿಯಲ್ಲಿ ಸರ್ಕಾರ ಹಿಂದುಳಿದ ಜನಾಂಗಗಳ ಜಾತಿ ಸಮ್ಮಿಕ್ಷೆಗೆ ನಮ್ಮ ವಿರೋಧವಿಲ್ಲ, ಹಲವು ದಶಕಗಳಿಂದ ಎಜೆ.ಸದಾಶಿವ ಆಯೋಗ ಜಾರಿಯ ಹೋರಾಟದ ಕಾಳಜಿ ತಮಗೆ ಯಾಕಿಲ್ಲ ಎಂಬುದನ್ನು ಪ್ರಶ್ನಿಸುವ ಸುಸಂದರ್ಭಕ್ಕಾಗಿ



ಯು ಹೋರಾಟವನ್ನು ಕೈಗೆತ್ತಿಕೊಳ್ಳಲಾಗಿದೆ ಎಂದರು.

ಕರ್ನಾಟಕ ರಾಜ್ಯ ಮಾದಿಗ ದಂಡೋರ ಮೀಸಲಾತಿ ಹೋರಾಟ ಸಮಿತಿಯ ಜಿಲ್ಲಾಧ್ಯಕ್ಷ ಮಾರಪ್ಪ ಮಾತನಾಡಿ, ರಾಜ್ಯದಲ್ಲಿ 36 ಸಾವಿರ ಹುದ್ದೆ ಭರ್ತಿ ಮಾಡುವ ತಮ್ಮ ನಡೆಯನ್ನು ತಡೆಹಿಡಿದು, ಸದಾಶಿವ ಆಯೋಗ ಅನುಷ್ಠಾನದ ನಂತರ ಯಾವುದೇ ಹುದ್ದೆ ಯನ್ನು ಭರ್ತಿ ಮಾಡಿದರು ನಮ್ಮ ಅಭ್ಯಂತರವಿಲ್ಲ ಆದರೆ ನಮ್ಮ ಹೋರಾಟ ಒಳಮಿಸಲಾತಿ ಜಾರಿ ಒಂದೇ ಜನಾಂಗದ ದೊಡ್ಡ ಸಂಕಲ್ಪವಾಗಿದೆ ನಮ್ಮಗೆ ನ್ಯಾಯ ದೊರತನಕ ಹೋರಾಟವನ್ನು ಕೈ ಬಿಡಲಾರೆವು ಹಾಗಾಗಿ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿ ಹೋಬಳಿ ಮಟ್ಟ ನಗರಸಭೆ ಪುರಸಭೆ ಪಟ್ಟಣ ಪಂಚಾಯಿತಿ ಗಳನ್ನು ಒಳಗೊಂಡಂತೆ ಹೆಚ್ಚಿನ ಸಂಖ್ಯೆಯಲ್ಲಿ ಈ ಹೋರಾಟಕ್ಕೆ ಜನಾಂಗದ ಕುಲಬಾಂಧವರು ಹೋರಾಟಕ್ಕೆ ಪಾಲ್ಗೊ ಳ್ಳುವ ಮೂಲಕ ಸರ್ಕಾರಕ್ಕೆ ಎಚ್ಚರಿಕೆ ಮೂಡಿಸ ಬೇಕೆಂದು ಪತ್ರಿಕಾಗೋಷ್ಠಿಯಲ್ಲಿ ಆಗ್ರಹಿಸಿದರು.

ಈ ವೇಳೆ ಕರ್ನಾಟಕ ಮಾದಿಗ ದಂಡೋರ ಮೀಸಲಾತಿ ಹೋರಾಟ ಸಮಿತಿ ಅದ್ಯಕ್ಷ ಅಣ್ಣೇಶ್ವರ ವೆಂಕಟೇಶ್, ಅಧ್ಯಕ್ಷ ಹ್ಯಾಡಾಳ ದೇವರಾಜು, ಗೊಡ್ಲುಮುದ್ದೇನಹಳ್ಳಿ ಮುನಿರಾಜು, ಮುನಿಯಪ್ಪ, ಬುಳ್ಳಹಳ್ಳಿ ಮುನಿರಾಜು, ಸಾವಕನಹಳ್ಳಿ ಶ್ರೀನಿವಾಸ್, ಕುರುಬರಹಳ್ಳಿ ದೇವರಾಜು ಇನ್ನು ಮುಂತಾದವರು ಇದ್ದರು.

# ಪ್ರಗತಿಯಲ್ಲಿವೆ ಕಾಮಗಾರಿಗಳು

## ಕಾಂಗ್ರೆಸ್ ಸರ್ಕಾರವು ತಾಲೂಕಿನ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಿದೆ

**ಮಾಲೂರು:** ಯೋಜನಾ ಪ್ರಾಧಿಕಾರದ 30 ಕೋಟಿ ರೂಗಳ ಅನುದಾನದಡಿ ಪಟ್ಟಣದ ದೊಡ್ಡ ಕೆರೆಯನ್ನು ಅಭಿವೃದ್ಧಿ ಪಡಿಸಿ ಸಾರ್ವಜನಿಕರಿಗಾಗಿ ವಾಕಿಂಗ್ ಟ್ರ್ಯಾಕ್ ಉದ್ಯಾನವನ ನಿರ್ಮಿಸಿ ಅನುಕೂಲ ಕಲ್ಪಿಸಲಾಗುತ್ತಿದ್ದು, ಗುತ್ತಿಗೆದಾರರು ಗುಣಮಟ್ಟ ಕಾಮಗಾರಿಗೆ ಮುಂದಾಗಬೇಕು ಎಂದು ಶಾಸಕ ಕೆ.ವೈ.ನಂಜೇಗೌಡ ಹೇಳಿದರು.

ಪಟ್ಟಣದ ದೊಡ್ಡ ಕೆರೆಯಲ್ಲಿ ಯೋಜನಾ ಪ್ರಾಧಿಕಾರದ 30 ಕೋಟಿ ರೂಗಳ ವೆಚ್ಚದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಯನ್ನು ವೀಕ್ಷಿಸಿ ಮಾತನಾಡಿದರು.

ರಾಜ್ಯದಲ್ಲಿ ಈ ಹಿಂದೆ ಬಿಜೆಪಿ ಸರ್ಕಾರ ಆಡಳಿತದಲ್ಲಿದ್ದ ವೇಳೆ ತಾಲೂಕಿನ ಅಭಿವೃದ್ಧಿಗೆ ಸಹಕಾರ ನೀಡಲಿಲ್ಲ ನಂತರ ಬಂದ ಕಾಂಗ್ರೆಸ್ ಪಕ್ಷದ ಸರ್ಕಾರವು ತಾಲೂಕಿನ ಅಭಿವೃದ್ಧಿಗೆ ಹೆಚ್ಚಿನ ಅನುದಾನವನ್ನು ನೀಡಿದ್ದು, ಕೆಲವು ಕಾಮಗಾರಿಗಳು ಪ್ರಗತಿಯಲ್ಲಿದೆ. ಪಟ್ಟಣದ ದೊಡ್ಡ ಕೆರೆಯನ್ನು ಅಭಿವೃದ್ಧಿ ಪಡಿಸಲು ಯೋಜನಾ ಪ್ರಾಧಿಕಾರದ 30 ಕೋಟಿ ರೂಗಳ ಆರ್ಥಿಕ ಸಹಕಾರದಿಂದ ಕೆರೆಯ ಸುತ್ತಲೂ ವಾಕಿಂಗ್ ಟ್ರ್ಯಾಕ್ ನಿರ್ಮಿಸಿ ಬೀದಿ ದೀಪ ಉದ್ಯಾನವನ ಅಭಿವೃದ್ಧಿ ಕಾಮಗಾರಿಗಳು ನಡೆಸಲಾಗುತ್ತಿದೆ ಎತ್ತಿನಹೊಳೆ ನೀರು ಸಂಗ್ರಹವಾಗುವುದರಿಂದ ಚರಂಡಿ ನೀರು ಹಾಗೂ ಒಳಚರಂಡಿ ನೀರು ಕೆರೆಗೆ ಬಾರದಂತೆ ಸುತ್ತಲು ತಡೆಗೋಡೆ ಕಾಮಗಾರಿಯನ್ನು ಮಾಡಲಾಗುತ್ತಿದೆ,



ಕಾಮಗಾರಿಗಳು ನಡೆಯುವ ವೇಳೆ ಚುನಾಯಿತ ಪ್ರತಿನಿಧಿಗಳು ಅಧಿಕಾರಿಗಳು ಸ್ಥಳದಲ್ಲಿ ಹಾಜರಿದ್ದು, ಗುಣಮಟ್ಟದ ಕಾಮಗಾರಿಯನ್ನು ಮಾಡಿಸಬೇಕು, ಇಲ್ಲವಾದಲ್ಲಿ ಗುತ್ತಿಗೆದಾರರ ನಿರ್ಲಕ್ಷ್ಯ ತೋರುತ್ತಾರೆ . ಸಾರ್ವಜನಿಕರು ಸಹ ಗುಣಮಟ್ಟದ ಕಾಮಗಾರಿಗೆ ಸಹಕಾರ ನೀಡಬೇಕು, ದೊಡ್ಡ ಕೆರೆಯಲ್ಲಿ ಕುಡಿಯುವ ನೀರು ಎತ್ತಿನಹೊಳೆ ಯೋಜನೆಯ ನೀರನ್ನು ಸಂಗ್ರಹಿಸಿ ಪಟ್ಟಣದಲ್ಲಿ ಸರಬರಾಜು ಮಾಡಲಾಗುವುದು.

ಪಟ್ಟಣದ ಬಸ್ ನಿಲ್ದಾಣವನ್ನು ಯೋಜನಾ ಪ್ರಾಧಿಕಾರ ಹಾಗೂ ಸರ್ಕಾರದ ಅನುದಾನದಡಿ ಸುಸಜ್ಜಿತ ಬಸ್ ನಿಲ್ದಾಣವನ್ನಾಗಿ ಮಾಡಲಾಗುವುದು. ಪಟ್ಟಣದಲ್ಲಿ ಹಾದು ಹೋಗುವ ಮುಖ್ಯರಸ್ತೆಯನ್ನು ವಾಹನ ಸಂಚಾರ ದಟ್ಟಣೆ ನಿಯಂತ್ರಿಸಲು ವಿಜಯಪುರದಿಂದ ಸಂಪಂಗೆರೆ ಹೊರಗೆ ಹಾದು ಹೋಗುವ ಮುಖ್ಯ ರಸ್ತೆ ಕೈಗಾರಿಕಾ ಕಾರಿಡಾರ್ 6 ಪಥದ ರಸ್ತೆಯ ಯೋಜನೆಯಲ್ಲಿ ಫ್ಲೈ ಓವರ್ ನಿರ್ಮಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ಕೋಮಲ ನಾರಾಯಣ್, ಸ್ಥಾಯಿ ಸಮಿತಿ ಅಧ್ಯಕ್ಷ ಎ.ರಾಜಪ್ಪ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಲಕ್ಷ್ಮಿ ನಾರಾಯಣ್, ಯೋಜನಾ ಪ್ರಾಧಿಕಾರದ ಅಧ್ಯಕ್ಷ ಮುಹಮದ್ ನಹಿಂ ಉಲ್ಲಾ, ಪುರಸಭಾ ಸದಸ್ಯ ಪರಮೇಶ್, ಯೋಜನಾ ಪ್ರಾಧಿಕಾರ ಕಾರ್ಯದರ್ಶಿ ಕೃಷ್ಣಪ್ಪ, ಪುರಸಭೆ ಮುಖ್ಯಾಧಿಕಾರಿ ಎ.ಬಿ.ಪ್ರದೀಪ್, ಬೆಸ್ಕಾಂ ಕಾರ್ಯಪಾಲಕ ಅಭಿಯಂತರ ಆನ್ಸರ್ ಭಾಷಾ, , ಮುಖಂಡರಾದ ಹೋಟೆಲ್ ವೆಂಕಟಸ್ವಾಮಿ, ಎಂ.ಪಿ.ವಿ.ಮಂಜು, ಇನ್ನಿತರರು ಹಾಜರಿದ್ದರು.

# ಮಾಸ್ತಿ ಪಂಚಾಯತಿ ಅಧ್ಯಕ್ಷರಾಗಿ ಮಂಜುಳಾನಾಗರಾಜ್ ಆಯ್ಕೆ

**ಕೋಲಾರ:** ಮಾಲೂರು ತಾಲೂಕಿನ ಮಾಸ್ತಿ ಗ್ರಾಮ ಪಂಚಾಯತಿಯ ನೂತನ ಅಧ್ಯಕ್ಷೆಯಾಗಿ ಮಂಜುಳಾನಾಗರಾಜ್ ಅವಿರೋಧ ಆಯ್ಕೆಯಾದರು. ಶಾಸಕ ನಂಜೇಗೌಡರ ಅಧ್ಯಕ್ಷತೆಯಲ್ಲಿ ಗ್ರಾಮದ ಹಾಲಿನ ಡೇರಿಯಲ್ಲಿ ನಡೆದ ಸದಸ್ಯರ ಸಭೆಯಲ್ಲಿ ಮಂಜುಳಾ ಅವರ ಹೆಸರು ಅಂತಿಮಗೊಂಡು ಎಲ್ಲ ಸದಸ್ಯರ ಜತೆಗೂಡಿ ಪಂಚಾಯತಿ ಕಚೇರಿಗೆ ತೆರಳಿ ನಾಮಪತ್ರ ಸಲ್ಲಿಸುವ ಮೂಲಕ ಸರ್ವಾನುಮತದಿಂದ ಅಧ್ಯಕ್ಷ ಗಾದಿಗೆ ಏರಿದರು. ಈ ಸಂದರ್ಭದಲ್ಲಿ ಮಾತನಾಡಿದ ನೂತನ ಅಧ್ಯಕ್ಷೆ ಮಂಜುಳಾ ಅವರು ಸದಸ್ಯರ ಪ್ರೀತಿ ವಿಶ್ವಾಸದಿಂದಾಗಿ ಅವಿರೋಧ ಆಯ್ಕೆಯಾಗಿದ್ದು ಮೂಲಭೂತ ಸೌಲಭ್ಯಗಳನ್ನು ಪಂಚಾಯತಿ ಜನರಿಗೆ ತಲುಪಿಸುವ ಮೂಲಕ ಮಾದರಿಯಾಗಿ ರೂಪಿಸಲಾಗುವುದೆಂದು ನುಡಿದರು. ಪಿಡಿಓ ನವೀನ್ ಕುಮಾರ್ ಮಾತನಾಡಿ, ಗ್ರಾಮದ ಬಸ್ ನಿಲ್ದಾಣಕ್ಕೆ ಪಂಚಾಯತಿಯಿಂದ ಸ್ಥಳಾವಕಾಶ ನೀಡುವ ಮೂಲಕ ಸುಸಜ್ಜಿತ ಬಸ್ ಸ್ಟಾಂಡ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ಅಂತೆಯೇ ನರೇಗಾದಲ್ಲಿ ಗಮನಾರ್ಹವಾಗಿ ಕಾಮಗಾರಿಗಳನ್ನು ಮಾಡಲಾಗಿದೆ ಎಂದು ತಿಳಿಸಿದರು. ಬಿಇಓ ಚಂದ್ರಕಲಾ ಚುನಾವಣಾಧಿಕಾರಿಯಾಗಿದ್ದರು.



# ನಾಳೆ ಮಹರ್ಷಿ ವಾಲ್ಮೀಕಿ ಜಯಂತಿ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಅಕ್ಟೋಬರ್ 17ರಂದು ಬೆಳಿಗ್ಗೆ 10 ಗಂಟೆಗೆ ನಗರದ ವರನಟ ಡಾ. ರಾಜ್‌ಕುಮಾರ್ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ. ಪಶುಸಂಗೋಪನೆ, ರೇ?ಮ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಮೈಸೂರು ಸೇಲ್ಸ್ ಇಂಟರ್‌ನ್ಯಾ?ನಲ್ ಲಿಮಿಟೆಡ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಘನ ಉಪಸ್ಥಿತಿ ವಹಿಸುವರು. ಶಾಸಕರಾದ ಎ.ಆರ್. ಕೃ?ಣಮೂರ್ತಿ, ಎಚ್.ಎಂ. ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ್, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರಾದ ಎಸ್. ಜಯಣ್ಣ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್, ಚಾಮರಾಜನಗರ ಮತ್ತು ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ (ಮುನ್ನ), ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್. ವಿ ಚಂದ್ರು, ನಗರಸಭಾ ಉಪಾಧ್ಯಕ್ಷರಾದ ಎಚ್.ಎಸ್. ಮಮತ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಪದವಿ ಪೂರ್ವ ಶಿಕ್ಷಣ ಇಲಾಖೆಯ ನಿವೃತ್ತ ಪ್ರಾಂಶುಪಾಲರಾದ ಬಂಗಾರ ನಾಯಕ ಅವರು ಮುಖ್ಯ ಭಾಷಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

# 18ರಂದು ನಗರದಲ್ಲಿ ಉದ್ದಿಮೆ ಪರವಾನಿಗೆ ಆಂದೋಲನ ಕಾರ್ಯಕ್ರಮ

**ಚಾಮರಾಜನಗರ:** ಚಾಮರಾಜನಗರ ನಗರಸಭಾ ವತಿಯಿಂದ ಉದ್ದಿಮೆ ಪರವಾನಿಗೆ ಆಂದೋಲನ ಕಾರ್ಯಕ್ರಮವನ್ನು ಅಕ್ಟೋಬರ್ 18ರಂದು ನಗರದ ಜೋಡಿರಸ್ತೆಯಲ್ಲಿರುವ ವರ್ತಕರ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ನಗರಸಭಾ ವ್ಯಾಪ್ತಿಯಲ್ಲಿರುವ ಎಲ್ಲಾ ರೀತಿಯ ಉದ್ದಿಮೆದಾರರು ಉದ್ದಿಮೆ ನಡೆಸಲು ಕರ್ನಾಟಕ ಪೌರಸಭೆಗಳ ಅಧಿನಿಯಮಗಳ ಕಾಯ್ದೆ 1964ರ ಪ್ರಕರಣ 256 ಪ್ರಕಾರ ನಗರ ಸ್ಥಳೀಯ ಸಂಸ್ಥೆಯಲ್ಲಿ ಕಡ್ಡಾಯವಾಗಿ ಪರವಾನಿಗೆಯನ್ನು ಹೊಂದಿರ ಬೇಕಾಗಿರುವುದರಿಂದ ಪ್ರಸಕ್ತ ಸಾಲಿನ ಕಂದಾಯ ಪ್ರತಿ, ಆಧಾರ್ ಕಾರ್ಡ್, ಬಾಡಿಗೆ ಕರಾರು/ ಇ-ಸ್ವತ್ತು ಪ್ರತಿ, ಉದ್ದಿಮೆಯ ಫೋಟೋ, ಭಾವಚಿತ್ರ ಸೇರಿದಂತೆ ಸೂಕ್ತ ದಾಖಲಾತಿಗಳನ್ನು ಲಗತ್ತಿಸಬೇಕು. ಸಾರ್ವಜನಿಕರು ಉದ್ದಿಮೆ ಪರವಾನಗಿ ಆಂದೋಲನವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಹಾರ ತಂತ್ರಾಂಶದಲ್ಲಿ ಫಲಾನುಭವಿಗಳ ಜಾತಿ ಮ್ಯಾಪಿಂಗ್ ಮಾಡಲು ಆಹಾರ ಇಲಾಖೆ ಸೂಚನೆ

**ಚಾಮರಾಜನಗರ:** ಆಹಾರ ತಂತ್ರಾಂಶದಲ್ಲಿ ಪಡಿತರ ಚೀಟಿ ಫಲಾನುಭವಿಗಳ ಜಾತಿಯ ಮ್ಯಾಪಿಂಗ್ ಮಾಡುವಂತೆ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸೂಚಿಸಿದ್ದು, ಮಾಹಿತಿಯನ್ನು ನ್ಯಾಯಬೆಲೆ ಅಂಗಡಿ ಮುಂದೆ ಪ್ರದರ್ಶಿಸಲು ತಿಳಿಸಲಾಗಿದೆ. ಫಲಾನುಭವಿಗಳ ಹತ್ತಿರದ ಎಜೆಎಸ್‌ಕೆ ಕೇಂದ್ರದಿಂದ ಅವರ ಜಾತಿ ಆರ್‌ಡಿ ಪ್ರಮಾಣ ಪತ್ರವನ್ನು ಪಡೆಯಬಹುದು. ಜಾತಿ ಪ್ರಮಾಣ ಪತ್ರವನ್ನು ನ್ಯಾಯಬೆಲೆ ಅಂಗಡಿಗಳಿಗೆ ಪಡಿತರ ಚೀಟಿಯೊಂದಿಗೆ ಮ್ಯಾಪ್ ಮಾಡಲು ನೀಡಬೇಕು. ನ್ಯಾಯಬೆಲೆ ಅಂಗಡಿ ಮಾಲೀಕರು ತಂತ್ರಾಂಶದಲ್ಲಿ ಶಾಪ್ ಓನರ್ ಮಾಡ್ಯೂಲ್ ಇ-ಕೆವೈಸಿ ಸ್ಕ್ರೀನ್ ಅನ್ನು ಬಳಸಿಕೊಂಡು ಜಾತಿ ಪ್ರಮಾಣ ಪತ್ರವನ್ನು ಮ್ಯಾಪ್ ಮಾಡಬೇಕು ಹಾಗೂ ಎಜೆಎಸ್‌ಕೆ ವೆಬ್ ಸೇವೆಗಳನ್ನು ಬಳಸಿಕೊಂಡು ಜಾತಿ ಆರ್‌ಡಿ ಪ್ರಮಾಣಪತ್ರದ ಆನ್‌ಲೈನ್ ಪರಿಶೀಲನೆಯೊಂದಿಗೆ ಪಡಿತರ ಕಾರ್ಡ್ ಫಲಾನುಭವಿಗಳಿಗೆ ಜಾತಿಯನ್ನು ಮ್ಯಾಪ್ ಮಾಡಬೇಕು. ಚಾಮರಾಜನಗರ ತಾಲೂಕು 21,603, ಗುಂಡ್ಲುಪೇಟೆ ತಾಲೂಕು 10,753, ಕೊಳ್ಳೇಗಾಲ ತಾಲೂಕು 12,485, ಯಳಂದೂರು ತಾಲೂಕು 4,398, ಹನೂರು ತಾಲೂಕು 11,228 ಸೇರಿದಂತೆ ಒಟ್ಟು 60,467 ಫಲಾನುಭವಿಗಳ ಜಾತಿ ಪ್ರಮಾಣ ಪತ್ರವನ್ನು ಮ್ಯಾಪ್ ಮಾಡುವ ಕಾರ್ಯ ಬಾಕಿ ಉಳಿದಿದೆ. ತಾಲ್ಲೂಕಿನ ಎಲ್ಲಾ ಆಹಾರ ಶಿರಸ್ತೇದಾರ್, ಆಹಾರ ನಿರೀಕ್ಷಕರಿಂದ ನ್ಯಾಯಬೆಲೆ ಅಂಗಡಿ ವಿತರಕರಿಗೆ ಫಲಾನುಭವಿಗಳ ಪಟ್ಟಿಯನ್ನು ನೀಡಲಾಗಿದ್ದು, ಸದರಿ ಪಟ್ಟಿಯನ್ನು ನ್ಯಾಯಬೆಲೆ ಅಂಗಡಿ ಮುಂದೆ ಪ್ರದರ್ಶಿಸಲು ಹಾಗೂ ಪಟ್ಟಿಯಲ್ಲಿರುವ ಫಲಾನುಭವಿಗಳಿಂದ ಜಾತಿ ಪ್ರಮಾಣ ಪತ್ರವನ್ನು ಪಡೆದು ನ್ಯಾಯಬೆಲೆ ಅಂಗಡಿ ಲಾಗಿನ್‌ನಲ್ಲಿ ಈ-ಕೆವೈಸಿ ತಂತ್ರಾಂಶದಲ್ಲಿ ಜಾತಿ ಪ್ರಮಾಣದ ಆರ್‌ಡಿ ಸಂಖ್ಯೆಯನ್ನು ನಮೂದಿಸಿ ಅಪ್‌ಡೇಟ್ ಮಾಡುವಂತೆ ಈಗಾಗಲೇ ಎಲ್ಲಾ ನ್ಯಾಯಬೆಲೆ ಅಂಗಡಿ ವಿತರಕರಿಗೆ ಸೂಚಿಸಲಾಗಿರುತ್ತದೆ. ಜಾತಿ ಪ್ರಮಾಣ ಪತ್ರವನ್ನು ಮ್ಯಾಪ್ ಮಾಡಿಸದೇ ಇರುವ ಫಲಾನುಭವಿಗಳು ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿಗೆ ತೆರಳಿ ಕೂಡಲೇ ಜಾತಿ ಪ್ರಮಾಣ ಪತ್ರವನ್ನು ಮ್ಯಾಪ್ ಮಾಡಿಸಲು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಯೋಗಾನಂದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಸಂಪನ್ಮೂಲ ಕೇಂದ್ರದಲ್ಲಿ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಚಾಮರಾಜನಗರ;** ಜಿಲ್ಲಾ ಪಂಚಾಯತ್ ಕಚೇರಿಯ ಜಿಲ್ಲಾ ಸಂಪನ್ಮೂಲ ಕೇಂದ್ರದಲ್ಲಿ ಆಡಳಿತ ಸಹಾಯಕ, ಲೆಕ್ಕ ಸಹಾಯಕ, ಗ್ರೂಪ್ ಡಿ, ಸೆಕ್ಯುರಿಟಿ, ಹೌಸ್ ಕೀಪಿಂಗ್ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ಅರ್ಜಿ ಆಹ್ವಾನಿಸಲಾಗಿದೆ. ಆಡಳಿತ ಸಹಾಯಕ ಒಂದು ಹುದ್ದೆಗೆ ಯಾವುದಾದರೂ ವಿಷಯದಲ್ಲಿ ಪದವಿ ಹೊಂದಿರಬೇಕು. ಲೆಕ್ಕ ಸಹಾಯಕ ಒಂದು ಹುದ್ದೆಗೆ ಬಿ.ಕಾಂ ಪದವಿ ವಿದ್ಯಾರ್ಹತೆ ಹೊಂದಿರಬೇಕು. ಇಂಗ್ಲೀಷ್ ಮತ್ತು ಕನ್ನಡ ಭಾಷೆಯಲ್ಲಿ ಟೈಪಿಂಗ್ ಮಾಡುವ ಜ್ಞಾನ ಮತ್ತು ಕೌಶಲ್ಯವಿರಬೇಕು. ಬಹುಕಾಯಕ ಕೆಲಸಗಾರ 3 ಹುದ್ದೆಗೆ (ಗ್ರೂಪ್ ಡಿ, ಸೆಕ್ಯುರಿಟಿ, ಹೌಸ್ ಕೀಪಿಂಗ್) ಕನಿಷ್ಠ 10ನೇ ತರಗತಿ ಪೂರ್ಣಗೊಂಡಿರಬೇಕು. ಈ ಎಲ್ಲಾ ಹುದ್ದೆಗಳಿಗೆ ಕನಿಷ್ಟ ಮೂರು ವರ್ಷಗಳು ಸರ್ಕಾರ ಅಥವಾ ಇತರೆ ಯಾವುದೇ ಸಾರ್ವಜನಿಕ ಸಂಸ್ಥೆಗಳಲ್ಲಿ ಕೆಲಸ ಮಾಡಿರುವ ಅನುಭವ ಹೊಂದಿರಬೇಕು. ಅಭ್ಯರ್ಥಿಗಳನ್ನು ಮೆರಿಟ್ ಹಾಗೂ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ಅಂತಿಮ ದಿನಾಂಕದ ನಂತರ ಸಲ್ಲಿಸುವ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಕಾಲಕಾಲಕ್ಕೆ ಇಲಾಖೆಯಿಂದ ಹೊರಡಿಸುವ ಆದೇಶಗಳಿಗೆ ಬದ್ಧರಾಗಿರಬೇಕು. ನೌಕರರ ನೇಮಕ ಅಥವಾ ರದ್ದುಗೊಳಿಸುವ ಅಧಿಕಾರವು ಸಕ್ಷಮ ಪ್ರಾಧಿಕಾರಿಯ ವಿವೇಚನೆಗೆ ಒಳಪಟ್ಟಿದೆ.

ಆಸಕ್ತ ಅಭ್ಯರ್ಥಿಗಳು ಚಾಮರಾಜನಗರ ಜಿಲ್ಲಾ ಪಂಚಾಯತ್ ಕಚೇರಿಯ ಕೊಠಡಿ ಸಂಖ್ಯೆ 14ರಲ್ಲಿ ಅರ್ಜಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ 30ರೊಳಗೆ ಸಲ್ಲಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಲಿಗೆ, ವೀಡಿಯೋಗ್ರಾಫಿ ತರಬೇತಿಗೆ ಪ.ಜಾತಿಯವರಿಂದ ಅರ್ಜಿ ಆಹ್ವಾನ

**ಚಾಮರಾಜನಗರ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2024-25ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿಯ ಯುವಕ, ಯುವತಿಯರಿಗೆ ಹೊಲಿಗೆ ಹಾಗೂ ವೀಡಿಯೋಗ್ರಾಫಿ ತರಬೇತಿ ಶಿಬಿರಗಳನ್ನು ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 40 ವರ್ಷದೊಳಗಿನ ಎಸ್.ಎಸ್.ಎಲ್.ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾದ ಅಭ್ಯರ್ಥಿಗಳಿಗೆ ನವೆಂಬರ್ 7ರಿಂದ 26ರವರೆಗೆ 20 ದಿನಗಳ ಹೊಲಿಗೆ ತರಬೇತಿ ಹಾಗೂ ದ್ವಿತೀಯ ಪಿ.ಯು.ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾದ ಅಭ್ಯರ್ಥಿಗಳಿಗೆ ನವೆಂಬರ್ 15ರಿಂದ 26ರವರೆಗೆ 12 ದಿನಗಳ ಕಾಲ ವೀಡಿಯೋಗ್ರಾಫಿ ತರಬೇತಿಯನ್ನು ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನೀಡಲಾಗುತ್ತದೆ.

ಅರ್ಹ ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ನಗರದ ಜಿಲ್ಲಾಡಳಿತ ಭವನದಲ್ಲಿರುವ ಮೊದಲನೇ ಮಹಡಿ ಕೊಠಡಿ ಸಂ 118 ರಲ್ಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಚೇರಿಯಲ್ಲಿ ಅರ್ಜಿ ಪಡೆದು ಅಕ್ಟೋಬರ್ 28ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ದೂ.ಸಂ 08226-224932 ಅಥವಾ ಮೊ.ಸಂ 9916466659 ಅನ್ನು ಸಂಪರ್ಕಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಳಲಲ್ಲಿ ನೇತ್ರ ತಪಾಸಣಾ ಶಿಬಿರ

**ಮಂಡ್ಯ:** ತಾಲೂಕು ಹೊಳಲು ಗ್ರಾಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಹೊಳಲು ಆರೋಗ್ಯ ಕೇಂದ್ರ ಮತ್ತು ಆಶಾಕಿರಣ ಕಾರ್ಯಕ್ರಮದಡಿ ಮುಂದುವರಿದ ದ್ವಿತೀಯ ಹಂತದ ನೇತ್ರ ತಪಾಸಣಾ ಶಿಬಿರವು ಈ ದಿನ ಹೊಳಲು ಆಯುಷ್ಮಾನ್ ಆರೋಗ್ಯ ಕೇಂದ್ರದಲ್ಲಿ ಜರುಗಿತು. ನಂತರ ಶಿಬಿರದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾಕ್ಟರ್ ರವಿಕುಮಾರ್ ರವರು ಪ್ರತಿಯೊಬ್ಬರೂ ಈ ಕಾರ್ಯಕ್ರಮವನ್ನು ಸದುಪಯೋಗ ಪಡೆದುಕೊಳ್ಳಬೇಕು .ಹಾಗೂ ಜಿಲ್ಲಾ ಕಾರ್ಯಕ್ರಮವದರಿಂದ ಅಕ್ಕಪಕ್ಕದ ಗ್ರಾಮಸ್ಥರು ದೃಷ್ಟಿದೋಷ ಇರುವವರು ಈ ಕಾರ್ಯಕ್ರಮದಿಂದ ತಪಾಸಣೆ ಮಾಡಿಸಿಕೊಂಡು ನೇತ್ರವನ್ನ ಚೆನ್ನಾಗಿ ನೋಡಿಕೊಳ್ಳಬೇಕು ಹಾಗೂ ಪ್ರತಿಯೊಬ್ಬರೂ ನೇತ್ರದಾನ ಮಹಾದಾನವೆಂದು ತಿಳಿದು ನೇತ್ರದಾನ ಮಾಡುವುದರ ಮುಖಾಂತರ ಇನ್ನೊಬ್ಬರ ಬದುಕಿಗೆ ಆಶಾಕಿರಣವಾಗಲೆಂದು ಹೇಳಿದರು. ನಂತರ ಮಾತನಾಡಿದ ನೇತ್ರಾಧಿಕಾರಿ ಡಾ. ಪವನ್ ಸಿಂಗ್ ರವರು ಮಾತನಾಡುತ್ತಾ ಈ ಕಾರ್ಯಕ್ರಮದ ಉಪಯೋಗವನ್ನು ಪ್ರತಿಯೊಬ್ಬರಿಗೂ ದೃಷ್ಟಿಸಿಗಲೆಂದು ಈ ಆಶಾಕಿರಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಪ್ರತಿಯೊಂದು ಹಳ್ಳಿಗಳಲ್ಲಿ ದೃಷ್ಟಿದೋಷ ಹಾಗೂ ಕಣ್ಣಿನ ತೊಂದರೆ ಇರುವವರು ದೃಷ್ಟಿ ಸಿಗಲೆಂದು ಈ ಶಿಬಿರದ ಪ್ರಯೋಜನ ಹಾಗೂ ಹಾಗೂ ಪ್ರತಿಯೊಬ್ಬರಿಗೂ ದೃಷ್ಟಿದೋಷ ಚೆನ್ನಾಗಿದ್ದರೆ ಅವರ ಜೀವನ ಸಹ ಸುಖಕರವಾಗಿರುತ್ತದೆ ಎಂಬ ಉದ್ದೇಶದಿಂದ ಈ ಒಂದ ತಪಾಸಣೆಯನ್ನು ಹಮ್ಮಿಕೊಳ್ಳಲಾಗಿದೆ ಪ್ರತಿಯೊಂದು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವಾರದಲ್ಲಿ ಎರಡು ದಿನಗಳು , ದೃಷ್ಟಿದೋಷದ ತೊಂದರೆಗೆ ತಪಾಸಣೆ ಮಾಡಲಾಗುತ್ತದೆ ಹೆಚ್ಚಿನ ಶಸ್ತ್ರಚಿಕಿತ್ಸೆಗೆ ಜಿಲ್ಲಾ ಆಸ್ಪತ್ರೆಯಲ್ಲಿ ಉಚಿತವಾಗಿ ಮಾಡಲಾಗುತ್ತದೆ ಎಂದು ತಿಳಿಸಿದರು. ಡಾಕ್ಟರ್ ದುರ್ಗಾಂಬ, ಆರೋಗ್ಯ ಸುರಕ್ಷಾಧಿಕಾರಿಯಾದ ಗೀತಾ ಎಂ. ಸಮುದಾಯ ಆರೋಗ್ಯ ಅಧಿಕಾರಿಯಾದ ಡಾಕ್ಟರ್ ಚೈತ್ರ, ಡಾ. ರುಕ್ಮಿಣಿ , ಹಾಗೂ ಶುಶ್ರುಷ ಅಧಿಕಾರಿಯಾದ ರೇಷ್ಮಾ, ಮಹೇಶ್, ಇತರರು ಉಪಸ್ಥಿತರಿದ್ದರು.

# ಕಲಾವಿದರನ್ನು ಗೌರವಿಸಬೇಕು

**ಕೋಲಾರ:** ಜಾನಪದ, ಸಂಗೀತ, ಸಾಹಿತ್ಯ ನಮ್ಮ ಜೀವನದಲ್ಲಿ ಮೂರು ಅಂಗಗಳು ಇದ್ದಂತೆ ಅವುಗಳನ್ನು ಉಳಿಸಿ ಬೆಳಸಿಕೊಂಡು ಹೋಗುವುದು ಮತ್ತು ಮುಂದಿನ ಪೀಳಿಗೆಗೆ ಪರಿಚಯಿಸುವುದು ಹಾಗೂ ಎಲ್ಲಾ ಪ್ರಕಾರದ ಕಲಾವಿದರನ್ನು ಗೌರವಿಸುವುದು ನಮ್ಮ ಕರ್ತವ್ಯವೆಂದು ಮಾಗೊಂದಿ ಗೇಟ್ ಬಳಿ ಇರುವ ಶಿವಶನೇಶ್ವರ ದೇವಾಲಯದ ದರ್ಮಾಧಿಕಾರಿಗಳು ಹಾಗೂ ಪೀಠಾಧಿಪತಿ ಶ್ರೀ ಮುನೇಶ್ವರ ಸ್ವಾಮೀಜಿಗಳು ಅಭಿಪ್ರಾಯಪಟ್ಟರು.

ಕರ್ನಾಟಕ ಸರ್ಕಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಹಾಗೂ ಹಂಸನಾದ ಕ್ರೀಡಾ ಮತ್ತು ಸಾಂಸ್ಕೃತಿಕ ಕಲಾ ಸಂಘ ಹುಲಿಮಂಗಲ ಮಾಲೂರು ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಘಟಕ ಯೋಜನೆಯಡಿ ಕೋಲಾರ ಜಿಲ್ಲೆ ಮಾಗೊಂದಿ ಗೇಟಿನ ಶಿವಶನೇಶ್ವರ ದೇವಾಲಯದ ಆವರಣದಲ್ಲಿ ಹಮ್ಮಿಕೊಂಡಿದ್ದ ಕೋಲಾರ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಉತ್ಸವದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಇದರಿಂದ ನಮ್ಮ ಜೀವನದ ಉತ್ತಮವಾದ ಹಾದಿಯನ್ನು ಕಂಡುಕೊಳ್ಳಲು



ಅನುಕೂಲವಾಗುತ್ತದೆ ಇದರಿಂದ ಸಾಹಿತಿಗಳಿಗೆ ಹಾಗೂ ಕಲಾವಿದರಿಗೆ ಸೂಕ್ತ ವೇದಿಕೆ ಕಲ್ಪಿಸುವುದರ ಜೊತೆಗೆ ಎಲೆ ಮರೆಯ ಕಾಯಂತಿರುವ ಇಂತಹ ಯುವ ಕವಿಗಳು ಹಾಗೂ ಕಲಾವಿದರನ್ನು ಮುಖ್ಯ ವಾಹಿನಿಗೆ ತರಬೇಕೆಂದು ಹೇಳಿದರು.

ಹಿಂದೆ ಗುರುಕುಲಗಳಲ್ಲಿ ಇಂತಹ ಸಂಗೀತಾವನ್ನು ಅಭ್ಯಾಸ ಮಾಡುವುದರ ಮುಖಾಂತರ ಸಂಗೀತವನ್ನು ಮುಂದಿನ ಪೀಳಿಗೆಗೆ ಉಳಿಸಿಕೊಂಡು ಬರುತ್ತಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ ಆಧುನಿಕ ಮಾಧ್ಯಮಗಳಿಂದ ಕಲೆಗಳು ಮಾಯವಾಗುತ್ತಿದೆ ಎಂದು ಬೇಸರಿಸಿದರು.

ಇದೆ ಸಂದರ್ಭದಲ್ಲಿ ಶಿವಶನೇಶ್ವರ ದೇವಾಲಯದ ಆವಣದಲ್ಲಿ ನವರಾತ್ರಿ ಉತ್ಸವದ ಪ್ರಯುಕ್ತ ವಿಶೇಷ ಪೂಜಾ ಕೈಂ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಬೆಳ್ಳಿ ರಥದಲ್ಲಿ ದೇವರ ವಿಗಹಗಳನ್ನು ಒಂಭತ್ತು ಸುತ್ತು ದೇವಾಸ್ಥಾನದ ಸುತ್ತಾ ಪ್ರದಕ್ಷಣೆ ಹಾಕಿದರು. ಚಿನ್ನಾಪುರ ಜೆ.ಪಿಳ್ಳಪ್ಪ ಮತ್ತು ತಂಡದವರಿಂದ ತಮಟೆ ವಾದನಗಳೊಂದಿಗೆ ಸಾಗಿತು. ಕಾರ್ಯಕ್ರಮದಲ್ಲಿ ಪಾಕರಹಳ್ಳಿ ಬುಲೆಟ್ ಎಂ.ನಾಗರಾಜ್, ಟ್ರಸ್ಟ್ ಅಧ್ಯಕ್ಷ ಮಂಜುನಾಥ್, ಕಾರ್ಯದರ್ಶಿ, ಗೋಕುಲ್ ಮೇಡಂ, ಬನಹಳ್ಳಿ ವೆಂಕಟೇಶಪ್ಪ, ಮಾಗೇರಿ ವೆಂಕಟೇಶ್ ಮತ್ತಿತರರು ಉಪಸ್ಥಿತರಿದ್ದರು. ಸಂಸ್ಥೆಯ ಅಧ್ಯಕ್ಷ ಹುಲಿಮಂಗಲ ಶಿವು ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ಭಾರತದ ಸಂಸ್ಕೃತಿ ಸಂಪ್ರದಾಯವನ್ನು ಕಾಪಾಡುವುದು ಭಾರತೀಯ ಹೆಣ್ಣು ಮಕ್ಕಳ ಕರ್ತವ್ಯ

**ತುಮಕೂರು:** ಭಾರತೀಯ ಸಂಸ್ಕೃತಿಯ, ಸಂಪ್ರದಾಯವನ್ನು ಕಾಪಾಡುವುದು ಭಾರತೀಯ ಹೆಣ್ಣು ಮಕ್ಕಳ ಕರ್ತವ್ಯ ಭಾರತೀಯ ಸಂಪ್ರದಾಯದಲ್ಲಿ ಹೆಣ್ಣು ಮಕ್ಕಳಿಗೆ ಪ್ರಾಮುಖ್ಯ ನೀಡುವಷ್ಟು ಬಹುಶಃ ಬೇರೆ ಇನ್ನೂ ಯಾವ ಧರ್ಮದಲ್ಲೂ ನೀಡುವುದಿಲ್ಲ ಎನ್ನಿಸುತ್ತದೆ. ಯಾವುದೇ ಪೂಜೆ ಪ್ರಾರಂಭವಾಗಬೇಕಾದರೆ ಹಾಗೂ ಪೂಜೆ ಮುಕ್ತಾಯವಾಗಬೇಕಾದರೆ ಅಲ್ಲಿ ಮನೆಯ ಹೆಣ್ಣು ಮಗಳು ಇರಲೇಬೇಕು. ಸಂಸ್ಕೃತಿಯನ್ನು ಉಳಿಸುವುದು ಬೆಳೆಸುವುದು ಹೆಣ್ಣು ಮಕ್ಕಳ ಕೈಯಲ್ಲಿ ಇರುತ್ತದೆ. ಭಾರತವು ಹೆಣ್ಣು ಮಕ್ಕಳಿಗೆ ಪ್ರಾಧಾನ್ಯತೆ ಕೊಡುವಂತಹ ಸಮಾಜ. ತಾಯಿ ಹೆಂಡತಿ ಅಕ್ಕ ತಂಗಿಯರಿಗೆ ನಮ್ಮ ದೇಶದಲ್ಲಿ ವಿಶೇಷ ಸ್ಥಾನಮಾನವನ್ನು ನೀಡುತ್ತಾರೆ. ನಮ್ಮ ದೇಶದಲ್ಲಿ ಆಚರಿಸುವ ಬಹುತೇಕ ಎಲ್ಲಾ ಹಬ್ಬಗಳು ಮಹಿಳಾ ಆಧಾರಿತವೇ ಆಗಿದೆ. ನಾವು ಕಲಿಯುವ ವಿದ್ಯೆ ದುಡಿಯುವ ಲಕ್ಷ್ಮಿ, ಕುಡಿಯುವ ನೀರು ಬಾಳುವ ಭೂಮಿ ಎಲ್ಲವೂ ಸಹ ಮಾತೆಯರೇ, ಹಾಗಾಗಿ ಪುರುಷ ಸಮಾಜವು ಮಾತೆರಿಗೆ ಹೆಣ್ಣು ಮಕ್ಕಳಿಗೆ ವಿಶೇಷವಾದ ಗೌರವವನ್ನು ನೀಡಬೇಕು ಎಂದು ಅನನ್ಯ ಸಂಸ್ಥೆಯ ಟಸ್ಟಿಯಾದ ಡಾ.ಹೆಚ್.ಹರೀಶ್‌ರವರು ತಿಳಿಸಿದರು. ನಗರದ ವರಾನ ಗ್ಲೋಬಲ್ ಟ್ರಸ್ಟ್‌ನ ಅಂಗಸಂಸ್ಥೆಯಾದ ಅನನ್ಯ ಪಿ.ಯು ಕಾಲೇಜಿನಲ್ಲಿ ನವರಾತ್ರಿಯ ಪ್ರಯುಕ್ತ ಸೆ.15 ರಂದು ಮಂಗಳವಾರ ಬೆಳಗ್ಗೆ 11 ಗಂಟೆಗೆ ಸರಸ್ವತಿ




**ನಗರದ ವರಾನ ಗ್ಲೋಬಲ್ ಟ್ರಸ್ಟ್‌ನ ಅಂಗಸಂಸ್ಥೆಯಾದ ಅನನ್ಯ ಪಿ.ಯು ಕಾಲೇಜಿನಲ್ಲಿ ನವರಾತ್ರಿಯ ಪ್ರಯುಕ್ತ ಸೆ.15 ರಂದು ಬೆಳಿಗ್ಗೆ 11 ಗಂಟೆಗೆ ಸರಸ್ವತಿ ಹಬ್ಬವನ್ನು ಕಾಲೇಜಿನ ಆವರಣದಲ್ಲಿ ಆಚರಿಸಲಾಗಿತ್ತು. ಚಿತ್ರದಲ್ಲಿ ಅನನ್ಯ ಸಂಸ್ಥೆಯ ಟಸ್ಟಿಯಾದ ಡಾ.ಹೆಚ್.ಹರೀಶ್, ಅನನ್ಯ ಪಿ.ಯು. ವಿಜ್ಞಾನ ವಿಭಾಗದ ಮುಖ್ಯಸ್ಥರಾದ ರಂಗನಾಥಪ್ಪ, ಅನನ್ಯ ಪಿಯು ಕಾಲೇಜಿನ ಪ್ರಾಂಶುಪಾಲರಾದ ಆರ್.ಆರ್.ರಘು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.**

ಹಬ್ಬವನ್ನು ಕಾಲೇಜಿನ ಆವರಣದಲ್ಲಿ ಆಚರಿಸಲಾಗಿತ್ತು. ಕಾರ್ಯಕ್ರಮದಲ್ಲಿ ಅನನ್ಯ ಪಿ.ಯು. ವಿಜ್ಞಾನ ವಿಭಾಗದ ಮುಖ್ಯಸ್ಥರಾದ ರಂಗನಾಥಪ್ಪರವರು ಮಾತನಾಡುತ್ತಾ ವಿದ್ಯಾರ್ಥಿಗಳು ಕಷ್ಟಪಟ್ಟು ಓದಬೇಕು, ಓದಿದರೆ ಮಾತ್ರ ಅಧಿಕ ಅಂಕವನ್ನು ಗಳಿಸಲು ಸಾಧ್ಯವಾಗುತ್ತದೆ. ಈ ವಯಸ್ಸಿನಲ್ಲಿ ವಿದ್ಯಾರ್ಥಿಗಳಿಗೆ ಹಲವಾರು ಆಕರ್ಷಣೆಗಳು ಇರುತ್ತದೆ ಆಕರ್ಷಣೆಗಳನ್ನು ಬಿಟ್ಟು ಓದುವ ಕಡೆಗೆ ಗಮನ ಹರಿಸಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಅನನ್ಯ ಪಿಯು ಕಾಲೇಜಿನ ಪ್ರಾಂಶುಪಾಲರಾದ ಆರ್.ಆರ್.ರಘು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ತೋಟಗಾರಿಕೆಇಲಾಖೆಯ ವಿವಿಧ ಯೋಜನೆಗಳಿಗೆ ಅರ್ಜಿಆಹ್ವಾನ

**ಮಂಡ್ಯ:** ಮಂಡ್ಯತೋಟಗಾರಿಕೆ ಇಲಾಖಾ ವತಿಯಿಂದ2024–25 ನೇ ಸಾಲಿನ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಾದಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ, ಕೇಂದ್ರ ಪುರಸ್ಕೃತರಾಷ್ಟ್ರೀಯಖಾದ್ಯತೈಲ ಅಭಿಯಾನ ತಾಳೆಬೆಳೆ ಯೋಜನೆಗಳಿಗೆ ಅರ್ಹರೈತರಿಂದಅರ್ಜಿಆಹ್ವಾನಿಸಲಾಗಿದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ನೀರಾವರಿಕಾರ್ಯಕ್ರಮದಲ್ಲಿಕಾಫಿ, ಟೀ, ರಬ್ಬರ್, ಅಡಿಕೆ ಬೆಳೆ ಹೊರತುಪಡಿಸಿ ಉಳಿದ ಎಲ್ಲಾತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿಘಟಕ ಅಳವಡಿಕೆಗೆ ಒಂದುಕುಟುಂಬಕ್ಕೆಒಟ್ಟಾರೆ 5 ಹೆಕ್ಟೇರ್ ಪ್ರದೇಶಕ್ಕೆ ಮಿತಿಗೊಳಿಸಿ ಸಹಾಯಧನಕಲ್ಪಿಸಲಾಗುತ್ತಿದೆ.ಈ ಕಾರ್ಯಕ್ರಮದಡಿ ಮೊದಲ 2 ಹೆಕ್ಟೇರ್ ಗೆ ಎಲ್ಲಾ ವರ್ಗದರೈತರಿಗೆ ಶೇ.90 ರ?ಟ್ಟು ಸಹಾಯಧನಕಲ್ಪಿಸಲಾಗುವುದು ಹಾಗೂ ಉಳಿದ 3 ಹೆಕ್ಟೇರ್ ಗೆ ಶೇ.45 ಸಹಾಯಧನಕಲ್ಪಿಸಲಾಗುವುದು. ಕೇಂದ್ರ ಪುರಸ್ಕೃತರಾಷ್ಟ್ರೀಯಖಾದ್ಯತೈಲ ಅಭಿಯಾನ ತಾಳೆಬೆಳೆಯೋಜನೆಯಡಿ ತಾಳೆಬೆಳೆಹೊಸಪ್ರದೇಶವಿಸ್ತರಣೆ ಕೈಗೊಳ್ಳುವರೈತರಿಗೆಪ್ರದೇಶವಿಸ್ತರಣೆಗೆ, ಕೊಳವೆಬಾವಿಕೊರೆಸಲು, ಟ್ರ್ಯಾಕ್ಟರ್‌ಟ್ರಾಲಿಖರೀದಿಸಲು ಮತ್ತುಡೀಸಲ್ ಪಂಪ್ ಸೆಟ್‌ಖರೀದಿಸಲು ಸಹಾಯಧನವನ್ನುಎಲ್ಲಾ ವಗ'ದರೈತರಿಗೆಕಲ್ಪಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮಂಡ್ಯಜಿಲ್ಲೆಯತೋಟಗಾರಿಕೆ ಇಲಾಖೆ ಕಚೇರಿ ತಾಲ್ಲೂಕುಗಳಾದ ಕೆ.ಆರ್.ಪೇಟೆದೂ.ಸಂ: 08237–262540, ಮದ್ದೂರು–08232–233450, ಮಳವಳ್ಳಿ–08230–242301, ಮಂಡ್ಯ– 08232–225735, ನಾಗಮಂಗಲ– 08234–286160, ಪಾಂಡವಪುರ–08236–255055, ಶ್ರೀರಂಗಪಟ್ಟಣ– 08236–253205 ಅನ್ನು ಸಂಪರ್ಕಿಸಬಹುದುಎಂದು ಮಂಡ್ಯಜಿಲ್ಲಾ ಪಂಚಾಯತ್ ತೋಟಗಾರಿಕೆಉಪನಿರ್ದೇಶಕರು ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಮಂಡ್ಯ:** ಮೆಟ್ರಿಕ್ ನಂತರದ ಕೋರ್ಸ್ ಗಳಾದ ಪಿಯುಸಿ ಮತ್ತು ಸಮನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸುಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ – 1 ರ ಅಲೆಮಾರಿ/ ಅರೆಅಲೆಮಾರಿ ವಿದ್ಯಾರ್ಥಿಗಳಿಂದ 2024–25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ(ಊಟ ಮತ್ತು ವಸತಿ ಸಹಾಯ ಯೋಜನೆ) ಸೌಲಭ್ಯಕ್ಕಾಗಿ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅಕ್ಟೋಬರ್ 15 ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿತ್ತು. ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಂದ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಮನವಿ ಮಾಡಿಕೊಂಡಿರುತ್ತಾರೆ. ಆದ ಕಾರಣ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ಅಕ್ಟೋಬರ್ 31 ರವರೆಗೆ ವಿಸ್ತರಿಸಲಾಗಿದೆ ಹೆಚ್ಚಿನ ಮಾಹಿತಿಗಾಗಿ ದೂ. ಸಂ.8050770005 ನ್ನು ಸಂಪರ್ಕಿಸಬಹುದಾಗಿದೆ ಎಂದು ಮಂಡ್ಯ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

## ರೈತರಿಗೆ ಮೂರು ದಿನಗಳ ತರಬೇತಿ ಕಾರ್ಯಕ್ರಮ

**ಮೈಸೂರು:** ನಾಗನಹಳ್ಳಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಅಕ್ಟೋಬರ್ 23 ರಿಂದ 25 ರವರೆಗೆ ''ನೈಸರ್ಗಿಕ/ ಸಾವಯವ ಕೃಷಿಯಲ್ಲಿ ಸಮಗ್ರ ಕೃಷಿ ಪದ್ಧತಿ'' ಎಂಬ ವಿ?ಯದ ಬಗ್ಗೆ ರೈತ/ ರೈತ ಮಹಿಳೆಯರಿಗೆ ಮೂರು ದಿನಗಳ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ತರಬೇತಿಯಲ್ಲಿ ಭಾಗವಹಿಸುವ ರೈತ/ರೈತಮಹಿಳೆಯರಿಗೆ ಊಟ ಮತ್ತು ವಸತಿ ವ್ಯವಸ್ಥೆಯನ್ನು ಒದಗಿಸಲಾಗುವುದು.



ಆಸಕ್ತ ರೈತ/ ರೈತಮಹಿಳೆಯರು ತಮ್ಮ ಹೆಸರನ್ನು ಈ ತರಬೇತಿ ಕೇಂದ್ರದ ಕೃಷಿ ಅಧಿಕಾರಿಯವರ ದೂ:ಸಂ: 8277933136 ಗೆ ಕರೆಮಾಡಿ ತಮ್ಮ ಹೆಸರುಗಳನ್ನು ನೋಂದಾಯಿಸತಕ್ಕದ್ದು. ರೈತರು ತರಬೇತಿಗೆ ಬರುವಾಗ ಫ್ರೂಟ್ ಐಡಿ ನಂಬರ್, ರೇಷನ್ ಕಾರ್ಡ್, ಆಧಾರ್ ಮತ್ತು ಬ್ಯಾಂಕ್ ಪಾಸ್ ಪುಸ್ತಕ ಜೆರಾಕ್ಸ್ ಪ್ರತಿಗಳನ್ನು ತಪ್ಪದೇ ತರುವುದು. ಮೈಸೂರು ಜಿಲ್ಲೆಯ 45 ರೈತ/ ರೈತಮಹಿಳೆಯರಿಗೆ ಮಾತ್ರ ಅವಕಾಶವಿದ್ದು, ಮೊದಲು ನೋಂದಣಿ ಮಾಡಿದವರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ನಾಗನಹಳ್ಳಿ ಕೃಷಿ ತರಬೇತಿ ಕೇಂದ್ರದ ಉಪ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

**ದಸರಾ ಫಲಪುಷ್ಪ ಪ್ರದರ್ಶನ:**
ವಿಶ್ವವಿದ್ಯಾನಿಲಯದ ತೋಟಗಾರಿಕಾ ವಿಭಾಗಕ್ಕೆ ಅತ್ಯುತ್ತಮ ಬಹುಮಾನಮೈಸೂರು, ತೋಟಗಾರಿಕೆ ಇಲಾಖೆ ಹಾಗೂ ತೋಟಗಾರಿಕೆ ಸಂಘದವರು ಏರ್ಪಡಿಸಿದ್ದ, 2024 ರ ದಸರಾ ಫಲಪುಷ್ಪ ಪ್ರದರ್ಶನದಲ್ಲಿ ಮೈಸೂರು ವಿಶ್ವವಿದ್ಯಾನಿಲಯ ತೋಟಗಾರಿಕಾ ವಿಭಾಗವು ಭಾಗವಹಿಸಿ ಅತ್ಯುತ್ತಮ ಬಹುಮಾನವನ್ನು ಪಡೆದಿದ್ದುಕೊಂಡಿದ್ದು, ಕುಲಪತಿಗಳು ಮತ್ತು ಕುಲಸಚಿವರ ನಿವಾಸದ ಅಲಂಕಾರಿಕ ತೋಟಗಳ ಸ್ಪರ್ಧೆಗಳಲ್ಲಿ ಪ್ರಥಮ ಬಹುಮಾನವನ್ನು ಪಡೆದಿರುತ್ತದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ತೋಟಗಾರಿಕೆ ವಿಭಾಗದ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಏಕಮುಖ ವಾಹನ ಸಂಚಾರ ವ್ಯವಸ್ಥೆಯ ಅವಧಿ ವಿಸ್ತರಣೆ

**ಮೈಸೂರು:** ದಸರಾ 2024 ಮಹೋತ್ಸವದ ದೀಪಾಲಂಕಾರವನ್ನು ಅಕ್ಟೋಬರ್ 23 ರವರೆಗೆ ವಿಸ್ತರಿಸಿರುವುದರಿಂದ ಮೈಸೂರು ನಗರದ ಅರಮನೆಯ ಸುತ್ತಲಿನ ರಸ್ತೆಗಳಲ್ಲಿ ಸುಗಮ ಸಂಚಾರ ವ್ಯವಸ್ಥೆಯನ್ನು ಕಲ್ಪಿಸುವ ಸಲುವಾಗಿ ದಿನಾಂಕ: 01.10.2024 ರಂದು ಹೊರಡಿಸಿದ ಅಧಿಸೂಚನೆಯ ಭಾಗ–1 ''ಏಕಮುಖ ವಾಹನ ಸಂಚಾರ ವ್ಯವಸ್ಥೆ'' ಮತ್ತು ಭಾಗ–2 ''ವಾಹನಗಳ ನಿಲುಗಡೆ ನಿಷೇಧ'' ವನ್ನು ಭಾರತೀಯ ವಾಹನ ಕಾಯ್ದೆ 1988 ಕಲಂ 115 ಹಾಗೂ ಸೆಕ್ಷನ್(3) ಆಫ್ ಕರ್ನಾಟಕ ಟ್ರಾಫಿಕ್ ಕಂಟ್ರೋಲ್ ಕಾಯ್ದೆ 1960 ರಲ್ಲಿ ದತ್ತವಾಗಿರುವ ಅಧಿಕಾರದಂತೆ ಅಕ್ಟೋಬರ್ 23 ರವರೆಗೆ ವಿಸ್ತರಿಸಿ ಅಧಿಸೂಚನೆ ಹೊರಡಿಸಲಾಗಿದೆ. 1. ಅರಮನೆಯ ಸುತ್ತಲಿನ ರಸ್ತೆಗಳಲ್ಲಿ : ಜಯಚಾಮರಾಜ ಒಡೆಯರ್ ವೃತ್ತ ಕೆ.ಆರ್.ವೃತ್ತ – ನ್ಯೂ ಸಯ್ಯಾಜಿರಾವ್ ರಸ್ತೆ ರಾಚಯ್ಯ ವೃತ್ತ– ಬಸವೇಶ್ವರ ವೃತ್ತ– ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ – ಕುಸ್ತಿ ಅಖಾಡ ಜಂಕ್ಷನ್– ಜಯಚಾಮರಾಜ ಒಡೆಯರ್ ವೃತ್ತ

ಈ ರಸ್ತೆಗಳಲ್ಲಿ ಅರಮನೆಯನ್ನು ಮಧ್ಯ ಬಿಂದುವನ್ನಾಗಿ ಪರಿಗಣಿಸಿ ಗಡಿಯಾರದ ಮುಳ್ಳು ಸುತ್ತುವ ದಿಕ್ಕಿಗೆ ವಿರುದ್ಧ ದಿಕ್ಕಿನಲ್ಲಿ ವಾಹನಗಳು ಸಂಚರಿಸಲು ಅವಕಾಶ ನೀಡಿರುತ್ತದೆ. ಈ ರಸ್ತೆಗಳಲ್ಲಿ ಗಡಿಯಾರದ ಮುಳ್ಳು ಸುತ್ತುವ ದಿಕ್ಕಿನಲ್ಲಿ ವಾಹನಗಳ ಸಂಚಾರವನ್ನು ನಿರ್ಬಂಧಿಸಲಾಗಿದೆ.

2. ಕೆ.ಆರ್.ವೃತ್ತ–ಆಯುರ್ವೇದಿಕ್ ವೃತ್ತ–ನೆಹರು ವೃತ್ತ– ಚಾಮರಾಜ ಒಡೆಯರ್ ವೃತ್ತ–ಕೆ.ಆರ್.ವೃತ್ತ : ಕೆ.ಆರ್. ವೃತ್ತ – ಸಯ್ಯಾಜಿರಾವ್ ರಸ್ತೆ– ಬಾಟಾ ಜಂಕ್ಷನ್ ಆಯುರ್ವೇದಿಕ್ ವೃತ್ತ – ಇರ್ವಿನ್ ರಸ್ತೆ – ನೆಹರು ವೃತ್ತ – ಅಶೋಕ ರಸ್ತೆ – ಮಹಾವೀರ ವೃತ್ತ. ಈ ರಸ್ತೆಗಳ ಮಧ್ಯ ಇರುವ ಪ್ರದೇಶವನ್ನು ಮಧ್ಯ ಬಿಂದುವನ್ನಾಗಿ ಪರಿಗಣಿಸಿ ಗಡಿಯಾರದ ಮುಳ್ಳು ಸುತ್ತುವ ದಿಕ್ಕಿಗೆವಾಹನಗಳು ಸಂಚರಿಸಲು ಅವಕಾಶ ನೀಡಿರುತ್ತದೆ. ಗಡಿಯಾರದ ಮುಳ್ಳು ಸುತ್ತುವ ವಿರುದ್ಧ ದಿಕ್ಕಿನಲ್ಲಿ ಸಂಚರಿಸದಂತೆ ನಿರ್ಬಂಧಿಸಲಾಗಿದೆ.

3. ಓಲ್ಡ್ ಬ್ಯಾಂಕ್ ರಸ್ತೆಯಲ್ಲಿ ಗಾಂಧಿ ವೃತ್ತದಿಂದ ಎಸ್.ಆರ್.ರಸ್ತೆ ಜಂಕ್ಷನ್‌ವರೆಗೆ: ಗಾಂಧಿ ವೃತ್ತದಿಂದ ಎಸ್.ಆರ್.ರಸ್ತೆ ಜಂಕ್ಷನ್ ವರೆಗೆ ಪೂರ್ವದಿಂದ ಪಶ್ಚಿಮಕ್ಕೆ ವಾಹನಗಳ ಏಕಮುಖ ಸಂಚಾರಕ್ಕೆ ಅವಕಾಶ ನೀಡಿರುತ್ತದೆ. ಎಸ್.ಆರ್.ರಸ್ತೆ ಜಂಕ್ಷನ್‌ನಿಂದ ಗಾಂಧಿ ವೃತ್ತದವರೆಗೆ ಪಶ್ಚಿಮದಿಂದ ಪೂರ್ವಕ್ಕೆ ವಾಹನಗಳ ಸಂಚಾರವನ್ನು ನಿರ್ಬಂಧಿಸಲಾಗಿದೆ.

4. ಅಶೋಕ ರಸ್ತೆ–ದಾವೂದ್‌ಖಾನ್ ರಸ್ತೆ ಜಂಕ್ಷನ್ ನಿಂದ ನೆಹರು ವೃತ್ತದವರೆಗೆ ಅಶೋಕ ರಸ್ತೆಯಲ್ಲಿ – ದಾವೂದ್‌ಖಾನ್ ರಸ್ತೆ ಜಂಕ್ಷನ್ (ಗಾಂಧಿ ಮೆಡಿಕಲ್ಸ್) ಇಂದ ನೆಹರು ಸರ್ಕಲ್‌ವರೆಗೆ ದಕ್ಷಿಣಕ್ಕೆ ವಾಹನಗಳ ಏಕಮುಖ ಸಂಚಾರಕ್ಕೆ ಅವಕಾಶ ನೀಡಿರುತ್ತದೆ. 5. ಬನುಮಯ್ಯ ರಸ್ತೆಯಲ್ಲಿ ಚಾಮರಾಜ ಜೋಡಿ ರಸ್ತೆ ಜಂಕ್ಷನ್‌ನಿಂದ ಬನುಮಯ್ಯ ಚೌಕದ ವರೆಗೆ : ಚಾಮರಾಜ ಜೋಡಿ ರಸ್ತೆಯಿಂದ ಬನುಮಯ್ಯ ಚೌಕದವರೆಗೆ ಉತ್ತರಕ್ಕೆ ವಾಹನಗಳ ಏಕಮುಖ ಸಂಚಾರಕ್ಕೆ ಅವಕಾಶ ನೀಡಿರುತ್ತದೆ. ಬನುಮಯ್ಯ ಚೌಕದಿಂದ ಚಾಮರಾಜ ಜೋಡಿ ರಸ್ತೆ ವರೆಗೆ ಉತ್ತರದಿಂದ ದಕ್ಷಿಣಕ್ಕೆ ವಾಹನಗಳ ಸಂಚಾರವನ್ನು ನಿರ್ಬಂಧಿಸಲಾಗಿದೆ.



6. ತ್ಯಾಗರಾಜ ರಸ್ತೆಯಲ್ಲಿ ಎನ್. ಮಾಧವರಾವ್ ವೃತ್ತ (ಅಗ್ರಹಾರ ವೃತ್ತ) ದಿಂದ ಚಾಮರಾಜ ಜೋಡಿ ರಸ್ತೆ ಜಂಕ್ಷನ್‌ವರೆಗೆ :ಎನ್. ಮಾಧವರಾವ್‌ವೃತ್ತ (ಅಗ್ರಹಾರ ವೃತ್ತ) ದಿಂದ ಉತ್ತರಕ್ಕೆ ತ್ಯಾಗರಾಜ ರಸ್ತೆಯಲ್ಲಿ ಚಾಮರಾಜ ಜೋಡಿ ರಸ್ತೆಯವರೆಗೆ ವಾಹನಗಳ ಏಕಮುಖ ಸಂಚಾರಕ್ಕೆ ಅವಕಾಶ ನೀಡಿರುತ್ತದೆ. ಚಾಮರಾಜ ಜೋಡಿ ರಸ್ತೆಯಿಂದ ತ್ಯಾಗರಾಜ ರಸ್ತೆಯಲ್ಲಿ ಎನ್.ಮಾಧವರಾವ್ ವೃತ್ತ ದವರೆಗೆ ದಕ್ಷಿಣಕ್ಕೆ ವಾಹನಗಳ ಸಂಚಾರವನ್ನು ನಿರ್ಬಂಧಿಸಲಾಗಿದೆ.

7.ಚಂದ್ರಗುಪ್ತ ರಸ್ತೆಯಲ್ಲಿ ಬಿ.ಎನ್. ರಸ್ತೆ ಜಂಕ್ಷನ್‌ನಿಂದ ಅಶೋಕ ರಸ್ತೆ ಜಂಕ್ಷನ್ ವರೆಗೆ : ಚಂದ್ರಗುಪ್ತ ರಸ್ತೆಯಲ್ಲಿ ಬಿ.ಎನ್. ರಸ್ತೆ ಜಂಕ್ಷನ್‌ನಿಂದ ಅಶೋಕ ರಸ್ತೆ ಜಂಕ್ಷನ್ ವರೆಗೆ ಹಾಲಿ ಏಕಮುಖ ಸಂಚಾರ ವ್ಯವಸ್ಥೆ ಜಾರಿಯಲ್ಲಿದ್ದು, ದಿನಾಂಕ 13.10.2024 ರಿಂದ 23.10.2024 ರವರೆಗೆ ಏಕಮುಖ ಸಂಚಾರ ವ್ಯವಸ್ಥೆಯನ್ನು ತಾತ್ಕಲಿಕವಾಗಿ ರದ್ದುಗೊಳಿಸಿ ಅಶೋಕ ರಸ್ತೆಯಿಂದ ಬಿ.ಎನ್.ರಸ್ತೆ ಜಂಕ್ಷನ್ ವರೆಗೆ ಪಶ್ಚಿಮದಿಂದ ಪೂರ್ವ ದಿಕ್ಕಿಗೆ ಏಕಮುಖ ಸಂಚಾರ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ.

**ಕೆ.ಎಸ್.ಆರ್.ಟಿ.ಸಿ ಮತ್ತು ನಗರ ಸಾರಿಗೆ ಬಸ್ ಗಳು ಸಂಚರಿಸುವ ಮಾರ್ಗ ಮತ್ತು ತಾತ್ಕಾಲಿಕ ನಿಲುಗಡೆ ವ್ಯವಸ್ಥೆಯ ಅವಧಿ ವಿಸ್ತರಣೆ:** ದಸರಾ 2024 ಮಹೋತ್ಸವದ ದೀಪಾಲಂಕಾರವನ್ನು ಅಕ್ಟೋಬರ್ 23 ರವರೆಗೆ ವಿಸ್ತರಿಸಿರುವುದರಿಂದ ಮೈಸೂರು ನಗರದ ಅರಮನೆಯ ಸುತ್ತಲಿನ ರಸ್ತೆಗಳಲ್ಲಿ ಸುಗಮ ಸಂಚಾರ ವ್ಯವಸ್ಥೆಯನ್ನು ಕಲ್ಪಿಸುವ ಸಲುವಾಗಿ ದಿನಾಂಕ: 01.10.2024 ರಂದು ಹೊರಡಿಸಿದ ಅಧಿಸೂಚನೆಯ ಭಾಗ–1 ಭಾಗ–2 ರಲ್ಲಿನ ಕೆ.ಎಸ್.ಆರ್.ಟಿ.ಸಿ ಮತ್ತು ನಗರ ಸಾರಿಗೆ ಬಸ್‌ಗಳು ಸಂಚರಿಸುವ ಮಾರ್ಗ ಮತ್ತು ತಾತ್ಕಾಲಿಕ ನಿಲುಗಡೆ ವ್ಯವಸ್ಥೆಯ ಅವಧಿ ವಿಸ್ತರಿಸಲಾಗಿದೆ.

1.ಮೈಸೂರು–ಬೆಂಗಳೂರು ರಸ್ತೆ ಮೂಲಕ ನಗರಕ್ಕೆ ಆಗಮಿಸುವ ಮತ್ತು ನಿರ್ಗಮಿಸುವ ಬಸ್ಸುಗಳ ಮಾರ್ಗ:ಆಗಮನ: ಬೆಂಗಳೂರು ರಸ್ತೆ– ನಾಡಪ್ರಭು ಕೆಂಪೇಗೌಡ ವೃತ್ತ– ಎಡ ತಿರುವು– ರಿಂಗ್ ರಸ್ತೆ ಮೂಲಕ ಮಹದೇವಪುರ ರಿಂಗ್ ರಸ್ತೆ ಜಂಕ್ಷನ್ (ಸಾತಗಳ್ಳಿ ಬಸ್ ಡಿಪೋ)– ಮಹದೇವಪುರ ರಸ್ತೆ– ನೆಕ್ಸಸ್ ಮಾಲ್ ಜಂಕ್ಷನ್– ಕಾಳಿಕಾಂಬ ದೇವಸ್ಥಾನ ರಸ್ತೆ ಜಂಕ್ಷನ್– ಸರ್ಕಾರಿ ಭವನದ ಉತ್ತರ ದ್ವಾರದ ಜಂಕ್ಷನ್– ನವಾಬ್ ಹೈದರಾಲಿ ಖಾನ್ ವೃತ್ತ (ಫೈವ್ ಲೈಟ್ ಸರ್ಕಲ್) – ಬಿಎನ್ ರಸ್ತೆ– ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ.

2.ಮಡಿಕೇರಿ, ಹಾಸನ ಕಡೆಯಿಂದ ಹುಣಸೂರು ರಸ್ತೆ ಮೂಲಕ ಮೈಸೂರು ನಗರಕ್ಕೆ ಆಗಮಿಸುವ , ಹೆಚ್.ಡಿ. ಕೋಟೆ ರಸ್ತೆ ಮೂಲಕ ನಗರಕ್ಕೆ ಆಗಮಿಸುವ , ನಂಜನಗೂಡು, ಚಾಮರಾಜನಗರ ಮತ್ತು ಗುಂಡ್ಲುಪೇಟೆ ಕಡೆಯಿಂದ ನಂಜನಗೂಡು ರಸ್ತೆ ಮೂಲಕ ನಗರಕ್ಕೆ ಆಗಮಿಸುವ ನಿರ್ಗಮಿಸುವ ಬಸ್ಸುಗಳ ಮಾರ್ಗ, ಟಿ.ನರಸೀಪುರ ರಸ್ತೆ ಕಡೆಯಿಂದ ನಗರಕ್ಕೆ ಆಗಮಿಸುವ ಬಸ್ಸುಗಳ ಮಾರ್ಗ, ಬನ್ನೂರು ಮತ್ತು ಮಳವಳ್ಳಿ ರಸ್ತೆ ಕಡೆಯಿಂದ ನಗರಕ್ಕೆ ಆಗಮಿಸುವ ಬಸ್ಸುಗಳ ಮಾರ್ಗದಲ್ಲಿ ಬದಲಾವಣೆ ಮಾಡಲಾಗಿದೆ.

# ಜಾತಿ ಜನಗಣತಿ ವರದಿಯನ್ನು ಕೂಡಲೇ ಜಾರಿಗೊಳಿಸಿ

**ಕೋಲಾರ:** ರಾಜ್ಯದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಎಲ್ಲಾ ಸಮುದಾಯಗಳು ಮುಂದೆ ಬರುವ ಉದ್ದೇಶದಿಂದ ಜಾತಿ ಜನಗಣತಿ ವರದಿಯನ್ನು ಕೂಡಲೇ ಜಾರಿಗೊಳಿಸಲು ಒತ್ತಾಯಿಸಿ ಕೋಲಾರ ಜಿಲ್ಲಾ ಕುರುಬರ ಸಂಘದ ವತಿಯಿಂದ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.



ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ತಂಬಿಹಳ್ಳಿ ಟಿ.ವಿ.ಮುನಿಯಪ್ಪ ಮಾತನಾಡಿ, ರಾಜ್ಯದ ಎಲ್ಲಾ ಜಾತಿಗಳ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ಅಧ್ಯಯನ ನಡೆಸಿ ತಯಾರಿಸಲಾಗಿರುವ ಸಮೀಕ್ಷಾ ವರದಿಯನ್ನು ಜಾರಿಗೊಳಿಸಲು ರಾಜ್ಯ ಸರ್ಕಾರ ಮೀನಾಮೇಷ ಎಣಿಸುವ ಅಗತ್ಯವಿಲ್ಲ. ಸುಮಾರು 159 ಕೋಟಿ ರೂಗಳನ್ನು ಖರ್ಚು ಮಾಡಿ ತಯಾರಿಸಿರುವ ಈ ವರದಿಯು ತಕ್ಷಣ ಫಲಪ್ರದ ಆಗಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ 12ನೇ ಶತಮಾನದಲ್ಲೇ ಸಮಸಮಾಜವನ್ನು ಪ್ರತಿಪಾದಿಸಿದ ರಾಜ್ಯ. ಇಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಕಾಲದಲ್ಲಿ ಮೈಸೂರು ಸಂಸ್ಥಾನದಲ್ಲಿ ಮೀಸಲಾತಿ ಜಾರಿ ಮಾಡಲಾಗಿತ್ತು, ದಿವಂಗತಿ ದೇವರಾಜ ಅರಸು ಅವರು ಹಾಯನೂರು ಆಯೋಗ ರಚಿಸಿ ಹಿಂದುಳಿದ ವರ್ಗಗಳ ಅಧ್ಯಯನಕ್ಕೆ ಮುನ್ನುಡಿ ಬರೆದರು. ಮಾಜಿ ಮುಖ್ಯಮಂತ್ರಿ ಎಂ. ವೀರಪ್ಪ ಮೊಯ್ಲಿ ಅವರು ಮೀಸಲಾತಿ ಮಿತಿಯನ್ನು ಶೇಕಡಾ 73ಕ್ಕೆ ಏರಿಸುವ ಪ್ರಯತ್ನ ಮಾಡಿದ್ದರು. ಜಾತಿ ಜನಗಣತಿಯ ವರದಿ ಬಂದರೆ ಜಾತಿಗಳ ವಸ್ತಿಸ್ಥಿತಿ ತಿಳಿಯಲಿದೆ. ಅದಕ್ಕೆ ಪೂರಕವಾಗಿ ಸರ್ಕಾರಗಳು ಕಾರ್ಯಕ್ರಮಗಳನ್ನು ರೂಪಿಸಬಹುದಾಗಿದೆ. ಈಗ ರಾಜ್ಯದ ಸುಮಾರು ಆರೂವರೆ ಕೋಟಿ ಜನಸಂಖ್ಯೆಯ ಅಧ್ಯಯನ ವಾಗಿರುವುದರಿಂದ ಜಾತಿ ಜನಗಣತಿಯನ್ನು ಸರ್ಕಾರ ಒಪ್ಪಿಕೊಳ್ಳುವುದರಿಂದ ಎಲ್ಲಾ ಜಾತಿಗಳಿಗೂ ಒಂದಲ್ಲ ಒಂದು ರಿತಿಯಲ್ಲಿ ಅನಕೂಲವಾಗಲಿದೆ. ಹಾಗಾಗಿ ಎಲ್ಲಾ ಜಾತಿಗಳು ಕೂಡ ಜಾತಿ ಜನಗಣತಿ ವರದಿ ಬಿಡುಗಡೆಗೊಳಿಸಬೇಕೆಂದು ಮನವಿ ಮಾಡುತ್ತೇವೆ ಮೀಸಲಾತಿ ಪರಿಷ್ಕರಣೆ, ಜಾತಿಗಳನ್ನು ಹೊಸ ವರ್ಗಕ್ಕೆ ಸೇರಿಸುವುದು ಅಥವಾ ಕೈಬಿಡುವುದು ಎಲ್ಲಕ್ಕೂ ಸುಪ್ರೀಂ ಕೋರ್ಟ್ ಯಾವುದಾದರೂ ಸಾಂವಿಧಾನಿಕ ಸ್ಥಾನಮಾನ ಇರುವ ಆಯೋಗದ ದತ್ತಾಂಶವನ್ನು ಕೇಳುತ್ತದೆ ಎಂದರು.

ಇದು ಮಂಡಲ್ ವರದಿ ಅನುಷ್ಠಾನವನ್ನು ಪ್ರಶ್ನಿಸಿದ್ದ ಅರ್ಜಿಯಿಂದ ಹಿಡಿದು ಹಲವಾರು ಪ್ರಕರಣಗಳಲ್ಲಿ ಕಂಡುಬಂದಿದೆ. ಆದುದರಿಂದ ಜಾತಿಗಳ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ಅಧ್ಯಯನ ನಡೆಸಿ ತಯಾರಿಸಲಾಗಿರುವ ಸಮೀಕ್ಷಾ ವರದಿಯನ್ನು ರಾಜ್ಯ ಸರ್ಕಾರ ಒಪ್ಪಿಕೊಂಡು ಬಿಡುಗಡೆ ಮಾಡಬೇಕಾಗಿರುವುದು ಅತ್ಯಾವಶ್ಯಕವಾಗಿದೆ.

ಬಡವರು, ರೈತರು, ಮಹಿಳೆಯರು, ದಲಿತರು, ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗದವರ ಬಗ್ಗೆ ಅಪಾರವಾದ ಕಾಳಜಿ ಇರುವ ಸದಾ ಸಾಮಾಜಿಕ ನ್ಯಾಯದ ಪರವಿರುವ ಸಿದ್ದರಾಮಯ್ಯರವರು ಮುಖ್ಯಮಂತ್ರಿಯಾಗಿರುವುದರಿಂದ ಅವರು ರಾಜ್ಯದ ಏಳು ಕೋಟಿ ಜನರಿಗೂ ಅನುಕೂಲ ಆಗುವಂತಹ ಜಾತಿ ಜನಗಣತಿ ವರದಿಯನ್ನು ಒಪ್ಪಿ ಬಿಡುಗಡೆ ಮಾಡಬೇಕು. ಕಾಂಗ್ರೆಸ್ ಪಕ್ಷ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಜಾತಿ ಜನಗಣತಿ ನಡೆಸುವುದಾಗಿ ವಾಗ್ದಾನ ನೀಡಿತ್ತು ಎನ್ನುವುದನ್ನು ಮರೆಯಬಾರದು, ಕೊಟ್ಟ ಮಾತಿನಂತೆ ಈಗ ಜಾತಿ ಜನಗಣತಿ ವರದಿಯನ್ನು ಒಪ್ಪಿ ಬಿಡುಗಡೆ ಮಾಡಿ ನಾವು ನುಡಿದಂತೆ ನುಡಿಯುವವರು' ಎನ್ನುವುದನ್ನು ಸಾಬೀತು ಮಾಡಬೇಕಾಗಿದೆ.

ಅಕ್ಟೋಬರ್ 25 ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಜಾತಿ ಜನಗಣತಿ ವರದಿಯನ್ನು ಮಂಡಿಸಿದಾಗ ಕೆಲವರು ಆಕ್ಷೇಪ ಎತ್ತಿ ಅದನ್ನು ಒಪ್ಪಬೇಕೋ ಬೇಡವೋ ಎಂದು ನಿರ್ಧರಿಸುವ ಅಭಿಪ್ರಾಯ ಬಿಡುಗಡೆಗಾಗಿ ಒತ್ತಾಯಿಸುತ್ತೇವೆ. ಸಂಪುಟ ಸಭೆಯ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಜಾತಿ ಜನಗಣತಿ ವರದಿಯನ್ನು ಒಪ್ಪಿ ಬಿಡುಗಡೆ ಮಾಡಬೇಕೆಂದು ಆಗ್ರಹಿಸಿದ್ದಾರೆ.

ನಿಯೋಗದಲ್ಲಿ ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ತಂಬಿಹಳ್ಳಿ ಟಿ.ವಿ.ಮುನಿಯಪ್ಪ, ಕಾರ್ಯಾಧ್ಯಕ್ಷ ಜೆ.ಕೆ.ಜಯರಾಮ್, ಹಾಸ್ಟೆಲ್ ಸಮಿತಿ ಅಧ್ಯಕ್ಷ ಡಿ.ಮುನಿಯಪ್ಪ, ನಗರ ಘಟಕದ ಅಧ್ಯಕ್ಷ ಕುರಿಗಳ ರಮೇಶ್, ಖಜಾಂಚಿ ಜಂಬಾಪುರ ವೆಂಕಟರಾಮ್, ನಿರ್ದೇಶಕಿ ಸರಸ್ವತಮ್ಮ, ಉಪಾಧ್ಯಕ್ಷರುಗಳಾದ ಪರಮೇಶ್, ಬೆಗ್ಲಿ ಶ್ರೀನಿವಾಸ್ ಇನ್ನಿತರೆ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

# ದೌರ್ಜನ್ಯ ತಡೆಗಾಗಿ ಗ್ರಾಮೀಣ ಭಾಗದಲ್ಲಿ ವ್ಯಾಪಕ ಅರಿವು ಮೂಡಿಸಿ

**ಚಾಮರಾಜನಗರ:** ದೌರ್ಜನ್ಯ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಗ್ರಾಮೀಣ ಭಾಗದಲ್ಲಿ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ತಡೆ ಪ್ರತಿಬಂಧಕ ಕಾಯ್ದೆಯ ಬಗ್ಗೆ ವ್ಯಾಪಕ ಅರಿವು ಮೂಡಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ಪ್ರಕರಣಗಳ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಜನರ ಮೇಲೆ ನಿರಂತರವಾಗಿ ದೌರ್ಜನ್ಯ ಪ್ರಕರಣಗಳು ಜರುಗುತ್ತಿವೆ. ಅದರಲ್ಲೂ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಾಗಿ ನಡೆಯುತ್ತಿರುವ ದೌರ್ಜನ್ಯ ಪ್ರಕರಣಗಳನ್ನು ತಡೆಯಲು ದೌರ್ಜನ್ಯ ತಡೆ ನಿಯಂತ್ರಣ ಕಾಯ್ದೆ ಕುರಿತ ವಿಚಾರಸಂಕಿರಣ, ಕಾರ್ಯಾಗಾರಗಳು, ಕಲಾವಿದರಿಂದ ಬೀದಿನಾಟಕ ಏರ್ಪಡಿಸುವ ಮೂಲಕ ಜನಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚಿಸಿದರು.

ಜಿಲ್ಲೆಯಲ್ಲಿ 2024ರ ಜನವರಿಯಿಂದ ಅಕ್ಟೋಬರ್ 9ರವರೆಗೆ ಒಟ್ಟು 29 ದೌರ್ಜನ್ಯ ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 20 ಪ್ರಕರಣಗಳನ್ನು ಇತ್ಯರ್ಥಪಡಿಸಿ ಪರಿಹಾರ ವಿತರಿಸಲಾಗಿದೆ. ವಿಚಾರಣೆ ಹಂತದಲ್ಲಿರುವ 9 ಪ್ರಕರಣಗಳಿಗೆ ಅವಶ್ಯ ದಾಖಲಾತಿಗಳನ್ನು ಸಲ್ಲಿಸುವಂತೆ ತಿಳಿಸಲಾಗಿದ್ದು, ಪ್ರಕರಣಗಳನ್ನು ಶೀಘ್ರ ಇತ್ಯರ್ಥಪಡಿಸಿ ಸಂತ್ರಸ್ತರಿಗೆ ಕಾಲಮಿತಿಯಲ್ಲಿ ಪರಿಹಾರ ಒದಗಿಸಲು ಸಂಬಂಧಪಟ್ಟ ಅಧಿಕಾರಿಗಳು ಮುಂದಾಗುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ನಾಮನಿರ್ದೇಶಿತ ಸದಸ್ಯರು ಮಾತನಾಡಿ ಜನಜಾಗೃತಿ ಕಾರ್ಯಕ್ರಮಗಳನ್ನು ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಲೋನಿಗಳನ್ನು ಹೊರತುಪಡಿಸಿ ದಲಿತೇತರ ಬೀದಿಗಳಲ್ಲಿ ಆಯೋಜಿಸಬೇಕು. ಸಮಾಜದ ಎಲ್ಲಾ ಸಮುದಾಯದವರನ್ನು ಒಂದೆಡೆ ಸೇರಿಸಿ ದೌರ್ಜನ್ಯ ತಡೆ ನಿಯಂತ್ರಣ ಕಾಯ್ದೆಯ ಪರಿಣಾಮಗಳ ಬಗ್ಗೆಸಂಪೂರ್ಣ ಅರಿವು ಮೂಡಿಸಬೇಕು. ಆಗಮಾತ್ರ ದೌರ್ಜನ್ಯ ಪ್ರಕರಣಗಳು ಕಡಿಮೆಯಾಗಲಿವೆ. ಕಾರ್ಯಾಗಾರಗಳ ವಿಚಾರಧಾರೆ ಹಾಗೂ ಬೀದಿನಾಟಕಗಳ ಸ್ಕ್ರಿಪ್ಟ್ ವಿಷಯಗಳು ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿಯವರಿಂದ ಪರಿಶೀಲನೆ ಹಾಗೂ ಅಂತಿಮ ಅನುಮೋದನೆಯಾಗಬೇಕು ಎಂದರು.

ಪ್ರತಿ ಮೂರು ತಿಂಗಳಿಗೊಮ್ಮೆ ನಡೆಯುವ ದೌರ್ಜನ್ಯ ಸಮಿತಿ ಸಭೆಗೆ ನ್ಯಾಯಾಲಯದ ವಿಶೇಷ ಅಭಿಯೋಜಕರನ್ನು ಹಾಗೂ ಅರಣ್ಯ ಇಲಾಖೆ ಮುಖ್ಯ ಅಧಿಕಾರಿಗಳನ್ನು ಕಡ್ಡಾಯವಾಗಿ ಆಹ್ವಾನಿಸಬೇಕು. ಆದಿವಾಸಿ ಪ್ರದೇಶಗಳಿಗೆ ಸಮರ್ಪಕ ರಸ್ತೆ, ವಿದ್ಯುತ್ ವ್ಯವಸ್ಥೆ ಕಲ್ಪಿಸಬೇಕು. ಸರ್ಕಾರದಿಂದ ಮನೆ ಮಂಜೂರಾದ ಸಂದರ್ಭದಲ್ಲಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ನಡೆಯುವ ಗ್ರಾಮಸಭೆಗಳಲ್ಲಿ ಆದಿವಾಸಿ ಜನರಿಗೆ ಶೇ. 2ರಿಂದ 5ರಷ್ಟು ಮನೆಗಳನ್ನು ಮೀಸಲಿಡಬೇಕು. ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ನಾಮನಿರ್ದೇಶಿತ ಸದಸ್ಯರಿಗೆ ಗುರುತಿನ ಚೀಟಿ ನೀಡಬೇಕು. ಪೊಲೀಸ್ ಕಚೇರಿ ವಹಿ (ರಿಜಿಸ್ಟರ್ )ಯಲ್ಲಿ ದೌರ್ಜನ್ಯ ಪ್ರಕರಣಗಳನ್ನು ನಮೂದಿಸುವಂತೆ ಸಮಿತಿ ಸದಸ್ಯರು ಸಭೆಯಲ್ಲಿ ಪ್ರಸ್ತಾಪಿಸಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ ಕವಿತಾ ಅವರು ಪೊಲೀಸ್ ಕಚೇರಿಯಲ್ಲಿ ದೌರ್ಜನ್ಯ ಪ್ರಕರಣಗಳ ದಾಖಲಾತಿ ಇದೆ. ಅಪರಾಧ ವಹಿಯಲ್ಲಿ ಯಾವುದೇ ಪ್ರಕರಣಗಳು ತಪ್ಪಿಹೋಗದಂತೆ ನಮೂದಿಸಲಾಗುತ್ತಿದೆ. ಆ ಮೂಲಕ ದೌರ್ಜನ್ಯ ಪ್ರಕರಣಗಳಲ್ಲಿ ಸಂತ್ರಸ್ಥರಿಗೆ ಪರಿಹಾರ ದೊರಕಿಸಿ ನ್ಯಾಯ ಒದಗಿಸಲು ಇಲಾಖೆ ಮುಂದಾಗಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಮುನಿರಾಜು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೆಚ್.ಎಸ್. ಬಿಂದ್ಯಾ, ಉಪವಿಭಾಗಾಧಿಕಾರಿ ಮಹೇಶ್, ತಹಶೀಲ್ದಾರ್ ರಾದ ಗಿರಿಜ, ಐ.ಈ. ಬಸವರಾಜು, ಜಯಪ್ರಕಾಶ್, ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ನಾಮನಿರ್ದೇಶಿತ ಸದಸ್ಯರಾದ ಸೋಮೇಶ್ವರ್, ಆರ್. ಸಿದ್ದರಾಜು, ಮುದ್ದಯ್ಯ, ಸಿದ್ದರಾಜು, ಜಿಲ್ಲಾಮಟ್ಟದ ಅಧಿಕಾರಿಗಳು, ಅರಣಾಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಕಾರ್ಮಿಕ ಇಲಾಖೆಯ ಯೋಜನೆ ಅರಿವು

**ಕೋಲಾರ:** ತಾಲ್ಲೂಕು ಕಾನೂನು ಸೇವಾ ಸಮಿತಿ, ತಾಲ್ಲೂಕು ವಕೀಲರ ಸಂಘ ಹಾಗೂ ಕಾರ್ಮಿಕ ಇಲಾಖೆ, ತಾಲ್ಲೂಕು ಪಂಚಾಯತಿ ಮತ್ತು ತಾಲ್ಲೂಕು ಆಡಳಿತ, ಬಂಗಾರಪೇಟೆಯವರ ಸಹಯೋಗದೊಂದಿಗೆ ಅಕ್ಟೋಬರ್ 29 ರಂದು ಬೆಳ್ಳಿಗೆ 10:30ಕ್ಕೆ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ಉದ್ಯೋಗದಾತರು, ಅಸಂಘಟಿತ ಕಾರ್ಮಿಕರು ಹಾಗೂ ಕಾರ್ಮಿಕ ಸಂಘಟನೆಗಳ ಪದಾದಿಕಾರಿಗಳಿಗೆ ಕಾರ್ಮಿಕ ಇಲಾಖೆಯ ಯೋಜನೆಗಳು ಹಾಗೂ ಕಾಯ್ದೆಗಳ ಬಗ್ಗೆ ಅರ್ಧ ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆಂದು ಬಂಗಾರಪೇಟೆ ವೃತ್ತದ ಕಾರ್ಮಿಕ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾಭಾರತ ಪ್ರವಚನ ಮಾಲಿಕೆ

**ಮೈಸೂರು:** , ನಗರದ ಶ್ರೀರಾಂಪುರದಲ್ಲಿರುವ ಶ್ರೀ ವೇಂಕಟೇಶ್ವರ ಧ್ಯಾನ ಕೇಂದ್ರದಲ್ಲಿ ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರ ಆಜ್ಞಾನುಸಾರ ಅ.21ರಿಂದ 27ರವರೆಗೆ ಸಂಜೆ 6ರಿಂದ 7ರವರೆಗೆ ನಾಡಿನ ಸುಪ್ರಸಿದ್ದ ಪ್ರವಚನಕಾರರಾದ ಪಂ.ಶ್ರೀನಿವಾಸತೀರ್ಥಾಚಾರ್ಯ ಹೆಬ್ಬೂರು ಇವರಿಂದ ಮಹಾಭಾರತ ಪ್ರವಚನ ಮಾಲಿಕೆ (ಆದಿಪರ್ವ) ಎಂಬ ವಿಷಯದ ಕುರಿತು ವಿಶೇಷ ಪ್ರವಚನವನ್ನು ಆಯೋಜಿಸಲಾಗಿದೆ. ಅ.27ರಂದು ಭಾನುವಾರ ಬೆಳಿಗ್ಗೆ ಮಂಗಳ ಮಹೋತ್ಸವದ ಪರ್ವಕಾಲದಲ್ಲಿ ಲೋಕಕ್ಷೇಮಕ್ಕಾಗಿ 'ನವಗ್ರಹ ಹೋಮ'ವನ್ನು ಏರ್ಪಡಿಸಲಾಗಿದೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ವ್ಯವಸ್ಥಾಪಕ ಪಂ.ಹೇಮಂತಾಚಾರ್ಯ ಗುಡಿಯವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮಾಹಿತಿಗೆ ಮೊಬೈಲ್ 8147205326 ಸಂಪರ್ಕಿಸಬಹುದು.

# ಕಾಲಮಿತಿಯಲ್ಲಿ ಯೋಜನೆ ಅನುಷ್ಠಾನಗೊಳಿಸಿ

**ಚಾಮರಾಜನಗರ:** ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉಪಯೋಜನೆಗಳಡಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ನಿಗದಿತ ಕಾಲಮಿತಿಯಲ್ಲಿ ಅನುಷ್ಠಾನಗೊಳಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉಪಯೋಜನೆಯಡಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಶ್ರೇಯೋಭಿವೃದ್ಧಿಗಾಗಿ ವಿವಿಧ ಇಲಾಖೆಗಳು, ಅಭಿವೃದ್ಧಿ ನಿಗಮಗಳು ಪರಿಶಿಷ್ಟಜಾತಿ ಉಪಯೋಜನೆ ಹಾಗೂ ಗಿರಿಜನ ಕಲ್ಯಾಣ ಕಾರ್ಯಕ್ರಮಗಳಡಿಯಲ್ಲಿ ಸಾಕಷ್ಟು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿವೆ. ಯೋಜನೆಗಳನ್ನು ಸಕಾಲದಲ್ಲಿ ಜನರಿಗೆ ತಲುಪಿಸಲು ಸಂಬಂಧಪಟ್ಟ ಜಿಲ್ಲಾಮಟ್ಟದ ಎಲ್ಲಾ ಅಧಿಕಾರಿಗಳು ಮುಂದಾಗಬೇಕು. ಫಲಾನುಭವಿಗಳ ಆಯ್ಕೆಯಲ್ಲಿ ಪಾರದರ್ಶಕತೆ ಇರುವಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ನಿರ್ದೇಶನ ನೀಡಿದರು.

ವಿವಿಧ ಇಲಾಖೆಗಳು ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉಪಯೋಜನೆಗಳಡಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಅಗತ್ಯ ಅನುದಾನದ ನಿರೀಕ್ಷೆಯಲ್ಲಿವೆ. ಹಲವು ಇಲಾಖೆಗಳಿಗೆ ಕಾರ್ಯಕ್ರಮ ಅನುಷ್ಠಾನಕ್ಕಾಗಿ ಈಗಾಗಲೇ ಅನುದಾನ ಬಿಡುಗಡೆಯಾಗಿದೆ. ರಾಜ್ಯ ಹಾಗೂ ಜಿಲ್ಲಾ ವಲಯವಾರು ಅನುದಾನ ಬಿಡುಗಡೆಯಾಗಿರುವ ಇಲಾಖೆಗಳು ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಜನರಿಗೆ ತಲುಪಿಸಿ ನಿಗದಿತ ಗುರಿ ಸಾಧಿಸಬೇಕು. ಯೋಜನೆ ಅನುಷ್ಠಾನದಲ್ಲಿ ಯಾವುದೇ ಲೋಪಗಳಿಗೆ ಅವಕಾಶವಾಗದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಖುದ್ದು ಗಮನ ಹರಿಸಬೇಕು ಎಂದರು.

ಗಂಗಾ ಕಲ್ಯಾಣ ಯೋಜನೆಯನ್ನು ವಿವಿಧ ನಿಗಮಗಳು ಹಾಗೂ ಸಣ್ಣನೀರಾವರಿ ಇಲಾಖೆ ಅನುಷ್ಠಾನಗೊಳಿಸುತ್ತಿದ್ದು, ಫಲಾನುಭವಿಗಳ



ಆಯ್ಕೆ ಪ್ರಕ್ರಿಯೆ ಶಾಸಕರ ಸಮ್ಮುಖದಲ್ಲಿ ನಡೆಯಲಿದೆ. ಈ ಸಂಬಂಧ ಫಲಾನುಭವಿಗಳ ಆಯ್ಕೆಯಲ್ಲಿ ಗೊಂದಲವಾಗಬಾರದು. ದಾಖಲಾತಿಗಳನ್ನು ಅಧಿಕಾರಿಗಳು ಸಮರ್ಪಕವಾಗಿ ಪರಿಶೀಲಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಅಧಿಕಾರಿಗಳಿಗೆ ತಿಳಿಸಿದರು.

ಇದೇ ವೇಳೆ ಮಾತನಾಡಿದ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಮುನಿರಾಜು ಅವರು ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉಪಯೋಜನೆಗಳಡಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಇಲಾಖೆಗಳು ಪ್ರಗತಿ ವರದಿಯನ್ನು ಪ್ರತಿ ತಿಂಗಳ 5ನೇ ದಿನಾಂಕದೊಳಗೆ ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸಬೇಕು. ಮಾಹಿತಿ ಪ್ರತಿ ತಿಂಗಳು ಅಪ್‌ಡೇಟ್ ಆಗಬೇಕು ಎಂದರು. ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೆಚ್.ಎಸ್. ಬಿಂದ್ಯಾ, ಜಂಟಿ ಕೃಷಿ ನಿರ್ದೇಶಕರಾದ ಅಬೀದ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾಶದ ಮಂಜುನಾಥ ಪ್ರಸನ್ನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಮಂಜುನಾಥ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಉಪನಿರ್ದೇಶಕರಾದ ಯೋಗಾನಂದ, ಜಿಲ್ಲಾಮಟ್ಟದ ಅಧಿಕಾರಿಗಳು, ಅರಣಾಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಆಕ್ಷೇಪಣೆ ಸಲ್ಲಿಸಲು ಆಹ್ವಾನ

**ಕೋಲಾರ:** ಕೋಲಾರ ನಗರಸಭೆಗೆ (ಗ್ರಾಮ ಠಾಣಾ) ಸೇರಿದ ಕೋಲಾರ ನಗರದ ವಾರ್ಡ್ ನಂ.05, ಕುರುಬರಪೇಟೆ ಪ್ರದೇಶ ಎ.ಆರ್.ನಂ.2734 ಅಳತೆ 97/86, 35/22, 55/47 ಅಡಿಗಳ ಖಾಲಿ ಜಾಗ ಚಕ್ಕುಬಂದಿ: ಪೂರ್ವಕ್ಕೆ: ಕೆರೆ, ಪಶ್ಚಿಮಕ್ಕೆ: ರಸ್ತೆ, ಉತ್ತರಕ್ಕೆ: ಖಾಸಗಿ ಸ್ವತ್ತು, ದಕ್ಷಿಣಕ್ಕೆ: ಕೆರೆ ಅಂಗಳ ಮತ್ತು ಖಾಸಗಿ ಸ್ವತ್ತು ಖಾಲಿ ನಿವೇಶನವನ್ನು ಕುರುಬರಪೇಟೆ ಶ್ರೀ ಗಂಗಮ್ಮ ಭೋವಿ ಕ್ಷೇಮಾಭಿವೃದ್ಧಿ ಸಂಘ ನಿ. ಭೋವಿ ಕಾಲೋನಿ. ಕುರುಬರ ಪೇಟೆ, ಕೋಲಾರ ಇವರಿಗೆ ಸಮುದಾಯ ಭವನ ನಿರ್ಮಾಣಕ್ಕಾಗಿ ಸದರಿ ರವರ ಮನವಿ ಪತ್ರದ ದಿನಾಂಕ:10.02.2020 ರಂತೆ ಮನವಿ ಸಲ್ಲಿಸಿರುತ್ತಾರೆ. ಈ ಬಗ್ಗೆ ನಗರಸಭೆ ಕಾರ್ಯಾಲಯದಲ್ಲಿ ದಿನಾಂಕ:30.07.2022 ರಂದು ನಡೆದ ಸಾಮಾನ್ಯ ಸಭೆಯ ಅಧ್ಯಕ್ಷರ ಅಪ್ಪಣೆ ಮೇರೆಗೆ ವಿ?ಯ ಸಂಖ್ಯೆ:46/3 ರಂತೆ ಸಮುದಾಯ ಭವನ ನಿರ್ಮಾಣಕ್ಕಾಗಿ ಜಾಗ ಮಂಜೂರು ಮಾಡಲು ಸರ್ವಾನುಮತದಿಂದ ತೀರ್ಮಾನಿಸಲಾಗಿದೆ. ಆದ್ದರಿಂದ ಈ ಬಗ್ಗೆ ಸಾರ್ವಜನಿಕರ ತಂಟೆತಕರಾರು ಆಕ್ಷೇಪಣೆಗಳು ಅಥವಾ ಸೂಚನೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಹೊರಡಿಸಿದ 30 ದಿನಗಳ ಒಳಗಾಗಿ ಲಿಖಿತವಾಗಿ ಸಮರ್ಥನಾ ದಾಖಲೆಗಳೊಂದಿಗೆ ಆಕ್ಷೇಪಣೆಗಳನ್ನು ಸಲ್ಲಿಸಬಹುದು. ಅವಧಿ ಮುಗಿದ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ ಎಂದು ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

# ಜೀನ್ ಪಾಲ್ ಸಾರ್ತ್ರೆ ಲೆ ಮೂರ್ ಗೋಡೆ ನಾಟಕ

**ಕೋಲಾರ:** ಶಿವಗಂಗೆ ತೇರಹಳ್ಳಿ ಬೆಟ್ಟದಲ್ಲಿರುವ ಆದಿಮ ಸಾಂಸ್ಕೃತಿಕ ಕೇಂದ್ರದಲ್ಲಿ ಹುಣ್ಣಿಮೆ ಹಾಡು 210 ರ ಸಲುವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಹಯೋಗದಲ್ಲಿ ದಿನಾಂಕ 17–10–2024ರ ಗುರುವಾರ ಸಂಜೆ 7–00 ಗಂಟೆಗೆ ಜೀನ್ ಪಾಲ್ ಸಾರ್ತ್ರೆ ಲೆ ಮೂರ್ ಗೋಡೆ ನಾಟಕವನ್ನು ಆಯೋಜಿಸಲಾಗಿದೆ.

ಎಸ್.ದಿವಾಕರ್ ಕನ್ನಡಕ್ಕೆ ಅನುವಾದ, ರಂಗನಾಥ್ ಶಿವಮೊಗ್ಗ ರಂಗರೂಪ, ನಿರ್ದೇಶನ, ರಾಜೇಶ್ ನೃತ್ಯ ವಿನ್ಯಾಸ, ಇನ್ ಫಾರ್ಮ್ ಥಿಯೇಟರ್ ನಾಟಕ ಪ್ರಸ್ತುತಿ ಪಡಿಸುವರು.

ಅಂದು ನಮ್ಮೊಂದಿಗೆ ಉಪವಿಭಾಗಾಧಿಕಾರಿ ಡಾ.ಮೈತ್ರಿ ಹೆಚ್.ಪಿ.ಎಸ್, ನಿವೃತ್ತ ಡಿ.ಐ.ಜಿ ಕೆ.ಹೆಚ್.ಶ್ರೀನಿವಾಸನ್, ಕೋಲಾರ–ಚಿಕ್ಕಬಳ್ಳಾಪುರ ಸಹಕಾರ ಹಾಲು ಉತ್ಪಾದಕರ ಸಂಘಟಗಳ ಒಕ್ಕೂಟದ ನಿರ್ದೇಶಕ ಯೂನಸ ಷರೀಫ್ (ಶಂಶೀರ್) ಬೆತ್ತನಿ ಗ್ರಾಮದ ರೈತ ರಾಮಪ್ಪ, ಆದಿಮ ಅಧ್ಯಕ್ಷ ಎನ್.ಮುನಿಸ್ವಾಮಿ, ಕಾರ್ಯದರ್ಶಿ ಕೆ.ಎಂ.ಕೊಮ್ಮಣ್ಣ ಭಾಗವಹಿಸುವರು.

ಜಾನಪದ ಹಾಡುಗಾರ, ಸಂಗೀತ ಮತ್ತು ನೃತ್ಯ ಅಕಾಡೆಮಿ ಸದಸ್ಯ ಡಿ.ಆರ್.ರಾಜಪ್ಪರಿಗೆ ಆದಿಮ ಗದ್ದುಗೆ ಗೌರವ ನೀಡಿ ಪುರಸ್ಕರಿಸಲಾಗುವುದು. ಎಂ.ನಾರಾಯಣಗೌಡರ ಜ್ಞಾಪಕಾರ್ಥವಾಗಿ ತುರಾಂಡಹಳ್ಳಿ ಟಿ.ಎನ್.ರವಿ ಊಣಬಡಿಸುವರು.

ಆದಿಮದಲ್ಲಿ ನಡೆಯುವ ಹುಣ್ಣಿಮೆ ಹಾಡು ಕಾರ್ಯಕ್ರಮಕ್ಕೆ ಕೋಲಾರ ಬಸ್ ನಿಲ್ದಾಣದಿಂದ ಸಂಜೆ 6–00 ಗಂಟೆಗೆ ಬಸ್ ಹೊರಡಲಿದ್ದು, ಕಾರ್ಯಕ್ರಮ ಮುಗಿದ ಮೇಲೆ ಕೋಲಾರ ಹೊಸ ಬಸ್ ನಿಲ್ದಾಣಕ್ಕೆ ಬರಲಿದೆ. ಕಲಾಭಿಮಾನಿಗಳು ಸಕಾಲಕ್ಕೆ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕೋರಿದೆ.

# ಪೌರಕಾರ್ಮಿಕರಿಗೆ ಹಾಸನದಲ್ಲಿ ಹೆಲ್ತ್ ಕ್ಯಾಂಪ್: ಪುರಸಭೆ ಅಧ್ಯಕ್ಷ

**ಬೇಲೂರು:** ಪೌರಕಾರ್ಮಿಕರಿಗೆ ಹಾಸನದ ಖಾಸಗಿ ಆಸ್ಪತ್ರೆಯಲ್ಲಿ ಆರೋಗ್ಯ ತಪಾಸಣೆ ಮಾಡಿಸಲಾಗುವುದು ಎಂದು ಪುರಸಭೆ ಅಧ್ಯಕ್ಷ ಎ.ಆರ್.ಅಶೋಕ್ ಹೇಳಿದರು.

ಪುರಸಭೆಯಿಂದ ಆಯೋಜಿಸಿದ್ದ ಪೌರಕಾರ್ಮಿಕ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ದೇಹ ಪೂರ್ಣ ಪ್ರಮಾಣದಲ್ಲಿ ತಪಾಸಣೆ ನಡೆಸಲಾಗುವುದು ಇದಕ್ಕೆ ಅಧಿಕಾರಿಗಳು, ಸದಸ್ಯರು ಸಹಕಾರ ನೀಡಲಿದ್ದಾರೆಂದರು.

ದೇಶ ವಿದೇಶಗಳಿಂದ ಆಗಮಿಸುವ ಪ್ರವಾಸಿಗರಿಗೆ ಅಶುಚಿತ್ವ ಕಂಡುಬರದಂತೆ ದೇಗುಲದ ಸುತ್ತಮುತ್ತ, ಮುಖ್ಯರಸ್ತೆ ಸ್ವಚ್ಛಗೊಳಿಸಿ ಅಂದಗೊಳಿಸುವ ಪೌರಕಾರ್ಮಿಕರ ಬಗ್ಗೆ ಪ್ರವಾಸೋಧ್ಯಮ ಹಾಗೂ ಪುರಾತತ್ವ ಇಲಾಖೆಯಿಂದ ಗೌರವ ಸಲ್ಲಿಸುವ ಕಾರ್ಯ ಮಾಡುತ್ತಿಲ್ಲ ಎಂದು ಪುರಸಭೆ ಅಧ್ಯಕ್ಷ ಎ.ಆರ್.ಅಶೋಕ್ ಬೇಸರ ವ್ಯಕ್ತಪಡಿಸಿದರು. ಪೌರಕಾರ್ಮಿಕರು ಪುರಸಭೆಯ ನೌಕರರಾಗಿದ್ದರೂ 23 ವಾರ್ಡಿನೊಳಗೆ ಇರುವ ದೇಗುಲ, ಮುಖ್ಯರಸ್ತೆಯನ್ನು ಪ್ರತಿನಿತ್ಯ ಗುಡಿಸಿ ತ್ಯಾಜ್ಯ ನಿರ್ಮೂಲನೆ ಮಾಡುತ್ತಿದ್ದಾರೆ. ಪ್ರವಾಸೋಧ್ಯಮ ದಿನಾಚರಣೆ



ವೇಳೆ ಅಥವಾ ಪೌರಕಾರ್ಮಿಕ ದಿನಾಚರಣೆ ಸಂದರ್ಭ ಗೌರವಿಸುವಂತ ಕ್ರಮಕ್ಕೆ ಮುಂದಾಗುತ್ತಿಲ್ಲ ಎಂದರು.

ಪೌರಕಾರ್ಮಿಕರ ಬಗ್ಗೆ 1 ದಿನ ಮಾತ್ರ ಹೊಗಳಿದರೆ ಸಾಲದು, ಪ್ರತಿನಿತ್ಯವೂ ಅವರ ಕಾಯಕದ ಬಗ್ಗೆ ಸಮುದಾಯ ಹೊಗಳುತ್ತಿರಬೇಕೆಂದರು. ನೀರು ಸರಬರಾಜು ನೌಕರರಿಗೂ ಗುರುತು ಪತ್ರ ಹಾಗೂ ಸಮವಸ್ತ್ರ ನೀಡುತ್ತಿರುವುದಾಗಿ ಹಾಗೂ ಪೌರಕಾರ್ಮಿಕರಿಗೆ ಪುರಸಭೆಯಿಂದ ನೀಡಲಾಗುವ ಎಲ್ಲಾ ಸೌಲಭ್ಯ ಕಲ್ಪಿಸಲಾಗುತ್ತಿದೆ ಎಂದರು.

ಮಾಜಿ ಅಧ್ಯಕ್ಷೆ ತೀರ್ಥಕುಮಾರಿವೆಂಕಟೇಶ್ ಮಾತನಾಡಿ, ಪ್ಲಾಸ್ಟಿಕ್ ಬಳಕೆ ಹೆಚ್ಚುತ್ತಿದೆ, ಇದೊಂದು ಜಾಗತಿಕ ಸಮಸ್ಯೆಯಾಗಿದೆ. ಪುರಸಭೆಯ ನೀರು ಸರಬರಾಜು ನೌಕರರಿಗೆ ಪೌರಕಾರ್ಮಿಕರಿಗೆ ಕೊಡುವಷ್ಟೇ ಸೌಲಭ್ಯ ನೀಡಬೇಕು, ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ನಡೆಸಬೇಕೆಂದರು.

ಸದಸ್ಯ ಜಮಾಲುದ್ದೀನ್, ಜನಸಮುದಾಯದ ರಕ್ಷಣೆ ಮಾಡುತ್ತಿರುವ ಪೌರಕಾರ್ಮಿಕರಿಗೆ ಪೂರ್ಣ ಪ್ರಮಾಣದ ಸವಲತ್ತು ಮರೀಚಿಕೆಯಾಗಿದೆ. ಮನೆ, ನಿವೇಶನದಿಂದ ವಂಚಿತರಾಗುತ್ತಿದ್ದಾರೆ. ಹೊರಗುತ್ತಿಗೆಯಲ್ಲಿ ಕೆಲಸ ಮಾಡುವವರಿಗೆ ಕೇವಲ 14 ಸಾವಿರ ರೂ. ವೇತನ ನೀಡುತ್ತಿದ್ದು ಇದು ಜೀವನ ನಿರ್ವಹಣೆಗೆ ಸಾಲುವುದಿಲ್ಲ, ಮಕ್ಕಳ ವಿವಾಹ, ಶಿಕ್ಷಣಕ್ಕೆ ಆರ್ಥಿಕ ನೆರವು ನೀಡುವ ಅಗತ್ಯವಿದೆ ಎಂದರು.

ಜಿಲ್ಲಾ ಘನತ್ಯಾಜ್ಯ ಘಟಕದ ನಿರ್ದೇಶಕ ಚಂದ್ರಶೇಖರ್, ವಿದ್ಯಾವಂತರಿಂದಲೇ ಇಂದು ತ್ಯಾಜ್ಯ ಹೆಚ್ಚಾಗುತ್ತಿದೆ. ನಿವಾಸಿಗಳಿಗೆ ತ್ಯಾಜ್ಯ ಕಡಿಮೆ ಮಾಡುವುದು ಹೇಗೆ ಎಂಬ ಅರಿವು ಮೂಡಿಸಬೇಕಿದೆ. ಯುನೆಸ್ಕೋ ಪಟ್ಟಿಗೆ ಸೇರಿರುವ ಬೇಲೂರನ್ನು ವಿದೇಶದವರು ಬಂದರೆ ಹೊಗಳುವಂತೆ ಸ್ವಚ್ಛತೆಯಲ್ಲಿಡಬೇಕಿದೆ. ಸಮುದಾಯದ ಸಹಕಾರ ರಾಜಕಾರಣಿಗಳ ಇಚ್ಚಾಶಕ್ತಿ ಬೇಕಿದೆ. ಹಸಿ ಕಸದಿಂದ ಗೊಬ್ಬರ ಮಾಡುವ ಪುಟ್ಟ ಯಂತ್ರಗಳನ್ನು ಮನೆಗಳಿಗೆ ನೀಡುವ ಕೆಲಸ ಆಗಬೇಕಿದೆ ಎಂದು ಹೇಳಿದರು.

ಸದಸ್ಯ ಜಗದೀಶ್, ತ್ಯಾಜ್ಯವೇ ನಮ್ಮ ಉಗ್ರಗಾಮಿಗಳಾಗಿದ್ದು ಇದನ್ನು ನಿರ್ಮೂಲನೆ ಮಾಡುವಲ್ಲಿ ಪೌರಕಾರ್ಮಿಕರು ಸೈನಿಕರಂತೆ ದುಡಿಯುತ್ತಿದ್ದಾರೆಂದರು. ಉಪಾಧ್ಯಕ್ಷೆ ಉಷಾಸತೀಶ್, ರತ್ನಮ್ಮಸತ್ಯನಾರಾಯಣ, ಸೌಭಾಗ್ಯ ಮಾತನಾಡಿದರು. ಆಟೋಟ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ದೇಗುಲದಿಂದ ಪೌರಕಾರ್ಮಿಕರು ಮೆರವಣಿಗೆ ನಡೆಸಿದರು. ಕುಮಾರ್ ಗೀತಗಾಯನ ನಡೆಸಿಕೊಟ್ಟರು. ಆರೋಗ್ಯಾಧಿಕಾರಿ ಜ್ಯೋತಿ ನಿರ್ವಹಣೆ, ಕುಮಾರ್ ಪ್ರಾರ್ಥನೆ, ಸಿಒ ಸುಜಯಕುಮಾರ್ ಸ್ವಾಗತ ಮಾಡಿದರು. ಪುರಸಭೆಯ ಸದಸ್ಯರು, ಹೆಚ್ .ಐ.ಲೋಹಿತ್ ಇತರರು ಇದ್ದರು.

# ರಸ್ತೆ ಸುರಕ್ಷತಾ ಸಮಿತಿ ಸಭೆ

**ಮಂಡ್ಯ:** ರಸ್ತೆ ಸುರಕ್ಷತಾ ಸಮಿತಿ ಸಭೆಯು ಜಿಲ್ಲಾಧಿಕಾರಿ ಡಾ: ಕುಮಾರ ಅವರು ಅಧ್ಯಕ್ಷತೆಯಲ್ಲಿ ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಿತು.

ಜಿಲ್ಲಾಧಿಕಾರಿ ಡಾ: ಕುಮಾರ ಅವರು ಮಾತನಾಡಿ ಸಂಚಾರಿ ನಿಯಮ ಉಲ್ಲಂಘನೆಯಿಂದ ಸಂಗ್ರಹವಾಗುವ ದಂಡದ ಹಣವನ್ನು ರಸ್ತೆ ಸುರಕ್ಷತಾ ಸಮಿತಿ ರೂಪಿಸುವ ಕಾಮಗಾರಿಗಳಿಗೆ ವಚ್ಚ ಮಾಡಲು ಅನುಮತಿ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಿದರು.

ಬೆಂಗಳೂರು- ಮೈಸೂರು ರಾಷ್ಟ್ರೀಯ ಹೆದ್ದಾರಿ ಯಲ್ಲಿ ಸಂಚಾರಿ ನಿಯಮ ಉಲ್ಲಂಘನೆಗೆ ಸಂಬಂಧಿಸಿದಂತೆ ಸುಮಾರು 4 ರಿಂದ 5 ಕೋಟಿಯವರೆಗೆ ದಂಡ ವಿಧಿಸಲಾಗಿದೆ. 60 ರಿಂದ 70 ಸಾವಿರ ಮಾತ್ರ ಸಂಗ್ರಹಣೆ ಮಾಡಲಾಗಿದೆ. ದಂಡ ಸಂಗ್ರಹಣೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಷ್ಟಕರ ಹೊಸ ವಿಧಾನಗಳ ಬಗ್ಗೆ ಚಿಂತಿಸಿ ವಸೂಲಿ ನಾಡಬೇಕು. ಇದರಿಂದ ಸಂಚಾರಿ ನಿಯಮದ ಪಾಲನೆ ಬಗ್ಗೆ ವಾಹನ ಚಾಲಕರು ನಿಗಾ ವಹಿಸುತ್ತಾರೆ ಎಂದರು. ರಸ್ತೆ ಸುರಕ್ಷತಾ ಸಮಿತಿಯು ಸಭೆಯ ನಡಾವಳಿಯನ್ನು ಕೇಂದ್ರ ಕಚೇರಿಗೆ ಅಥವಾ ಸರ್ಕಾರಕ್ಕೆ ಕಳುಹಿಸುವಾಗ ಬೆಂಗಳೂರು- ಮೈಸೂರು ಹೆದ್ದಾರಿಯಲ್ಲಿ ಅಂಡರ್ ಪಾಸ್ ನಿರ್ಮಾಣ, ಸರ್ವಿಸ್ ರಸ್ತೆ ಯಲ್ಲಿ ಒಳಚರಂಡಿ ನಿರ್ಮಾಣದ ಉಳಿದ ಕೆಲಸಗಳು, ರಸ್ತೆಯಲ್ಲಿ ಬೇಕಿರುವ ಹೆಚ್ಚುವರಿ ಸಂಚಾರಿ ನಿಯಮ ಫಲಕಗಳ ಬಗ್ಗೆ ನಮೂದಿಸಿ ಕಳುಹಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ಅಪಘಾತ ಸಂಭವಿಸುವ ವಲಯಗಳಲ್ಲಿ ಸಂಚಾರಿ ನಿಯಮದ ಬೋರ್ಡ್9ಗಳ ಅಳವಡಿಕೆ, ಸಿಗ್ನಲ್ ಲೈಟ್ ಗಳ ದುರಸ್ತಿ, ನಿರ್ವಹಣೆ ಹಾಗೂ ಅಳವಡಿಕೆ, ಸಿ.ಸಿ.ಟಿವಿ ಅಳವಡಿಕೆಗೆ ಸಂಬಂಧಿಸಿದಂತೆ ಯೋಜನೆ ಸಿದ್ಧಪಡಿಸಿದ್ದು, ಪ್ರಸ್ತಾಪವನ್ನು ಸರ್ಕಾರಕ್ಕೆ ಕಳುಹಿಸಿಕೊಡಿ ಎಂದರು. ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ತಿಮ್ಮಯ್ಯ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ಹರ್ಷ ಉಪಸ್ಥಿತರಿದ್ದರು.

# ವಿವಿಧ ಯೋಜನೆಗಳಿಗೆ ಅರ್ಜಿ

**ಮಂಡ್ಯ:** ಮಂಡ್ಯ ತೋಟಗಾರಿಕೆ ಇಲಾಖೆ ವತಿಯಿಂದ 2024-25 ನೇ ಸಾಲಿನ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಾದ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ತಾಳೆಬೆಳೆ ಯೋಜನೆಗಳಿಗೆ ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮದಲ್ಲಿ ಕಾಫಿ, ಟೀ, ರಬ್ಬರ್, ಅಡಿಕೆ ಬೆಳೆ ಹೊರತುಪಡಿಸಿ ಉಳಿದ ಎಲ್ಲಾ ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಘಟಕ ಅಳವಡಿಕೆಗೆ ಒಂದು ಕುಟುಂಬಕ್ಕೆ ಒಟ್ಟಾರೆ 5 ಹೆಕ್ಟೇರ್ ಪ್ರದೇಶಕ್ಕೆ ಮಿತಿಗೊಳಿಸಿ ಸಹಾಯಧನ ಕಲ್ಪಿಸಲಾಗುತ್ತಿದೆ. ಈ ಕಾರ್ಯಕ್ರಮದಡಿ ಮೊದಲ 2 ಹೆಕ್ಟೇರ್ ಗೆ ಎಲ್ಲಾ ವರ್ಗದ ರೈತರಿಗೆ ಶೇ.90 ರಷ್ಟು ಸಹಾಯಧನ ಕಲ್ಪಿಸಲಾಗುವುದು ಹಾಗೂ ಉಳಿದ 3 ಹೆಕ್ಟೇರ್ ಗೆ ಶೇ. 45 ರಷ್ಟು ಸಹಾಯಧನ ಕಲ್ಪಿಸಲಾಗುವುದು. ಕೇಂದ್ರ ಪುರಸ್ಕೃತ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ತಾಳೆಬೆಳೆ ಯೋಜನೆಯಡಿ ತಾಳೆಬೆಳೆ ಹೊಸ ಪ್ರದೇಶ ವಿಸ್ತರಣೆ ಕೈಗೊಳ್ಳುವ ರೈತರಿಗೆ ಪ್ರದೇಶ ವಿಸ್ತರಣೆಗೆ, ಕೊಳಬೆ ಬಾವಿ ಕೊರೆಸಲು, ಟ್ರ್ಯಾಕ್ಟರ್ ಟ್ರಾಲಿ ಖರೀದಿಸಲು ಮತ್ತು ಡೀಸಲ್ ಪಂಪ್ ಸೆಟ್ ಖರೀದಿಸಲು ಸಹಾಯಧನವನ್ನು ಎಲ್ಲಾ ವರ್ಗದ ರೈತರಿಗೆ ಕಲ್ಪಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಮಂಡ್ಯ ಜಿಲ್ಲೆಯ ತಾಲ್ಲೂಕುಗಳಾದ ಕೆ.ಆರ್.ಪೇಟೆ ದೂ.ಸಂ: 08237-262540, ಮದ್ದೂರು- 08232-233450, ಮಳವಳ್ಳಿ- 08230-242301, ಮಂಡ್ಯ- 08232-225735, ನಾಗಮಂಗಲ- 08234-286160, ಪಾಂಡವಪುರ- 08236-255055, ಶ್ರೀರಂಗಪಟ್ಟಣ- 08236-253205 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಪಂಚಾಯತ್ ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆ ವಿ ಶಂಕರೇಗೌಡರ ಚಿಂತನೆಗಳನ್ನು ಪ್ರತಿಯೊಬ್ಬರೂ ಬದುಕಿನಲ್ಲಿ ಅಳವಡಿಸಿಕೊಳ್ಳಿ

**ಮಂಡ್ಯ:** ಕೆ ವಿ ಶಂಕರೇಗೌಡ ಅವರು ಕೇವಲ ರಾಜಕಾರಣಿ ಮಾತ್ರವಲ್ಲದೇ ಸಾಮಾಜಿಕ ಸುಧಾರಕರಾಗಿ ಜಿಲ್ಲೆಯ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದಾರೆ. ಇವರ ಚಿಂತನೆಗಳನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ನ ಕಾವೇರಿ ಸಭಾಂಗಣದಲ್ಲಿ ಬೆಂಗಳೂರು ಕರ್ನಾಟಕ ಸಾಹಿತ್ಯ ಅಕಾಡೆಮಿ, ಮಂಡ್ಯ ಜಿಲ್ಲಾಡಳಿತ, ಕೆ ವಿ ಶಂಕರೇಗೌಡ ಅಧ್ಯಯನ ಪೀಠ, ಕರ್ನಾಟಕ ಸಂಘ, ಮಂಡ್ಯ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇವರ ಸಂಯುಕ್ತಾಶ್ರಯದಲ್ಲಿ ನಡೆದ ಕೆ ವಿ ಶಂಕರಗೌಡ 109 ಒಂದು ದಿನದ ನೆನಪು ವಿಚಾರ ಸಂಕಿರಣ ಹಾಗೂ ಮತ್ತೆ ಮತ್ತೆ ಶಂಕರಗೌಡ ಪುಸ್ತಕ ಬಿಡುಗಡೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಕೆ ವಿ ಶಂಕರಗೌಡ ಅವರ ಮೇಲೆ ಅಪಾರವಾದಂತಹ ಗೌರವ ಮತ್ತು ಪ್ರೀತಿ ಇದೆ. ಅವರ ನಿಸ್ವಾರ್ಥ ಸೇವೆ, ಸಾಮಾಜಿಕ ಚಿಂತನೆ ಮೂಲಕ ಜನರ ಮನಸ್ಸಿನಲ್ಲಿ ನೆಲೆಯೂರಿದ್ದಾರೆ. ಅವರನ್ನು ಮಂಡ್ಯ ಜಿಲ್ಲೆಯ ಆಧುನಿಕ ಶಿಲ್ಪಿ ಎಂದರೆ ತಪ್ಪಾಗಲಾರದು ಎಂದರು.

ಶಂಕರೇಗೌಡರಂತಹ ಮಹಾನ್ ವ್ಯಕ್ತಿಯ ಸಾಧನೆಯನ್ನು ಸಮಾಜಕ್ಕೆ ತಿಳಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಇಂದಿನ ನಾಗರೀಕ ಸಮಾಜ ಶಂಕರೇಗೌಡ ಅವರಿಗೆ ಗೌರವಿಸುವ ಕೆಲಸ ಮಾಡಬೇಕು. ಜೊತೆಗೆ ತಮ್ಮ ಮಕ್ಕಳಿಗೆ ಅವರ ಸೇವೆ, ಕೊಡುಗೆ, ಜೀವನ ಮೌಲ್ಯ ಹಾಗೂ ಸಾಧನೆಗಳ ಬಗ್ಗೆ ತಿಳಿಸಿ ನಾವು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಶಂಕರೇಗೌಡ ಅವರು ಸಚಿವರಾಗಿ ಉತ್ತಮ ಕೆಲಸಗಳನ್ನು ಮಾಡುವ ಮೂಲಕ ನಿತ್ಯ ಸಚಿವ ಎಂಬ ಹೆಸರನ್ನು ಗಳಿಸಿಕೊಂಡರು. ರೈತರ ಮಗನಾಗಿ ಹುಟ್ಟಿ ರೈತಾಪಿ ವರ್ಗದವರಿಗೆ ಅನೇಕ ಕಾರ್ಯಕ್ರಮಗಳನ್ನು ತಂದು ರೈತರ ದನಿಯಾಗಿ ನಿಂತವರು. ಜೊತೆಗೆ ಕಲೆಯ ಬಗ್ಗೆ ಅಪಾರವಾದ ಪ್ರೇಮವನ್ನು ಇಟ್ಟುಕೊಂಡು ಕಲಾವಿದರನ್ನು ಪ್ರೋತ್ಸಾಹಿಸಿದವರು. ಇವರನ್ನು ಮಂಡ್ಯದ ಮಾಣಿಕ್ಯ ಎಂದು ಹೇಳಬಹುದು.

ತದನಂತರ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶೇಖ್ ತನ್ವೀರ್ ಆಸಿಫ್ ಅವರು ಮಾತನಾಡಿ ಕೆ ವಿ ಶಂಕರೇಗೌಡರವರ 109ನೇ ಜನ್ಮದಿನವನ್ನು ಇಂದು ಆಚರಿಸುತ್ತಿದ್ದು, ಶಿಕ್ಷಣ, ಕೃಷಿ, ರಾಜಕೀಯ ಕ್ಷೇತ್ರದಲ್ಲಿ ಮಂಡ್ಯ ಜಿಲ್ಲೆಗೆ ಅವರು ಅಪಾರ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಪರಂಪರೆ ಎಂಬುದು ನಮ್ಮ ಜೀವನದಲ್ಲಿ ಬಹಳ ಮುಖ್ಯವಾಗಿದ್ದು, ಹಿಂದೆ ಇದ್ದಂತಹ ಸಾಹಿತ್ಯ, ಬದುಕು, ರಾಜಕೀಯದ ಸಾರಾಂಶಗಳು ಸೇರಿದಂತೆ ಇನ್ನಿತರೆ ವಿಷಯಗಳನ್ನು ಉಳಿಸಿಕೊಂಡು ಹೋಗಲು ಕೆ.ವಿ



ಶಂಕರೇಗೌಡ ಅವರ ಜೀವನ ಸಾಧನೆಯನ್ನು ತಿಳಿದು ಕೊಳ್ಳುವುದು ಅವಶ್ಯಕವಾಗಿದೆ.

ಬೆಂಗಳೂರು ಕರ್ನಾಟಕ ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಎನ್ ಕರಿಯಪ್ಪ ಅವರು ಪ್ರಾಸ್ತವಿಕವಾಗಿ ಮಾತನಾಡಿ ಕೆ ವಿ ಶಂಕರೇಗೌಡ ಅವರು ಕೇವಲ ಶಾಸಕರ ಕೆಲಸದ ಜೊತೆಗೆ ಸಾಂಸ್ಕೃತಿಕ ವ್ಯಕ್ತಿಯಾಗಿ, ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷರಾಗಿದ್ದವರು. ಇಂತಹ ಉತ್ತಮ ವ್ಯಕ್ತಿಯ ವಿಚಾರಧಾರೆಯನ್ನು ಇಂದು ಪ್ರತಿಯೊಬ್ಬರಿಗೂ ತಿಳಿಸುತ್ತಿರುವುದು ಸಂತೋಷದ ವಿಷಯವಾಗಿದೆ ಎಂದರು.

ಕೆ ವಿ ಶಂಕರಗೌಡ ಅಧ್ಯಯನ ಪೀಠದ ಸಾಹಿತಿಗಳು ಹಾಗೂ ಸಂದರ್ಶಕ ಪ್ರಾಧ್ಯಾಪಕ ಡಾ ರಾಗೌ ಅವರು ಮಾತನಾಡಿ ಮಂಡ್ಯ ಕರ್ನಾಟಕ ಸಂಘವು ಪ್ರತಿ ವರ್ಷ ಕೆ ವಿ ಶಂಕರೇಗೌಡ ಅವರ ಜನ್ಮದಿನವನ್ನು ಆಚರಿಸುವುದು ವಾಡಿಕೆಯಾಗಿದ್ದು, ಇಂದು ಅವರ 109ನೇ ಜನ್ಮದಿನ ಆಚರಿಸಲಾಗುತ್ತಿದೆ. ಜೊತೆಗೆ ಶಂಕರೇಗೌಡ ರವರ ಪುಸ್ತಕ ಬಿಡುಗಡೆ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ಬಹಳ ಸಂತೋಷದ ವಿಚಾರವಾಗಿದೆ. ಅವರ ತತ್ವಾದರ್ಶ ಹಾಗೂ ಚಿಂತನೆಯನ್ನು ಜನರಿಗೆ ತಿಳಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಕೆ ವಿ ಶಂಕರೇಗೌಡ ಅವರು ಅನ್ಯಾಯಕ್ಕೆ ತಲೆಬಾಗದೆ ಸತ್ಯದ ದಾರಿಯಲ್ಲಿ ನಡೆಯುವ ವ್ಯಕ್ತಿತ್ವ ಹೊಂದಿದ್ದವರು. ರಾಜಕಾರಣ, ಶಿಕ್ಷಣ ಸಮಾಜ ಸೇವೆ ಹಾಗೂ ಕಲೆಯಲ್ಲಿ ಅನೇಕ ಸಾಧನೆ ಮಾಡಿದವರು. ಮಂಡ್ಯ ಜಿಲ್ಲೆಯ ಶಿಕ್ಷಣ ಸ್ವರೂಪವನ್ನು ಬದಲಾಯಿಸಿದ ಧೀಮಂತ ವ್ಯಕ್ತಿಯಾಗಿದ್ದವರು. ಆಧುನಿಕ ಜೀವನ ಸೃಷ್ಟಿಸುತ್ತಿರುವ ಗೊಂದಲಗಳಿಗೆ ಪರಿಹಾರವನ್ನು ಕೊಂಡುಕೊಳ್ಳುವುದು ಮುಖ್ಯವಾಗಿದ್ದು. ಶಂಕರೇಗೌಡ ಅವರು ಕಟ್ಟಿಕೊಂಡಿದ್ದಂತಹ ವಿಚಾರಧಾರೆಯಲ್ಲಿ, ಅವರ ಜೀವನದ ಹಾದಿಯನ್ನು ತಿಳಿದಾಗ ಬಹಳಷ್ಟು ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಕಸಾಪ ಸಂಚಾಲಕರಾದ ಡಾ.ಮೀರಾಶಿವಲಿಂಗಯ್ಯ ಅವರು ಮಾತನಾಡಿ ಮಂಡ್ಯ ಜಿಲ್ಲೆ ಕಂಡಂತಹ ಅತ್ಯುತ್ತಮ ರಾಜಕಾರಣಿ ಶಂಕರಗೌಡರವರು. ಅವರ ಆಲೋಚನಾ ಕ್ರಮ ದೇಶವನ್ನೇ ವ್ಯಾಪಿಸಿದೆ. ಅವರ ಶೈಕ್ಷಣಿಕ ಚಿಂತನೆ ಇವತ್ತಿಗೂ ನಮಗೆ ಆದರ್ಶವಾಗಿದೆ. ಹಿಂದೆ ಮೇಲುಕೋಟೆಯನ್ನು ಜ್ಞಾನ ಕೇಂದ್ರ ಎಂದು ಹೇಳುತ್ತಿದ್ದರು ಆದರೆ ಶಂಕರಗೌಡರು ಮಂಡ್ಯ ನಗರವನ್ನು ಕೂಡ ಜ್ಞಾನ ಕೇಂದ್ರವನ್ನಾಗಿ ಮಾಡಿದರು. ಕಲಾ ಪ್ರೇಮಿಯಾಗಿ ಮಂಡ್ಯ ಜಿಲ್ಲೆಯಲ್ಲಿ ಅನೇಕ ಕಲಾವಿದರು ರಂಗಭೂಮಿಗೆ ಕಲಾಡಿಲು ಶಂಕರಗೌಡರ ಕೊಡುಗೆ ಅಪಾರವಾಗಿದೆ. ಕರ್ನಾಟಕದ ಗಡಿ ಭಾಗಗಳಲ್ಲಿ ಕನ್ನಡ ಶಾಲೆಗಳನ್ನು ತೆರೆಯುತ್ತಾರೆ. 1968 ರ ನವೆಂಬರ್ ನಲ್ಲಿ ತಾಲೂಕು ಮಟ್ಟದಲ್ಲಿ ಕನ್ನಡವನ್ನು ಆಡಳಿತ ಭಾಷೆಯಾಗಿ ಬಳಕೆಯಾಗಬೇಕು ಎಂದು ಆದೇಶ ನೀಡಿದರು. ಕನ್ನಡಕ್ಕೆ ಒಬ್ಬ ಪಂಪ ಹೇಗೊ ಹಾಗೆ ಕರ್ನಾಟಕಕ್ಕೆ ಒಬ್ಬನೆ ಶಂಕರೇಗೌಡ ಎಂದು ಪಾಟೀಲ್ ಪುಟ್ಟಪ್ಪ ವ್ಯಾಖ್ಯಾನಿಸಿರುವುದನ್ನ ತಮ್ಮ ಭಾಷಣದಲ್ಲಿ ತಿಳಿಸಿದರು.

ಬೆಂಗಳೂರು ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಎಲ್.ಎನ್ ಮುಕುಂದರಾಜ್ ಅವರು ಮಾತನಾಡಿ ಕೆ ವಿ ಶಂಕರೇಗೌಡ ಅವರ ಸಾಧನೆಯು ಎಲ್ಲಾ ಕ್ಷೇತ್ರದಲ್ಲಿಯೂ ಅಪಾರವಾಗಿದ್ದು, ನಾನು ನನ್ನ ವಿದ್ಯಾರ್ಥಿ ಸಮಯದಲ್ಲಿ ಶಂಕರೇಗೌಡ ಅವರ 'ಕಬ್ಬಿನ ಹಾಲು' ಪುಸ್ತಕವನ್ನು ಓದಿ ಪ್ರೇರಿತನಾಗಿ ನಾನು ನನ್ನ ಪದವಿಯನ್ನು ಮುಗಿಸಿ ಪ್ರಾಧ್ಯಾಪಕನಾಗಿ ಇಂದು ಇಲ್ಲಿ ನಿಂತಿದ್ದೇನೆ. ಇಂದಿನ ರಾಜಕಾರಣಿಗಳಲ್ಲಿ ಸಾಂಸ್ಕೃತಿಕ ಪ್ರಜ್ಞೆ ಇರಬೇಕು. ಜೊತೆಗೆ ಸಾಹಿತಿಗಳೊಂದಿಗೆ ಸ್ನೇಹ ಬೆಳೆಸಿಕೊಳ್ಳಬೇಕು. ಏಕೆಂದರೆ ರಾಜಕಾರಣಿ ಸತ್ತ ಮೇಲೂ ಜೀವಂತ ಇರಬೇಕೆಂದರೆ ಅದು ಸಾಹಿತಿಗಳಿಂದ ಮಾತ್ರ ಸಾಧ್ಯ. ಸಾಹಿತ್ಯವನ್ನು ಜನರ ಬಳಿ ತೆಗೆದುಕೊಂಡು ಹೋಗುವ ಜವಾಬ್ದಾರಿ ಸಾಹಿತ್ಯ ಪರಿಷತ್ ಮೇಲೆ ಇದೆ ಎಂದು ತಿಳಿಸಿದರು.

# ಮಹರ್ಷಿ ವಾಲ್ಮೀಕಿ ಜಯಂತಿ, ಪ್ರಶಸ್ತಿ ಪ್ರದಾನ ಸಮಾರಂಭ

**ಬೆಂಗಳೂರು:** ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ವತಿಯಿಂದ 2024ನೇ ಸಾಲಿನ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ರಾಷ್ಟ್ರ ಮಟ್ಟದಲ್ಲಿ ಅಕ್ಟೋಬರ್ 17 ರಂದು ಬೆಳಿಗ್ಗೆ 9.30 ಕ್ಕೆ ಶಾಸಕರ ಭವನದ ಆವರಣದಲ್ಲಿರುವ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು ನಂತರ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದು, ರಾಜ್ಯದ ವಿವಿಧ ಜಿಲ್ಲೆಗಳಿಂದ ಗಣ್ಯರು ಮತ್ತು ಸಾರ್ವಜನಿಕರು ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಮುಖಂಡರುಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಪರಿಶಿಷ್ಟ ಜಾತಿ ಯುವಕ / ಯುವತಿಯರಿಗೆ ತರಬೇತಿ ಶಿಬಿರ

**ಬೆಂಗಳೂರು:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪರಿಶಿ?ಟ ಜಾತಿ ಯುವಕ/ ಯುವತಿಯರಿಗೆ ಸ್ವಯಂ ಉದ್ಯೋಗ ಒದಗಿಸಿಕೊಡುವ ನಿಟ್ಟಿನಲ್ಲಿ ಹೊಲಿಗೆ ಹಾಗೂ ವಿಡಿಯೋಗ್ರಫಿ ತರಬೇತಿ ಶಿಬಿರವನ್ನು ಬೆಂಗಳೂರಿನ ಕೋರಮಂಗಲದ ಒಳಾಂಗಣ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಹೊಲಿಗೆ ತರಬೇತಿ ಶಿಬಿರ 20 ದಿನಗಳಾಗಿದ್ದು, ಅಭ್ಯರ್ಥಿಗಳು ಎಸ್ಎಸ್ಎಲ್ಸಿ ಫೇಲ್ ಅಥವಾ ಪಾಸ್ ಆಗಿರಬೇಕು. ನವೆಂಬರ್ 7 ರಿಂದ 26 ರವರೆಗೆ ತರಬೇತಿ ನೀಡಲಾಗುವುದು. ವಿಡಿಯೋಗ್ರಫಿ ತರಬೇತಿ ಶಿಬಿರ 12 ದಿನಗಳಾಗಿದ್ದು, ಅಭ್ಯರ್ಥಿಗಳು ದ್ವಿತೀಯ ಪಿಯುಸಿ ಫೇಲ್ ಅಥವಾ ಪಾಸ್ ಆಗಿರಬೇಕು. ತರಬೇತಿಯು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ನಡೆಯುತ್ತದೆ. ತರಬೇತಿ ಶಿಬಿರದಲ್ಲಿ ಭಾಗವಹಿಸುವ ಯುವಕ/ಯುವತಿಯರಿಗೆ ಲಘು ಉಪಹಾರ ಒದಗಿಸಲಾಗುವುದು. ಶಿಬಿರಾರ್ಥಿಗಳಿಗೆ ಪ್ರಯಾಣ ಭತ್ಯೆ ನೀಡಲಾಗುವುದು. ಅಭ್ಯರ್ಥಿಗಳ ವಯೋಮಾನ 18 ರಿಂದ 40 ವ?ದೊಳಗಿನ ಯುವಕ/ಯುವತಿಯರು ಮಾತ್ರ ಭಾಗವಹಿಸಲು ಅರ್ಹರು. ಹೊರ ಜಿಲ್ಲೆಗಳಿಂದ ಆಗಮಿಸುವ ಶಿಬಿರಾರ್ಥಿಗಳಿಗೆ ಸಾಮಾನ್ಯ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು.ಆಸಕ್ತ ಯುವಕ/ ಯುವತಿಯರು ತಮ್ಮ ಜನ್ಮ ದಿನಾಂಕದ ದಾಖಲೆಯೊಂದಿಗೆ (ಎಸ್.ಎಸ್. ಎಲ್.ಸಿ. ಅಂಕಪಟ್ಟಿ ಪ್ರತಿ) ಕಚೇರಿಯ ವಿಳಾಸದಲ್ಲಿ ಹೆಸರು ನೋಂದಾಯಿಸಿಕೊಳ್ಳಬಹುದು.ಹೆಚ್ಚಿನ ವಿವರಗಳಿಗಾಗಿ ಸಹಾಯವಾಣಿ ಸಂಖ್ಯೆ : 155265 ಹಾಗೂ ಉಪ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು-01, ಮೊಬೈಲ್ ಸಂಖ್ಯೆ: 9731251411 ಕಚೇರಿ ವೇಳೆಯಲ್ಲಿ ಸಂಪರ್ಕಿಸುವುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರಿಗೆ ಸಂಸ್ಥೆ ವಾಹನಗಳಲ್ಲಿ ಯುಪಿಐ ವಹಿವಾಟುಗಳ ಮೂಲಕ ಟಿಕೆಟ್ ವಿತರಣೆ

**ಬೆಂಗಳೂರು:** ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಾಹನಗಳಲ್ಲಿ ಸಾರ್ವಜನಿಕ ಪ್ರಯಾಣಿಕರಿಗೆ ಚಿಲ್ಲರೆ ಸಮಸ್ಯೆಯನ್ನು ಬಗೆಹರಿಸಿ, ಸಾರಿಗೆ ವ್ಯವಸ್ಥೆಯಲ್ಲಿ ಆಧುನಿಕ ತಂತ್ರಜ್ಞಾನವನ್ನು ಉಪಯೋಗಿಸಿಕೊಂಡು ಕಾರ್ಯಾಚರಣೆಯನ್ನು ಉತ್ತಮಪಡಿಸಲು ನಗದುರಹಿತ ಯುಪಿಐ ವಹಿವಾಟುಗಳ ಮೂಲಕ ಟಿಕೆಟ್ ವಿತರಣೆಯನ್ನು ಪ್ರಾಯೋಗಿಕವಾಗಿ 2023 ನೇ ಸೆಪ್ಟೆಂಬರ್ 1 ರಿಂದ ಪ್ರಾರಂಭಿಸಿ, ಫೆಬ್ರವರಿ 2024 ರಂದು ಪೂರ್ಣ ಪ್ರಮಾಣದಲ್ಲಿ ಸಂಸ್ಥೆಯ 50 ಘಟಕಗಳಲ್ಲಿ ಅಳವಡಿಸಲಾಗಿದೆ. 2024 ನೇ ಅಕ್ಟೋಬರ್ 13 ರ ವರೆಗೆ ಯುಪಿಐ ವಹಿವಾಟಿನಿಂದ ಒಟ್ಟು 55.96 ಲಕ್ಷ ವಹಿವಾಟು ಗಳಿಂದ ರೂ. 50.53 ಕೋಟಿ ಸಂಗ್ರಹವಾಗಿರುತ್ತದೆ. ಪ್ರಸ್ತುತ ಪ್ರತಿ ದಿನ ಸರಾಸರಿ 27000 ವಹಿವಾಟುಗಳಿಂದ ರೂ.22.52 ಲಕ್ಷಗಳ?ಟು ಸಂಗ್ರಹವಾಗುತ್ತಿದೆ ಎಂದು ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಪ್ರಿಯಾಂಗಾ ಎಂ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 20 ರಂದು ಉದ್ಯೋಗ ಮೇಳ

**ಬೆಂಗಳೂರು:** ಭಾರತ ಸರ್ಕಾರದ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಮಂತ್ರಾಲಯ ಅಧೀನದಲ್ಲಿ ಬರುವ ಸ್ವಾಯತ್ತ ವೈಜ್ಞಾನಿಕ ಸಂಸ್ಥೆಯಾದ ರಾಷ್ಟ್ರೀಯ ವಿದ್ಯುನ್ಮಾನ ಮತ್ತು ತಂತ್ರಜ್ಞಾನ ಸಂಸ್ಥೆಯು ಭಾರತ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯದ ನ್ಯಾ?ನಲ್ ಕೆರಿಯರ್ ಸರ್ವಿಸ್, ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಹಾಗೂ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಸಹಕಾರದೊಂದಿಗೆ ಬೆಂಗಳೂರು ನಗರ ಜಿಲ್ಲೆಯ ಕೆ.ಎಲ್.ಇ ಸಂಸ್ಥೆಯ ಎಸ್. ನಿಜಲಿಂಗಪ್ಪ ಮಹಾವಿದ್ಯಾಲಯ, ನಂ.1040, 28ನೇ ಕ್ರಾಸ್ ರಸ್ತೆ, 2ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು-10, ಇಲ್ಲಿ ಅಕ್ಟೋಬರ್ 20 ರಂದು ಉದ್ಯೋಗಮೇಳ ಆಯೋಜಿಸಲಾಗಿದೆ.ಉದ್ಯೋಗ ಮೇಳದಲ್ಲಿ 100ಕ್ಕಿಂತ ಹೆಚ್ಚಿನ ಪ್ರತಿಷ್ಠಿತ ಬೃಹತ್ / ಮಾಧ್ಯಮ / ಸಣ್ಣ ಉದ್ಯೋಗದಾತ ಸಂಸ್ಥೆಗಳು ಭಾಗವಹಿಸಿ ತಮ್ಮ ಸಂಸ್ಥೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಎಸ್ಎಸ್ ಎಲ್ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ನರ್ಸಿಂಗ್, ಪದವಿ, ಸ್ನಾತಕೋತರ ಪದವಿ, ಇಂಜಿನಿಯರಿಂಗ್ ಹಾಗೂ ಇತರೆ ವಿದ್ಯಾರ್ಹತೆ ಹೊಂದಿರುವ ಉದ್ಯೋಗಾಕಾಂಕ್ಷಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ವಿವರಗಳನ್ನು https://jobfair.calicut.nielit.in/ನಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ. ಅಭ್ಯರ್ಥಿಗಳು ಬಯೋಡಾಟ ಹಾಗೂ ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲಾತಿಗಳ ಜೆರಾಕ್ಸ್ ಪ್ರತಿಗಳೊಂದಿಗೆ ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು.

# ಲಿಂಗಾಯತ ಪ್ರತ್ಯೇಕ ಧರ್ಮದ ಮಾನ್ಯತೆ

**ಮಂಡ್ಯ:** ಬಸವ ಧರ್ಮ ಪೀಠದ ಸ್ವಾಭಿಮಾನಿ ಶರಣರ ಬಳಗದ ವತಿಯಿಂದ ಅಕ್ಟೋಬರ್ 19 ಮತ್ತು 20 ರಂದು ಶರಣ ಭೂಮಿ ಬಸವಕಲ್ಯಾಣದಲ್ಲಿ ಸ್ವಾಭಿಮಾನಿ ಕಲ್ಯಾಣ ಪರ್ವ ಆಯೋಜಿಸಲಾಗಿದ್ದು ಮಂಡ್ಯ ಜಿಲ್ಲೆಯಿಂದ ಬಸವಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಎಸ್.ಮಂಜುನಾಥ್ ಬೆಟ್ಟಹಳ್ಳಿ ಮನವಿ ಮಾಡಿದ್ದಾರೆ.



ತೆಲಂಗಾಣ, ಮಹಾರಾಷ್ಟ್ರ, ತಮಿಳುನಾಡು, ಆಂಧ್ರಪ್ರದೇಶ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಿಂದ ಶರಣ ಶರಣೆಯರು ಪಾಲ್ಗೊಳ್ಳುತಿದ್ದಾರೆ. ಒಟ್ಟು 50 ಸಾವಿರ ಜನರು ಭಾಗವಹಿಸುವ ನಿರೀಕ್ಷೆ ಇದ್ದು ಚನ್ನಬಸವೇಶ್ವರ ಜ್ಞಾನಪೀಠದ ಪೀಠಾಧ್ಯಕ್ಷರಾದ ಪೂಜ್ಯ ಶ್ರೀ ಜಗದ್ಗುರು ಚನ್ನಬಸವಾನಂದಸ್ವಾಮೀಜಿಯವರ ಸಾನಿಧ್ಯದಲ್ಲಿ ಕಲ್ಯಾಣಪರ್ವ ನಡೆಯಲಿದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಅ.19ರ ಬೆ.11 ಗಂಟೆಗೆ ಉದ್ಘಾಟನಾ ಸಮಾರಂಭ ಜರುಗಲಿದ್ದು, ಅಂದು ಬೆಳಿಗ್ಗೆ 5 ಗಂಟೆಗೆ ಸುಪ್ರಭಾತ ಸಮಯದಲ್ಲಿ ಸಾಮೂಹಿಕ ಇಷ್ಟಲಿಂಗ ಪೂಜೆ, ಬಸವ ಚಿಂತನ ಪ್ರಭೆಯ ಮೂಲಕ ವೇದಿಕೆಯ ದೈವೀಕರಣ ನಡೆಯಲಿದೆ. ಅಂದು ಸಾ. 5 ಗಂಟೆಗೆ ಧರ್ಮಚಿಂತನ ಗೋಷ್ಠಿ- 1 ಜರುಗಲಿದೆ.

ಅ.20 ರಂದು ಬೆಳಿಗ್ಗೆ 8 ಗಂಟೆಗೆ ಸಾಮೂಹಿಕ ಪ್ರಾರ್ಥನೆ, ಇಷ್ಟಲಿಂಗ ಪೂಜೆ ಹಾಗೂ ಬೆ. 10-30 ಕ್ಕೆ ಶರಣ ವಂದನೆ 770 ಶರಣರಿಗೆ ಶರಣಾರ್ಥಿ ಹೃದಯಸ್ಪರ್ಶಿ ಕಾರ್ಯಕ್ರಮ ನಡೆಯಲಿದೆ. ಮ. 12 ರಿಂದ 2 ರ ವರೆಗೆ ಮಹಿಳಾಗೋಷ್ಠಿ ಮ. 3 ರಿಂದ 5 ರ ವರೆಗೆ ಯುವಗೋಷ್ಠಿ ಹಾಗೂ ಸಾಯಂಕಾಲ ಸಮಾರೋಪ ಸಮಾರಂಭ ಜರುಗಲಿದೆ. ಆಗಮಿಸುವ ಸಾವಿರಾರು ಶರಣರಿಗೆ ಪ್ರಸಾದ, ವಸತಿ ವ್ಯವಸ್ಥೆ ಇರಲಿದೆ. ಸ್ವಾಭಿಮಾನಿ ಕಲ್ಯಾಣ ಪರ್ವ ಎಂದರೆ ಇದೊಂದು ಕಲ್ಯಾಣದ ಹಬ್ಬ. ಪ್ರತಿಯೊಬ್ಬರೂ ಭಾಗವಹಿಸುವುದು ತಮ್ಮ ಆದ್ಯ ಕರ್ತವ್ಯ. ಆದ್ದರಿಂದ ಶರಣ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಅವರು ತಿಳಿಸಿದರು.

# ಪುರಸಭೆಯ 64 ವಾಣಿಜ್ಯ ಮಳಿಗೆ ಬಾಡಿಗೆ ಹರಾಜು ಪ್ರಕ್ರಿಯೆ ರದ್ದು

**ಬೇಲೂರು:** ಪುರಸಭೆಗೆ ಸೇರಿದ 64 ವಾಣಿಜ್ಯ ಮಳಿಗೆಗಳ ಬಾಡಿಗೆಯ ಇ-ಪ್ರಕ್ಯೂರ್ ಮೆಂಟ್ ಹರಾಜನ್ನು ಅಕ್ರಮ ವ್ಯವಹಾರದ ಆರೋಪದ ಮೇಲೆ ಪುರಸಭೆಯ ಅಧ್ಯಕ್ಷರು ರದ್ದುಪಡಿಸಿದ್ದಾರೆ. ಪುರಸಭೆಗೆ ಸೇರಿದ 64 ವಾಣಿಜ್ಯ ಮಳಿಗೆ ಅವಧಿ ಪೂರ್ಣಗೊಂಡ ಹಿನ್ನಲೆಯಲ್ಲಿ ಮರು ಬಾಡಿಗೆ ಹರಾಜಿಗೆ ಇ-ಪ್ರಕ್ಯೂರ್‌ಮೆಂಟ್ ಹರಾಜು ಮೂಲಕ ವಿಲೇವಾರಿಗೆ ಕ್ರಮ ಕೈಗೊಂಡು ಇಎಂಡಿ ಹಣ ಕಟ್ಟಲು ಅಕ್ರೋೀಬರ್ 10 ರಂದು ಕೊನೆ ದಿನವಾಗಿ ನಿಗಧಿಪಡಿಸಲಾಗಿತ್ತು. ಈ ನಡುವೆ ಹಾಲಿ ಮಳಿಗೆಯಲ್ಲಿ ಇರುವ ವ್ಯಾಪಾರಿಗಳ ಹೊರುತಪಡಿಸಿ ಇಎಂಡಿ ಹಣ ಕಟ್ಟಿರುವ ವ್ಯಕ್ತಿಗಳಲ್ಲಿ ಕೆಲವರು, ಹಾಲಿ ಮಳಿಗೆಯಲ್ಲಿ ಇರುವ ವ್ಯಾಪಾರಿಗಳ ಬಳಿ ಬಂದು 'ನಿಮ್ಮ ಮಳಿಗೆಯನ್ನು ನಾವು ಬಾಡಿಗೆಯಲ್ಲಿ ಕೂಗಿಕೊಂಡು ಪಡೆದುಕೊಳ್ಳುತ್ತೇವೆ, ನಾವು ಪಡೆದುಕೊಳ್ಳಬಾರದೆಂದರೆ ನಮಗೆ ಇಂತಿಷ್ಟು ಲಕ್ಷ ಹಣ ನೀಡಬೇಕು' ಎಂಬುದಾಗಿ ತಿಳಿಸಿದ್ದಾರೆ ಎನ್ನಲಾಗಿದೆ. ಈ ರೀತಿ ವ್ಯವಹಾರ ಕುದುರಿಸಿಕೊಳ್ಳುವ ಕುರಿತು ನಡೆದ ಸಭೆಯಲ್ಲಿನ ಆಡಿಯೋ ಪುರಸಭೆಯ ಅಧ್ಯಕ್ಷರಿಗೆ ಲಭ್ಯವಾಗಿದ್ದು ವಾಣಿಜ್ಯ ಮಳಿಗೆ ವಿಲೇವಾರಿಯಲ್ಲಿ ಅಕ್ರಮ ನಡೆಯುತ್ತಿದೆ ಎಂದು ಕಾರಣ ನೀಡಿ ಇ-ಪ್ರಕ್ಯೂರ್‌ಮೆಂಟ್ ಹರಾಜು ರದ್ದುಪಡಿಸಲಾಗಿದೆ ಎಂದು ಹೇಳಲಾಗಿದೆ. ಈ ಬಗ್ಗೆ ಅಧ್ಯಕ್ಷ ಎ.ಆರ್. ಅಶೋಕ್ ಪತ್ರಿಕೆಗೆ ಮಾಹಿತಿ ನೀಡಿ, ಮಳಿಗೆ ವಿಲೇವಾರಿ ಪಾರದರ್ಶಕತೆಯಾಗಿರಬೇಕು, ಆದರೆ ಎಲ್ಲೋ ಒಂದು ಕಡೆ ಅವ್ಯವಹಾರ, ಅಕ್ರಮದ ವಾಸನೆ ಬಂದಿದ್ದು ಇದಕ್ಕೆ ಪೂರಕವಾಗಿ ದಾಖಲೆಯೂ ಲಭ್ಯವಾಗಿರುವುದರಿಂದ ಜಿಲ್ಲಾಧಿಕಾರಿಗಳ ಬಳಿ ಚರ್ಚಿಸಿ ಬಾಡಿಗೆ ಹರಾಜು ಪ್ರಕ್ರಿಯೆ ರದ್ದುಪಡಿಸಲಾಗಿದೆ ಎಂದು ತಿಳಿಸಿದರು.



# ಸಜ್ಜನರ ಸಲ್ಲಾಪ ಕಾರ್ಯಕ್ರಮವು ಬಂಜಾರರ ಮುಂದಿನ ಪೀಳಿಗೆಗೆ ಆದರ್ಶಪ್ರಾಯ

**ಬೆಂಗಳೂರು:** ಅಕಾಡಮಿಯು ಅತ್ಯಂತ ಕಡಿಮೆ ಅನುದಾನ ಇದ್ದರು ನಿರಂತರವಾಗಿ ಸಂಸ್ಕೃತಿ ಮತ್ತು ಭಾಷೆಯ ಅಭಿವೃದ್ಧಿ ಕಾರ್ಯಗಳನ್ನು ಹಮ್ಮಿಕೊಳ್ಳುತ್ತಾ ಬಂದಿದ್ದು, ಭಾರತದಲ್ಲಿನ ಸುಮಾರು 463 ಸಣ್ಣ ಮತ್ತು ಅತಿ ಸಣ್ಣ ಸಮುದಾಯಗಳಲ್ಲಿ ಬಂಜಾರರ ಕಲೆ ಸಂಸ್ಕೃತಿ ವೇಷಭೂಷಣಗಳ ಕೊಡುಗೆಯನ್ನು ನೀಡಿದ್ದಾರೆ ಎಂದು ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯ ಅಧ್ಯಕ್ಷರಾದ ಡಾ.ಎ.ಆರ್. ಗೋವಿಂದಸ್ವಾಮಿ ಹೇಳಿದರು.

ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ವತಿಯಿಂದ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಕಳತಾವೂರ್ ಮಳಾವ್ - 02, ಸಜ್ಜನರ ಸಲ್ಲಾಪ - 02, ಮೀನಾರೋ ಪಾಮಣೋ-ತಿಂಗಳ ಅತಿಥಿ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಜ್ಜನರ ಸಲ್ಲಾಪ ಕಾರ್ಯಕ್ರಮವು ಬಂಜಾರರ ಮುಂದಿನ ಪೀಳಿಗೆಗೆ ಆದರ್ಶಪ್ರಾಯ ಈ ಹಿನ್ನಲೆಯಲ್ಲಿ ಪ್ರಥಮ ಅತಿಥಿಯಾಗಿ ನಾಡೋಜ. ಹಂಪ ನಾಗರಾಜಯ್ಯ ಹಾಗೂ ಎರಡನೇ ಅತಿಥಿಯಾಗಿ ಡಾ. ಸಣ್ಣರಾಮ ಅವರನ್ನು ಆಹ್ವಾನಿಸಿ ಅವರ ಬದುಕು ಬರಹ ಮತ್ತು ಕೊಡುಗೆಗಳನ್ನು ಮುಂದಿನ ಪೀಳಿಗೆಗೆ ನೀಡಬೇಕಾಗಿದೆ ಎಂದು ಅವರು ಹೇಳಿದರು.

ಬೆಂಗಳೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ಸೂರಪ್ಪ ನಾಯಕ ಮಾತನಾಡಿ,



ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯನ್ನು ಬೀದರ್‌ನಿಂದ ಚಾಮರಾಜನಗರದವರೆಗೆ ಪರಿಚಯಿಸುವಲ್ಲಿ ಅದ್ಯಕ್ಷರಾದ ಡಾ. ಎ. ಆರ್. ಗೋವಿಂದಸ್ವಾಮಿ ಅವರ ಕೊಡುಗೆ ಅಪಾರ ಎಂದು ಹೇಳಿದರು.

ತಿಂಗಳ ಅತಿಥಿಯಾಗಿ ಆಗಮಿಸಿದ್ದ ಡಾ. ಸಣ್ಣರಾಮ ಮಾತನಾಡಿ, ಬಂಜಾರರ ಸಂಸ್ಕೃತಿಯ ಅನನ್ಯತೆಯನ್ನು ಕುರಿತು ಮಾತನಾಡುತ್ತಾ ಜನಪದ ವಿದ್ವಾಂಸರ ಪ್ರಕಾರ ಶ್ರೇಷ್ಠ ಕನಿಷ್ಠ ಎಂಬುದು ಆಯಾ ಸಂಸ್ಕೃತಿ ಮತ್ತು ಚಾರಿತ್ರಿಕ ಅಂಶಗಳು ಬೆಳಕು ಚೆಲ್ಲುತ್ತದೆ. ಜಾನಪದ ಮತ್ತು ಮೌಖಿಕ ಪರಂಪರೆಯ ಪ್ರಕಾರ ಬಂಜಾರರ ಮೂಲ ಪುರುಷ ದಾದಾ ಮೌಲ ತ್ರೇತಾ ಯುಗದಲ್ಲಿ ಶ್ರೀ ಕೃಷ್ಣನ ಗೋವುಗಳನ್ನು ಪಾಲನೆ ಮಾಡುತ್ತಿದ್ದರು ಎಂದು ಉಲ್ಲೇಖಿಸುತ್ತಾ ಬಂಜಾರರ ಪರಂಪರೆ ಕ್ರಿ.ಪೂ.10 ನೇ ಶತಮಾನದಲ್ಲಿ ಅಸ್ತಿತ್ವದಲ್ಲಿತ್ತು. ಹಾಗೆಯೇ ಬಂಜಾರರ ಇತಿಹಾಸವು ಬೌದ್ಧ ಧರ್ಮದ ಕಾಲದಲ್ಲಿ ಒಂದು ವ್ಯಾಪಾರಿ ಸಮುದಾಯ ಬೌದ್ಧ ಧರ್ಮದ ಜನರಿಗೆ ದವಸ ಧಾನ್ಯಗಳನ್ನು ಲಕ್ಷಾಂತರ ಎತ್ತುಗಳ ಮೇಲೆ ಸಾಗಿಸುತ್ತಿದ್ದರು ಆ ಸಮಯದಲ್ಲಿ ಬಂಜಾರ ಸಮುದಾಯವು ಒಂದು ಎಂದರು.

ಕಾರ್ಯಕ್ರಮದಲ್ಲಿ ಸರಂಗಿ ಉಮಾ ನಾಯಕ್, ನಾಗರಾಜ ನಾಯ್ಕ್, ಮುಂತಾದವರು ಉಪಸ್ಥಿತರಿದ್ದರು.

# ನೋಡಬನ್ನಿ ಬೇಲೂರಿನ 228 ಗುಂಡಿಗಳ ಗೆಂಡೇಹಳ್ಳಿ ರಸ್ತೆ

**ಬೇಲೂರು:** ಸರಕಾರದ ಗ್ಯಾರಂಟಿ ಯೋಜನೆಯೋ ಮತ್ತಿನ್ನೇನೋ ಒಟ್ಟಾರೆ ಅಭಿವೃದ್ಧಿ ಕಾರ್ಯಗಳಿಗೆ ಸರಕಾರದಿಂದ ಅನುದಾನ ಬರುತ್ತಿಲ್ಲ.

ಪರಿಣಾಮ ತಾಲ್ಲೂಕಿನಲ್ಲಿ ಪ್ರಮುಖವಾದ ಯಾವುದೇ ಕೆಲಸಗಳಾಗುತ್ತಿಲ್ಲ. ಇದೇನು ಇಲ್ಲಿ ಬಿಜೆಪಿ ಶಾಸಕರಿದ್ದಾರೆ ಎಂದೇನಿಲ್ಲ. ಹಣವಿಲ್ಲದೆ ಯಾವುದೇ ಕೆಲಸಗಳು ಆಗುತ್ತಿಲ್ಲ. ಗ್ರಾಮೀಣ ಭಾಗದ ಹತ್ತು ಹಲವು ಅಭಿವೃದ್ಧಿ ಕಾಮಗಾರಿಗಳ ಬೇಡಿಕೆ ಇದ್ದರೂ ಕೇಳುವ ಜನರೇ ಮೌನವಹಿಸಿದ್ದಾರೆ, ಹಣದ ಕೊರತೆ ಬಗ್ಗೆ ಅವರಿಗೂ ಗೊತ್ತಾಗಿದೆ.

ಹೋಗಲಿ ಬಿಡಿ, ಹೊಸ ಕಟ್ಟಡ, ದುರಸ್ತಿ ಹೊಸ ಹೊಸ ಕಾಮಗಾರಿಗಳು ಹಣದ ಮುಗ್ಗಟ್ಟಿನಿಂದ ನಿಂತಿದ್ದರೂ, ಅಗತ್ಯವಾದ ಗುಂಡಿ ಬಿದ್ದಿರುವ ರಸ್ತೆಯ ಕೆಲಸಕ್ಕಾದರೂ ಕ್ರಮ ಕೈಗೊಳ್ಳಬಾರದೆ. ತಾಲ್ಲೂಕಿನಾದ್ಯಂತ ಪ್ರಮುಖ ರಸ್ತೆಗಳೂ ಸೇರಿದಂತೆ ಗ್ರಾಮೀಣ ಭಾಗದ ರಸ್ತೆಗಳು ಗುಂಡಿ ಬಿದ್ದು ಹಾಳಾಗಿದೆ. ಮಳೆಯ ನೀರು ತುಂಬಿಕೊಂಡು ಅಪಘಾತಕ್ಕೆ ಕಾರಣವಾಗುತ್ತಿದೆ.

ತಾಲ್ಲೂಕು ಕೇಂದ್ರದಿಂದ ಮೂಡಿಗೆರೆ, ಗೆಂಡೇಹಳ್ಳಿ, ಸಕಲೇಶಪುರ, ಹಾಸನ ಈ ಭಾಗದ ರಸ್ತೆಗಳಲ್ಲಿ ಹೋಗಬೇಕೆಂದರೆ ದೇಹ, ಮನಸ್ಸು ಗಟ್ಟಿಯಾಗೇ ಇರಬೇಕು. ಅದರಲ್ಲೂ ತಾಲ್ಲೂಕು ಕೇಂದ್ರದ ಹೊರವಲಯದಲ್ಲಿರುವ ಗೆಂಡೇಹಳ್ಳಿ ರಸ್ತೆಯಲ್ಲಿ ತುಂಬುಗರ್ಭಿಣಿಯರನ್ನು ಏನಾದರೂ ಕರೆತಂದರೆ ಮಾರ್ಗಮಧ್ಯೆಯೆ ಪ್ರಸವ ಗ್ಯಾರಂಟಿ ಎನ್ನುವಷ್ಟು ಗುಂಡಿ ಬಿದ್ದಿದೆ. ಈ ರಸ್ತೆಯ ಕಳಸಿನ ಕೆರೆಯ ಏರಿ ಮೇಲಷ್ಟೇ ಕೇವಲ ಅರ್ಧ



ಕಿ.ಮೀ.ದೂರವೂ ಇಲ್ಲದ ಇಲ್ಲಿ ಬರೋಬರಿ 228 ಗುಂಡಿಗಳಿವೆ.

ಆಟೋ, ಕಾರು, ಬೈಕು ಯಾವುದೇ ವಾಹನ ಇಲ್ಲಿ ಬರಬೇಕಾದರೆ ಗುಂಡಿಗಳ ತಪ್ಪಿಸಲಾಗದೆ ಬಗ್ಗಿ, ಬಾಗಿ, ವಾಲಾಡುತ್ತ ಬರಬೇಕು. ನೀರು ತುಂಬಿದ ಗುಂಡಿಯಲ್ಲಿ ಆಳ ಎಷ್ಟಿದೆ ಎಂಬುದ ತಿಳಿಯದವರು ಅನುಭವಿಸುವ ಪಾಡು ಹೇಳತೀರದು. ದ್ವಿಚಕ್ರ ವಾಹನದಲ್ಲಿ ವಸ್ತುಗಳನ್ನು ಇಟ್ಟುಕೊಂಡು ಬರುವವರಿಗೆ ಈ ರಸ್ತೆ ಯಮಯಾತನೆ ಅನುಭವ ನೀಡುತ್ತದೆ. ಎಷ್ಟೋ ಜನ ವಸ್ತು ಮೂಟೆಯೊಂದಿಗೆ ಬಿದ್ದಿರುವುದು ಉಂಟು.

ಇದೊಂದು ಮುಖ್ಯರಸ್ತೆಯಾಗಿದ್ದರೂ ಗಮನ ಹರಿಸಿಲ್ಲ. ಗುಂಡಿ ಮುಚ್ಚಲು ಯೋಜನೆ ಸಿದ್ದವಾಗಿದ್ದರೂ ಹಣದ ಕೊರತೆಯ ನೆಪವಿದೆ. ಉಳಿದಂತ ರಸ್ತೆಯ ಸ್ಥಿತಿಯೂ ಇದೇ ರೀತಿಯಲ್ಲಿದೆ. ಬೆಕ್ಕಿಗೆ ಗಂಟೆ ಕಟ್ಟುವವರು ಯಾರು? ಇದು ಸದ್ಯದ ಸ್ಥಿತಿ-ಪರಿಸ್ಥಿತಿ.



## ಎಸ್.ಎಂ.ಕಣ್ಣಪ್ಪ ಆಟೋಮೊಬೈಲ್ಸ್ ಜತೆ ಫ್ಲಿಕ್ಸ್‌ಬಸ್ ಇಂಡಿಯಾ ಒಪ್ಪಂದ

ಫ್ಲಿಕ್ಸ್‌ಬಸ್ ಇಂಡಿಯಾ, ಕೈಗೆಟುಕುವ ಮತ್ತು ಸುಸ್ಥಿರ ಪ್ರಯಾಣದ ಜಾಗತಿಕ ಟ್ರಾವೆಲ್-ಟೆಕ್ ನಾಯಕ ಮತ್ತು ಎಸ್.ಎಂ. ಕಣ್ಣಪ್ಪ (ಖಏಖ) ಆಟೋಮೊಬೈಲ್ಸ್ ಪ್ರೈವೇಟ್ ಲಿಮಿಟೆಡ್, ಬಸ್ ಬಾಡಿ ತಯಾರಿಕೆಯ ಮುಂಚೂಣಿ ಸಂಸ್ಥೆ ,ಇತ್ತೀಚೆಗೆ ಬೆಂಗಳೂರಿನ ದಿ ರಿಟ್ಜ್ ಕಾರ್ಲ್ಟನ್ನಲ್ಲಿ ನಡೆದ ಕಾರ್ಯಕ್ರಮದಲ್ಲಿ ತಿಳಿವಳಿಕೆ ಒಪ್ಪಂದ ಪತ್ರಕ್ಕೆ ಸಹಿ ಹಾಕಿದೆ. ಈ ಕಾರ್ಯತಂತ್ರದ ಪಾಲುದಾರಿಕೆಯು ಪ್ರಯಾಣಿಕ ಸಾರಿಗೆಗಾಗಿ ಎಸ್‌ಎಂಕೆಯ ಅತ್ಯಾಧುನಿಕ ಬಸ್ ಬಾಡಿ ಉತ್ಪಾದನಾ ಸಾಮರ್ಥ್ಯಗಳನ್ನು ಫ್ಲಿಕ್ಸ್‌ಬಸ್ನ ತಂತ್ರಜ್ಞಾನ-ಚಾಲಿತ ವೇದಿಕೆಯೊಂದಿಗೆ ಸಂಯೋಜಿಸುವ ಮೂಲಕ ಪ್ರಯಾಣದ ಅನುಭವವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಈ ಸಹಯೋಗವು ಮುಂದಿನ ವರ್ಷದಲ್ಲಿ, ಭಾರತದಾದ್ಯಂತ ಫ್ಲಿಕ್ಸ್‌ಬಸ್ ಇಂಡಿಯಾದ ಕಾರ್ಯಾಚರಣೆ ಪಾಲುದಾರರ ಅಗತ್ಯತೆಗಳನ್ನು ಪೂರೈಸಲು ಸಂಪೂರ್ಣವಾಗಿ ಕಸ್ಟಮೈಸ್ ಮಾಡಿದ ಫ್ಲಿಕ್ಸ್‌ಬಸ್ ಉತ್ಪನ್ನವನ್ನು ಅಭಿವೃದ್ಧಿಪಡಿಸಲು ಗಮನಹರಿಸುತ್ತದೆ. ಈ ಒಪ್ಪಂದದ ಕುರಿತು ಪ್ರತಿಕ್ರಿಯಿಸಿರುವ ಫ್ಲಿಕ್ಸ್‌ಬಸ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಶ್ರೀ ಸೂರ್ಯ ಖುರಾನಾ ಅವರು ಹೇಳಿದರು, 'ಎಸ್.ಎಂ.ಕಣ್ಣಪ್ಪ ಆಟೋಮೊಬೈಲ್ಸ್ ಜೊತೆಗಿನ ಸಹಭಾಗಿತ್ವದ ನಮ್ಮ ಯೋಜನೆಯು ಅತ್ಯಾಧುನಿಕ ವಾಹನಗಳೊಂದಿಗೆ ನಮ್ಮ ಕಾರ್ಯಾಚರಣೆ ಪಾಲುದಾರರನ್ನು ಸಬಲೀಕರಣಗೊಳಿಸುವ ಮೂಲಕ ಪ್ರಯಾಣಿಕರಿಗೆ ಅತ್ಯುತ್ತಮ ಪ್ರಯಾಣದ ಅನುಭವವನ್ನು ನೀಡುವ ನಮ್ಮ ಬದ್ಧತೆಯನ್ನು ಒತ್ತಿಹೇಳುತ್ತದೆ. ಇದು ತಾಂತ್ರಿಕ ಪ್ರಗತಿಯನ್ನು ಹೆಚ್ಚಿಸುವುದಲ್ಲದೆ, ಭಾರತದಲ್ಲಿ ದೂರದ ಪ್ರಯಾಣದ ರೂಪಾಂತರಕ್ಕೆ ಸಮರ್ಥವಾಗಿ ಕೊಡುಗೆ ನೀಡಲು ಸಾಧ್ಯವಾಗುತ್ತದೆ'.ಎಸ್.ಎಂ.ಕಣ್ಣಪ್ಪ ಆಟೋಮೊಬೈಲ್ಸ್ ಪ್ರೈವೇಟ್ ಲಿಮಿಟೆಟ್ನ ನಿರ್ದೇಶಕ ಶ್ರೀ ವೈಭವ್ ನಾರಂಗ್ ಅವರು ಹೇಳಿದರು, 'ಇದು ಭಾರತೀಯ ಬಾಡಿ ಬಿಲ್ಡರ್ಗಳು ಮಾಡಿದ ಪ್ರಗತಿಯನ್ನು ತೋರಿಸಲು ಎಸ್‌ಎಂಕೆಗೆ ಉತ್ತಮ ಅವಕಾಶವನ್ನು ನೀಡುತ್ತದೆ. ನಿಜವಾದ ಜಾಗತಿಕ ಉತ್ಪನ್ನವನ್ನು ಒದಗಿಸಲು ಎಸ್‌ಎಂಕೆಯ ಸಾಮರ್ಥ್ಯಗಳಲ್ಲಿ ತಮ್ಮ ನಂಬಿಕೆಯನ್ನು ಹೇರಿದ್ದಕ್ಕಾಗಿ ನಾವು ಫ್ಲಿಕ್ಸ್‌ಬಸ್ ಇಂಡಿಯಾಕ್ಕೆ ಧನ್ಯವಾದಗಳನ್ನು ಅರ್ಪಿಸುತ್ತೇವೆ'.

## ಮಸಾಲೆ ಚಟ್ನಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

1 ತೆಂಗಿನಕಾಯಿ-1, 2.ಬೆಳ್ಳುಳ್ಳಿ-20-25, 3. ಈರುಳ್ಳಿ-2, 4. ಮೆಣಸು-10 ಕಾಳು, 5. ಜೀರಿಗೆ-1/2 ಚಮಚ, 5. ಹಸಿ ಮೆಣಸಿನ ಕಾಯಿ-10, 6. ಕೊತ್ತಂಬರಿ ಸೊಪ್ಪು- 10 ಕಡ್ಡಿ, 7. ಟೊಮ್ಯಾಟೋ-1, 8. ಉಪ್ಪು- 1/2 ಚಮಚ, 10. ಕರಿಬೇವು-4 ಕಡ್ಡಿ,

### ಮಾಡುವ ವಿಧಾನ

ತೆಂಗಿನಕಾಯಿಯನ್ನು ತುರಿದು, ಬಾಣಲೆಗೆ ಸ್ವಲ್ಪ ಕಡಲೆಕಾಯಿ ಎಣ್ಣೆ ಹಾಕಿ ಕಾಯಿತುರಿಯನ್ನು ಕೆಂಪಗೆ ಹುರಿದುಕೊಳ್ಳಬೇಕು. ಬಳಿಕ ಅದಕ್ಕೆ ಬೆಳ್ಳುಳ್ಳಿ, ಮೆಣಸು, ಜೀರಿಗೆ, ಹಸಿ ಮೆಣಸಿನಕಾಯಿ, ಟೊಮ್ಯಾಟೋ, ಕರಿಬೇವು, ಕೊತ್ತಂಬರಿ ಸೊಪ್ಪು, ಹೆಚ್ಚಿಟ್ಟುಕೊಂಡ 1ಈರುಳ್ಳಿ ಎಲ್ಲವನ್ನು ಕೆಂಪಗೆ ಹುರಿದಿಟ್ಟುಕೊಳ್ಳಬೇಕು.

ಅದು ತಣ್ಣಗಾದ ಮೇಲೆ ಎಲ್ಲವನ್ನು ಮಿಕ್ಸಿ ಜಾರಿಗೆ ಹಾಕಿ ಸ್ವಲ್ಪ ಉಪ್ಪು ಹಾಕಿ ರುಬ್ಬಿಕೊಳ್ಳಬೇಕು. ಮತ್ತೊಂದು ಈರುಳ್ಳಿಯನ್ನು ಸಣ್ಣಗೆ ಹೆಚ್ಚಿಕೊಂಡು ಅದನ್ನು ಬಾಣಲೆಯಲ್ಲಿ ಹಾಕಿ ಚಿನ್ನದ ಬಣ್ಣ ಬರುವವರೆಗೂ ಹುರಿದು ಕೊಂಡು ರುಬ್ಬಿದ ಚಟ್ನಿಗೆ ಮಿಕ್ಸ್ ಮಾಡಿದರೆ ಮಸಾಲೆ ಚಟ್ನಿ ರೆಡಿ.

## ರಶ್ಮಿಕಾ ಮಂದಣ್ಣ: ಸೈಬರ್ ಸೆಕ್ಯುರಿಟಿ ರಾಯಭಾರಿ ಆಗಿ ಆಯ್ಕೆ

ಕೊಡಗಿನ ಬೆಡಗಿ, ನ್ಯಾಷನಲ್ ಕ್ರಶ್ ರಶ್ಮಿಕಾ ಮಂದಣ್ಣ ಸಾಮಾಜಿಕ ಜಾಲತಾಣದಲ್ಲಿ ಸಖತ್ ಆಕ್ಟೀವ್ ಆಗಿದ್ದಾರೆ. ಅತಿ ಹೆಚ್ಚು ಫ್ಯಾನ್ಸ್ ಹೊಂದಿರೋ ಇವರು ಒಂದಲ್ಲ ಮತ್ತೊಂದು ವಿಚಾರಕ್ಕೆ ಸದಾ ಸುದ್ದಿಯಾಗುತ್ತಲೇ ಇರುತ್ತಾರೆ.

ಈ ಹಿಂದೆ ಸೋಷಿಯಲ್ ಮೀಡಿಯಾದಲ್ಲಿ ಡೀಪ್ ಫೇಕ್ ವಿಡಿಯೋನಿಂದ ಸಮಸ್ಯೆ ಎದುರಿಸಿದ್ದ ರಶ್ಮಿಕಾ ಇದೀಗ ಭಾರತದ ಸೈಬರ್ ಸೆಕ್ಯುರಿಟಿ ರಾಯಭಾರಿ ಆಗಿ ಆಯ್ಕೆ ಆಗಿದ್ದಾರೆ.ಕೇಂದ್ರ ಗೃಹ ಇಲಾಖೆ ಅಡಿಯಲ್ಲಿ ಕಾರ್ಯ ನಿರ್ವಹಿಸುವ ಐ4ಸಿ (ಇಂಡಿಯನ್ ಸೈಬರ್ಕ್ರೈಂ ಕೋಆರ್ಡಿನೇಷನ್ ಸೆಂಟರ್) ರಶ್ಮಿಕಾ ಮಂದಣ್ಣರನ್ನು ಭಾರತೀಯ ಸೈಬರ್ ಸುರಕ್ಷಾ ಕಾರ್ಯಕ್ರಮದ ರಾಯಭಾರಿಯಾಗಿ ನೇಮಕ ಮಾಡಿದೆ. ರಶ್ಮಿಕಾ ಮಂದಣ್ಣ, ಇನ್ನು ಮುಂದೆ ಅಪಾಯಕಾರಿ ಸೈಬರ್ ಕ್ರೈಂ, ಡೀಪ್ ಫೇಕ್ ವಿಡಿಯೋ, ಆನ್ಲೈನ್ ಫ್ರಾಡ್ ಇನ್ನಿತರೆ ಸೈಬರ್ ಸಂಬಂಧಿ ಅಪರಾಧಗಳ ಕುರಿತಾಗಿ ಸಾಕ್ಷರತೆ, ಜಾಗೃತೆ ಮೂಡಿಸುವ ಕಾರ್ಯವನ್ನು ತೊಡಗಿಕೊಳ್ಳಲಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ರಶ್ಮಿಕಾ ಮಂದಣ್ಣ, 'ಸೈಬರ್ ಅಪರಾಧವು ಅಪಾಯಕಾರಿ ಮತ್ತು ವ್ಯಾಪಕವಾದ ಸಮಸ್ಯೆಯಾಗಿದೆ. ಅದು ಪ್ರಪಂಚದಾದ್ಯಂತ ಇರುವ ವ್ಯಕ್ತಿಗಳು, ವ್ಯವಹಾರಗಳು ಮತ್ತು ಸಮುದಾಯಗಳ ಮೇಲೆ ಪರಿಣಾಮ ಬೀರುತ್ತದೆ. ಸೈಬರ್ ಸಮಸ್ಯೆಯನ್ನು ಅನುಭವಿಸಿರುವ ವ್ಯಕ್ತಿಯಾಗಿ, ಈ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಧನಾತ್ಮಕ ಬದಲಾವಣೆಯನ್ನು ತರಲು ಸೈಬರ್ ಸುರಕ್ಷತೆಯ ಸಂದೇಶವನ್ನು ಪ್ರಚಾರ ಮಾಡಲು ನಾನು ಉತ್ಸುಕಳಾಗಿದ್ದೇನೆ. ಈ ಕಾರ್ಯದಲ್ಲಿ ನಾನು ಸಕ್ರಿಯವಾಗಿ ತೊಡಗಿಕೊಳ್ಳಲಿದ್ದೇನೆ. ಈ ಸೈಬರ್ ಬೆದರಿಕೆಗಳನ್ನು ಎದುರಿಸಲು ಮತ್ತು ನಮ್ಮ ಡಿಜಿಟಲ್ ಸ್ಥಳಗಳನ್ನು ರಕ್ಷಿಸಲು ನಾವು ಒಗ್ಗೂಡುವುದು ಬಹಳ ಮುಖ್ಯವಾಗಿದೆ' ಎಂದಿದ್ದಾರೆ.

ಕಳೆದ ವರ್ಷ ರಶ್ಮಿಕಾ ಮಂದಣ್ಣ ಅವರ ಡೀಪ್ ಫೇಕ್ ವಿಡಿಯೋ ಒಂದು ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿತ್ತು. ಯಾವುದೋ ಯುವತಿಯ ಅರೆಬೆತ್ತಲೆ ವಿಡಿಯೋಕ್ಕೆ ರಶ್ಮಿಕಾ ಮಂದಣ್ಣರ ಮುಖವನ್ನು ಜೋಡಿಸಲಾಗಿತ್ತು. ವಿಡಿಯೋ ನೋಡಿದವರು ಇದು ರಶ್ಮಿಕಾರದ್ದೇ ವಿಡಿಯೋ ಎನ್ನುವಂತಿತ್ತು ಅದು. ವಿಡಿಯೋ ವೈರಲ್ ಆದ ಬಳಿಕ ಅಮಿತಾಬ್ ಬಚ್ಚನ್, ಸಿದ್ಧಾರ್ಥ್ ಮಲ್ಹೋತ್ರಾ ಸೇರಿದಂತೆ ಹಲವರು ಆ ವಿಡಿಯೋವನ್ನು ವಿರೋಧಿಸುವ ಜೊತೆಗೆ ರಶ್ಮಿಕಾಗೆ ಬೆಂಬಲ ಸೂಚಿಸಿದ್ದರು. ಬಳಿಕ ಆ ವಿಡಿಯೋಕ್ಕೆ ಸಂಬಂಧಿಸಿದಂತೆ ಇಬ್ಬರನ್ನು ಅರೆಸ್ಟ್ ಮಾಡಲಾಗಿತ್ತು.



## ಚಳಿಗಾಲದಲ್ಲಿ ಕಡಲೇಕಾಯಿ ಸೇವನೆ



ಚಳಿಗಾಲದ ಕೊರೆತಕ್ಕೆ ಛಾವಣಿ ಮೇಲೆ ಕುಳಿತು ಬಿಸಿಲಿಗೆ ಮೈಯೊಡ್ಡಿಕೊಂಡು ಬಟ್ಟಲು ತುಂಬಾ ಕಡ್ಲೇಕಾಯಿ ತಿನ್ನುವುದು ಎಷ್ಟು ಮಜಾ ಅಲ್ಲವೇ? ಕಡಲೇಕಾಯಿ ಬೀಜಗಳು ಬಲು ರುಚಿಯಾಗಿರುವುದಲ್ಲದೇ ಆರೋಗ್ಯಕರವೂ ಹೌದು. ತೂಕ ಕಳೆದುಕೊಳ್ಳಲು, ಜೀರ್ಣಂಗಗಳ ಆರೋಗ್ಯಕ್ಕೆ, ಅಥವಾ ಹೊಟ್ಟೆ ತುಂಬಲು ಕಡಲೇಕಾಯಿ ಹೇಳಿ ಮಾಡಿಸಿದ ತಿನಿಸು. ಆದರೆ ಕೆಲವರು ಕಡಲೇಕಾಯಿಯ ಚಟ ಅಂಟಿಸಿಕೊಂಡು, ತೀರಾ ಅದರಿಂದಲೇ ಆರೋಗ್ಯ ಹಾಳು ಮಾಡಿಕೊಂಡು ಬಿಡುತ್ತಾರೆ.

ಪಥ್ಯ ತಜ್ಞರು ಕಡಲೇಕಾಯಿಗಳ ಆರೋಗ್ಯಪೂರ್ಣ ಪ್ರಮಾಣಗಳ ಕುರಿತು ಹೀಗೆ ಮಾತನಾಡಿದ್ದಾರೆ: ''ಬಾದಾಮಿಗೆ ಸಮನಾದ ಕಡಲೇಕಾಯಿಯಲ್ಲಿ ಭಾರೀ ಪ್ರಯೋಜನಗಳಿವೆ. ಆದರೆ ಎಷ್ಟು ಪ್ರಮಾಣದಲ್ಲಿ ಸೇವನೆ ಮಾಡಬೇಕೆಂಬುದು ಗೊಂದಲದ ವಿಚಾರ. ಕಡಲೇಕಾಯಿಗಳು ನಿಮಗೆ ಪ್ರೋಟೀನ್, ವಿಟಮಿನ್ಗಳು, ಖನಿಜಗಳು ಹಾಗೂ ಆರೋಗ್ಯಕರ ಕೊಬ್ಬಿನಂಶ ನೀಡುವುದರೊಂದಿಗೆ 30 ಅತ್ಯವಶ್ಯಕ ವಿಟಮಿನ್ಗಳು ಹಾಗೂ ಖನಿಜಗಳನ್ನು ಹೊಂದಿವೆ. ಕಡಲೇಕಾಯಿ ನಾರಿನಂಶದ ಉತ್ತಮ ಮೂಲ. ಚಳಿಗಾಲದಲ್ಲಿ ಪ್ರತಿನಿತ್ಯ 30-40 ಗ್ರಾಂ ಕಡಲೇಕಾಯಿ ಸೇವನೆಯಿಂದ ತೂಕ ಕಳೆದುಕೊಳ್ಳಲು ಅನುವಾಗುವುದಲ್ಲದೇ, ಹಸಿವನ್ನು ನಿಯಂತ್ರಣದಲ್ಲಿಟ್ಟು, ನಿಮ್ಮ ಹೊಟ್ಟೆ ತುಂಬಿದಂತೆ ಬಹುಕಾಲ ಇಡಬಲ್ಲದಾಗಿದೆ.''

ಕಡಲೇಕಾಯಿಯಲ್ಲಿರುವ ಆರೋಗ್ಯಕರ ಕೊಬ್ಬಿನಂಶದ ಜೊತೆಗೆ ಮ್ಯಾಗ್ನೇಶಿಯಂ, ಆಂಟಿಆಕ್ಸಿಡೆಂಟ್ಸ್, ತಾಮ್ರ ಮತ್ತು ಇತರೆ ಅತ್ಯವಶ್ಯಕ ಪೋಷಕಾಂಶಗಳು ಅದನ್ನು ಆರೋಗ್ಯಕರ ಆಹಾರವನ್ನಾಗಿ ಮಾಡಿದೆ.

### ಹೆಲ್ತ್ ಟಿಪ್ಸ್

ಮಧುಮೇಹ ರೋಗಿಗಳಿಗೆ, ಆಹಾರ ಹೊಟ್ಟೆಯೊಳಗೆ ಜೀರ್ಣಗೊಂಡು ರಕ್ತದ ಹರಿವಿನಲ್ಲಿ ಸೇರಿಕೊಂಡು ದೇಹದಲ್ಲಿರುವ ಗ್ಲೂಕೋಸ್ ಮಟ್ಟದ ಮೇಲೆ ಪರಿಣಾಮ ಬೀರುವ ದರವಾದ ಗ್ಲೈಸೆಮಿಕ್ ಸೂಚ್ಯಂಕ ಕಡಿಮೆ ಇರುವ ಪಥ್ಯ ಬೇಕಾಗುತ್ತದೆ. ಕಡಲೇಕಾಯಿಯಲ್ಲಿ ಕಡಿಮೆ ಮಟ್ಟದಲ್ಲಿ ಗ್ಲೈಸೆಮಿಕ್ ಸೂಚ್ಯಂಕವಿದ್ದು, ರಕ್ತದಲ್ಲಿರುವ ಸಕ್ಕರೆ ಪ್ರಮಾಣವನ್ನು ಅದು ವ್ಯಾಪಕವಾಗಿ ಏರಿಸುವುದಿಲ್ಲ. ಟೈಪ್-2 ಮಧುಮೇಹದಿಂದ ಬಳಲುತ್ತಿರುವ ಮಹಿಳೆಯರಿಗೆ ಕಡಲೇಕಾಯಿ ಉತ್ತಮವಾಗಿದೆ ಎಂದು ಅಧ್ಯಯನಗಳು ತಿಳಿಸುತ್ತವೆ.

ಕಡಲೇಕಾಯಿಯಲ್ಲಿ ನಾರಿನಂಶ ಜೋರಾಗಿರುವ ಕಾರಣ ಜೀರ್ಣಾಂಗದ ಆರೋಗ್ಯಕ್ಕೆ ಒಳ್ಳೆಯ ಆಯ್ಕೆಯಾಗಿದೆ.

## ಬೇಬಿ ಬಂಪ್ ಫೋಟೋ ಹಂಚಿಕೊಂಡ ರೆಬೆಲ್ ಸ್ಟಾರ್ ಸೊಸೆ



ರೆಬೆಲ್ ಸ್ಟಾರ್ ಅಂಬರೀಶ್ ಪುತ್ರ ಅಭಿಷೇಕ್ ಅವರು ತಂದೆಯಾಗುತ್ತಿರುವ ಸಂಭ್ರಮದಲ್ಲಿದ್ದಾರೆ. ಪುಟ್ಟ ಕಂದಮ್ಮನ ಆಗಮನಕ್ಕಾಗಿ ಎದುರು ನೋಡುತ್ತಿದ್ದಾರೆ. ಈ ನಡುವೆ ಅಭಿಷೇಕ್ ಪತ್ನಿ ಅವಿವ ಬೇಬಿ ಬಂಪ್ ಫೋಟೋವನ್ನು ಹಂಚಿಕೊಂಡಿದ್ದಾರೆ.

ತಾಯ್ತನದ ಕಳೆ ಅವಿವಗೆ ಎದ್ದು ಕಾಣುತ್ತಿದೆ. ಪಿಂಕ್ ಬಣ್ಣದ ಸೀರೆಯುಟ್ಟು ಅವಿವ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ನಟಿಯ ಬೇಬಿ ಬಂಪ್ ಫೋಟೋಗೆ ಯಂಗ್ ಜ್ಯೂ.ರೆಬೆಲ್ ಸ್ಟಾರ್ ಮನೆಗೆ ಬರಲಿದ್ದಾರೆ ಎಂದೆಲ್ಲಾ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ. ಕಳೆದ ತಿಂಗಳು ಅವಿವಗೆ ಸೀಮಂತ ಶಾಸ್ತ್ರ ಮಾಡಲಾಯಿತು. ಹಸಿರು ಬಣ್ಣದ ಸೀರೆಯುಟ್ಟು ಅಭಿಷೇಕ್ ಪತ್ನಿ ಮುದ್ದಾಗಿ ಕಾಣಿಸಿಕೊಂಡಿದ್ದರು. ಇನ್ನೂ ಬೆಂಗಳೂರಿನ ಸುಮಲತಾ ನಿವಾಸದಲ್ಲಿಯೇ ನಡೆದ ಈ ಸೀಮಂತ ಸಂಭ್ರಮದಲ್ಲಿ ಪ್ರಿಯಾಂಕಾ ಉಪೇಂದ್ರ ಸೇರಿದಂತೆ ಅನೇಕರು ಭಾಗಿಯಾಗಿದ್ದರು. ಸರಳವಾಗಿ ಜರುಗಿದ ಈ ಸಮಾರಂಭದಲ್ಲಿ ಕುಟುಂಬಸ್ಥರು, ಆಪ್ತರಿಗಷ್ಟೇ ಆಹ್ವಾನ ನೀಡಲಾಗಿತ್ತು.

## ಮುಖ- ತಲೆಯಲ್ಲಿ ಬರುವ ಬೆವರು ನಿವಾರಣೆಗೆ ಸುಲಭ ಮದ್ದು

### ಬ್ಯೂಟಿ ಟಿಪ್ಸ್



ದೇಹದಲ್ಲಿ ಬೆವರು ಬರುವುದು ಸಾಮಾನ್ಯ ಸಂಗತಿ. ಉಷ್ಣಾಂಶವನ್ನು ಕಡಿಮೆ ಮಾಡಿ ದೇಹವನ್ನು ತಣ್ಣಗಾಗಿಸುವ ಪ್ರಕ್ರಿಯೆ ಇದು. ಆದ್ರೆ ಅತಿಯಾಗಿ ಬೆವರುವುದು ಸಾಮಾನ್ಯ ಲಕ್ಷಣವಲ್ಲ. ಇದಕ್ಕೆ ಕಾರಣ ಮತ್ತು ಪರಿಹಾರವನ್ನು ಖುದ್ದು ವೈದ್ಯರೇ ತಿಳಿಸಿಕೊಟ್ಟಿದ್ದಾರೆ. ದೇಹವು ಸ್ವತಃ ತಣ್ಣಗಾಗಲು ತಾಪಮಾನ ನಿಯಂತ್ರಣದ ಒಂದು ರೂಪವಾಗಿ ಬೆವರನ್ನು ಬಳಸುತ್ತದೆ. ಅತಿಯಾದ ಬೆವರುವಿಕೆ ಅಥವಾ ಸಾಮಾನ್ಯಕ್ಕಿಂತ ಹೆಚ್ಚು ಬೆವರುವಿಕೆಯನ್ನು ವೈದ್ಯಕೀಯವಾಗಿ ಹೈಪರ್ಹೈಡ್ರೋಸಿಸ್ ಎಂದು ಕರೆಯಲಾಗುತ್ತದೆ. ಬಿಸಿಲಲ್ಲಿ ನಡೆದಾಗ, ವ್ಯಾಯಾಮ ಮಾಡಿದಾಗ, ಬಿಸಿಯಾದ ಪಾನೀಯ ಸೇವಿಸಿದಾಗ ಬೆವರುವುದು ಸಹಜ. ಆದ್ರೆ, ಯಾವುದೇ ಸ್ಪಷ್ಟ ಕಾರಣವಿಲ್ಲದೆ ಅತಿಯಾಗಿ ಬೆವರು ಬರುತ್ತಿದ್ದರೆ ಅದು ನೀವು ತೆಗೆದುಕೊಳ್ಳುತ್ತಿರುವ ಔಷಧಿಯ ಅಡ್ಡ ಪರಿಣಾಮವಾಗಿರಬಹುದು. ಶೇ 1-2ರಷ್ಟು ಜನರಲ್ಲಿ ಇದು ಕಂಡು ಬರುತ್ತದೆ. ಕೆಲವರಿಗೆ ಮುಖ ಮತ್ತು ತಲೆ ಅತಿಯಾಗಿ ಬೆವರುವುದುಂಟು. ಇದಕ್ಕೆ ಕ್ರಾನಿಯೋಫೇಶಿಯಲ್ ಹೈಪರ್ಹೈಡ್ರೋಸಿಸ್ ಎಂದು ಕರೆಯಲಾಗುತ್ತದೆ. ಇದಕ್ಕೆ ಆನುವಂಶಿಕ ಕಾರಣಗಳೂ ಇರುತ್ತವೆ. ಬೆವರು ಗ್ರಂಥಿಗಳು ಹೆಚ್ಚಿನ ಪ್ರಮಾಣದಲ್ಲಿದ್ದರೆ, ಹವಾಮಾನ ಪರಿಸ್ಥಿತಿ, ವಿಪರೀತದ ಭಾವನೆಗಳು, ಕೆಲವು ಔಷಧಿಗಳು ಮತ್ತು ವೈದ್ಯಕೀಯ ಪರಿಸ್ಥಿತಿಗಳು ಸಹ ಮುಖ ಮತ್ತು ತಲೆಯ ಮೇಲೆ ಅತಿಯಾದ ಬೆವರುವಿಕೆಯನ್ನು ಉಂಟುಮಾಡಬಹುದು.

ಅತಿಯಾದ ಬೆವರುವಿಕೆಯಿಂದ ಅಂತಹ ಸಮಸ್ಯೆಗಳೇನಿಲ್ಲ. ಆದ್ರೆ ಇದು ಒಂದು ಬಗೆಯ ಅನಾನುಕೂಲತೆ ಸೃಷ್ಟಿಸುತ್ತದೆ. ಹಾಗಾಗಿ ಬೆವರು ಗ್ರಂಥಿಗಳಿಗೆ ನರಗಳಿಂದ ಉಂಟಾಗುವ ಅತಿಯಾದ ಪ್ರಚೋದನೆಯನ್ನು ಕಡಿಮೆ ಮಾಡಲು ಬೊಟೊಕ್ಸ್ ಮಾಡಿಸಿಕೊಳ್ಳಬಹುದು. 8 ತಿಂಗಳುಗಳ ಕಾಲ ಇದು ಪರಿಣಾಮ ಬೀರುತ್ತದೆ. ವೈದ್ಯರನ್ನು ಸಂಪರ್ಕಿಸಿದರೆ ಅವರು ಆಂಟಿಕೋಲಿನರ್ಜಿಕ್ಸ್ ಎಂಬ ಔಷಧವನ್ನು ನೀಡುತ್ತಾರೆ.

## ಶಂಕರ ಐ ಫೌಂಡೇಷನ್‌ನಿಂದ SAHAI ಅನಾವರಣ




ಶಂಕರ ಐ ಫೌಂಡೇಶನ್ ಇಂಡಿಯಾ ಭಾರತದ ಮೊದಲ ಅತ್ಯಾಧುನಿಕ ಎಐ ಧ್ವನಿ ಆಧಾರಿತ ಪ್ರತಿಕ್ರಿಯೆ ವ್ಯವಸ್ಥೆಯನ್ನು ಪ್ರಾರಂಭಿಸುವುದಾಗಿ ಘೋಷಿಸಿದೆ. ರೋಗಿಗಳ ಪ್ರತಿಕ್ರಿಯೆ-ಸಂಗ್ರಹಣಾ ವ್ಯವಸ್ಥೆಯಲ್ಲಿ ಕ್ರಾಂತಿಯನ್ನುಂಟುಮಾಡುವ ಒಂದು ಹೊಸ ತಂತ್ರಜ್ಞಾನ-ಸಹಾಯ್, 20 ಭಾರತೀಯ ಭಾಷೆಗಳಲ್ಲಿ ಸಂಪೂರ್ಣವಾಗಿ ಧ್ವನಿ ಆಧಾರಿತ ಸಂವಹನಕ್ಕಾಗಿ ಇತ್ತೀಚಿನದೊಡ್ಡ ಭಾಷಾ ಮಾದರಿ (ಎಲ್‌ಎಲ್‌ಎಂ) ಯನ್ನುನಿಯಂತ್ರಿಸುತ್ತದೆ. ಈ ವ್ಯವಸ್ಥೆ ಗರಿಷ್ಠ ದಕ್ಷತೆ ಮತ್ತು ನಿಖರತೆಯೊಂದಿಗೆ ಕನಿಷ್ಠ ಬಳಕೆದಾರರ ಹಸ್ತಕ್ಷೇಪದ ಭರವಸೆ ನೀಡುತ್ತದೆ. ರೋಗಿಗಳ ಧ್ವನಿಯ ಇನ್ಪುಟ್ಗಳನ್ನು ರೋಗಿಯ ಆದ್ಯತೆಯ ಭಾಷೆಯಲ್ಲಿ ದಾಖಲಿಸಲಾಗುತ್ತದೆ, ಇಂಗ್ಲಿಷ್ ಭಾಷೆಗೆ ಅನುವಾದಿಸಲಾಗುತ್ತದೆ ಮತ್ತು ಭಾವನೆಗಳನ್ನುವಿಶ್ಲೇಷಿಸಲಾಗುತ್ತದೆ. ಸಹಾಯ್ ಜಾರಿಗೊಳಿಸಬಹುದಾದ ಶಿಫಾರಸುಗಳನ್ನು ನೀಡುತ್ತದೆ ಮತ್ತು ವೇಗದ,ಸುಲಭಪರಿಹಾರ ಪ್ರಕ್ರಿಯೆಗಳಿಗಾಗಿ ಸಂಬಂಧಿತ ತಂಡಗಳಿಗೆ ಪ್ರತಿಕ್ರಿಯೆಯನ್ನು ರವಾನಿಸುತ್ತದೆ.

ಸಹಾಯ್ನ ನವೀನ ತಂತ್ರಜ್ಞಾನ ರೋಗಿಗಳ ಪ್ರತಿಕ್ರಿಯೆಯನ್ನು ಸಂಗ್ರಹಿಸಲು, ರೋಗಿಗಳನ್ನುನಿರ್ವಹಣೆಯನ್ನುಖಚಿತಪಡಿಸಿಕೊಳ್ಳಲು ಮತ್ತು ಗುಣಮಟ್ಟದ ಸೇವೆಗಳನ್ನು ಹೆಚ್ಚಿಸಲು ಸುಲಭವಾಗಿಸುತ್ತದೆ.ಇವೆಲ್ಲವೂ ರೋಗಿಗಳನ್ನುಆಕರ್ಷಿಸಲುಮತ್ತು ಆದಾಯವನ್ನು ಹೆಚ್ಚಿಸಲು ಪೂರಕವಾಗಿಕೆಲಸಮಾಡುತ್ತವೆ. ವ್ಯವಸ್ಥೆಯ ಸಿಗ್ನಲ್ ಪ್ರೊಸೆಸಿಂಗ್, ಆಟೋಮ್ಯಾಟಿಕ್ ಸ್ಪೀಚ್ ರೆಕಗ್ನಿಷನ್ (ಎಎಸ್‌ಆರ್) ಎಲ್‌ಎಲ್‌ಎಂಗಳು, ಡಿಜಿಟೈಸ್ಡ್ ಫೀಡ್ಬ್ಯಾಕ್ ಮತ್ತು ರೆಕಾರ್ಡ್, ವಿಶ್ಲೇಷಣ 'ಆಧರಿಸಿಕ್ರಮಕೈಗೊಳ್ಳುವವೈಶಿಷ್ಟ್ಯಗಳು ಪ್ರತಿಕ್ರಿಯೆ ವ್ಯವಸ್ಥೆಗೆ ಸಹಾಯ ಮಾಡುತ್ತವೆ.

ಭಾರತದ ಆರೋಗ್ಯ ಕ್ಷೇತ್ರದಲ್ಲಿ ಇದೇ ಮೊದಲ ಬಾರಿಗೆ ಎಐ-ಧ್ವನಿ ಪ್ರತಿಕ್ರಿಯೆ ವ್ಯವಸ್ಥೆಯನ್ನು ಬಳಸಲಾಗುತ್ತಿದೆ. ಶಂಕರ ಕಣ್ಣಿನ ಆಸ್ಪತ್ರೆಯ ಕಾರ್ಯಾಚರಣೆ ಮತ್ತು ಆಡಳಿತವಿಭಾಗದ ಅಧ್ಯಕ್ಷ ಭರತ್ ಬಾಲಸುಬ್ರಮಣ್ಯಂ ಮಾತನಾಡಿ, ವ್ಯವಸ್ಥೆಪ್ರಾರಂಭವಾದಾಗಿನಿಂದ ಹೊರರೋಗಿ ಮತ್ತು ಒಳರೋಗಿ ಸೇವೆಗಳಿಂದ 17,350 ಧ್ವನಿ ಟಿಪ್ಪಣಿಗಳನ್ನು ರೆಕಾರ್ಡ್ ಮಾಡಲಾಗಿದೆ. ಗುಂಟೂರು ಘಟಕದಿಂದ ಗರಿಷ್ಠ 3,816 ಧ್ವನಿಮುದ್ರಿಕೆಗಳನ್ನು ಸಂಗ್ರಹಿಸಲಾಗಿದೆ.ನೈಜ ಸಮಯದಲ್ಲಿ ಪ್ರಾಮಾಣಿಕ ಪ್ರತಿಕ್ರಿಯೆಪಡೆಯುವಮೂಲಕಸೇವೆಯ ಗುಣಮಟ್ಟವನ್ನು ಹೆಚ್ಚಿಸಲು ನಾವು ಈ ವ್ಯವಸ್ಥೆಯನ್ನು ಜಾರಿಗೆ ತಂದಿದ್ದೇವೆ ಮತ್ತು ಪ್ರತಿದಿನಅವರಿಂದಪ್ರತಿಕ್ರಿಯೆಸ್ವೀಕರಿಸಲು ನಾವು ಸಂತೋಷಪಡುತ್ತೇವೆ.

ಶಂಕರ-ಹೈದರಾಬಾದ್ನಕಣ್ಣಿನ ಪೊರೆ, ಕಾರ್ನಿಯಾ ಮತ್ತು ?ಲಾಸಿಕ್?ನ ಸಲಹೆಗಾರ ಡಾ. ಪ್ರಭಾಕರ ಜಿ.ವಿ ಮತ್ತು ಶಂಕರ-ಬೆಂಗಳೂರಿನ ವಿಟ್ರಿಯೋ ರೆಟಿನಾ ಮತ್ತು ಆಕ್ಯುಲರ್ ಆಂಕೊಲಾಜಿ ಸೇವೆಗಳ ಸಲಹಾತಜ್ಞರಾದಡಾ.ದಿವ್ಯಾಂಶ್ ಕೆ.ಮಿಶ್ರಾ, ಅವರಿಂದ ಈ ವ್ಯವಸ್ಥೆಯ ಬಗ್ಗೆಅತ್ಯುತ್ತಮಪ್ರತಿಕ್ರಿಯೆನೀಡಿದ್ದಾರೆ. ವ್ಯವಸ್ಥೆಯ ದಕ್ಷತೆಯನ್ನು ಪ್ರಶಂಸಿರುವಅವರು, ತಮ್ಮಅನುಭವದಪ್ರಕಾರಇದು ರೋಗಿಯ ಸಂತೃಪ್ತಿಯ ಮೇಲೆ ಧನಾತ್ಮಕ ಪರಿಣಾಮ ಬೀರಿದೆ, ಏಕೆಂದರೆ ಇದರ ಮೂಲಕರೋಗಿಯ ಆರೈಕೆಹೆಚ್ಚುತ್ತದೆ.

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಉತ್ತಮ ಬುದ್ಧಿಶಕ್ತಿ, ಆರೋಗ್ಯದಲ್ಲಿ ಏರುಪೇರು, ಮಿತ್ರರ ಭೇಟಿ, ಕೋಪ.

**ವೃಷಭ:** ವಿಧೇಯತೆಯೇ ಯಶಸ್ಸಿನ ಮೆಟ್ಟಿಲು, ತಾಯಿಯಿಂದ ಸಹಾಯ, ಅನ್ಯ ಜನರಲ್ಲಿ ದ್ವೇಷ.

**ಮಿಥುನ:** ದಿನಸಿ ವ್ಯಾಪಾರಿಗಳಿಗೆ ಲಾಭ, ಸ್ಥಿರಾಸ್ತಿ ಪ್ರಾಪ್ತಿ, ಮನೋವ್ಯಥೆ, ಸಾಮಾನ್ಯ ಸೌಖ್ಯಕ್ಕೆ ಧಕ್ಕೆ, ಮಾನಸಿಕ ಒತ್ತಡ.

**ಕಟಕ:** ಬುದ್ಧಿವಂತಿಕೆಯಿಂದ ಕೆಲಸ ಮಾಡುವಿರಿ, ನಂಬಿಕೆ ದ್ರೋಹ, ಪ್ರೀತಿ ಪಾತ್ರರ ಭೇಟಿ, ವಿವಾದಗಳಿಂದ ದೂರವಿರಿ.

**ಸಿಂಹ:** ದುಡುಕ ಸ್ವಭಾವ, ದೇವತಾ ಕಾರ್ಯಗಳಲ್ಲಿ ಭಾಗಿ, ಸ್ಥಳ ಬದಲಾವಣೆ, ಋಣ ಬಾಧೆಯಿಂದ ಮುಕ್ತಿ.

**ಕನ್ಯಾ:** ಸಕಾಲಕ್ಕೆ ಭೋಜನ ಇಲ್ಲದಿರುವಿಕೆ, ವ್ಯಾಪಾರದಲ್ಲಿ ನಷ್ಟ, ಗುರುಗಳ ಸಲಹೆ, ತಾಳ್ಮೆಯಿಂದ ವರ್ತಿಸಿ.

**ತುಲಾ:** ಮನೆಯಲ್ಲಿ ಸಂತಸ, ಆಹಾರದಲ್ಲಿ ವ್ಯತ್ಯಾಸ, ನಾನಾ ರೀತಿಯ ಸಂಕಷ್ಟ, ಅವಕಾಶಗಳು ಕೈ ತಪ್ಪುವುದು.

**ವೃಶ್ಚಿಕ:** ಮಾತಿಗೆ ಮರುಳಾಗಬೇಡಿ, ದೂರ ಪ್ರಯಾಣ, ಶತ್ರು ಭಾದೆ, ಇಲ್ಲದ ಅಪವಾದ, ಆರೋಗ್ಯ ವೃದ್ಧಿ.

**ಧನಸ್ಸು:** ಎಲ್ಲರ ಮನಸ್ಸನ್ನು ಗೆಲುವಿರಿ, ಕೋಪ ಅನರ್ಥಕ್ಕೆ ಕಾರಣವಾಗುತ್ತೆ, ವಿದ್ಯಾರ್ಥಿಗಳಲ್ಲಿ ಯಶಸ್ಸು, ಮನಕ್ಲೇಶ.

**ಮಕರ:** ಸತ್ಯ ನಿಷ್ಠೆಗಳನ್ನು ಬಯಲು ಮಾಡುವಿರಿ, ಅವಮಾನಕ್ಕೆ ಗುರಿಯಾಗುವಿರಿ, ನೆರೆಹೊರೆಯವರ ಸಹಕಾರ.

**ಕುಂಭ:** ಭೋಗ ವಸ್ತುಗಳ ಪ್ರಾಪ್ತಿ, ಗುರಿ ಸಾಧಿಸಲು ಶ್ರಮಪಡುವಿರಿ, ಸಣ್ಣ ವಿಷಯಕ್ಕೆ ಭಿನ್ನಾಭಿಪ್ರಾಯ.

**ಮೀನ:** ಕೆಟ್ಟ ಆಲೋಚನೆಯಿಂದ ಮೈಗಳ್ಳತನ, ವಿನಾಕಾರಣ ನಿಷ್ಠುರ, ರಫ್ತು ವ್ಯಾಪಾರದಿಂದ ಅಧಿಕ ಲಾಭ.

## ವಿಶ್ವ ಅಲರ್ಜಿಯ ಜಾಗೃತಿ ದಿನ




ಅಕ್ಟೋಬರ್ 16 ರಂದು ವಿಶ್ವ ಅಲರ್ಜಿ ಜಾಗೃತಿ ದಿನ. ಹೇ ಜ್ವರ ಋತುವಿನಲ್ಲಿ ಆಂಟಿಹಿಸ್ಟಾಮೈನ್ ಇಲ್ಲದೆ ಮಾಡಲು ಸಾಧ್ಯವಿಲ್ಲವೇ?

ಬದಲಿಗೆ ನಮ್ಮ ಅಲರ್ಜಿಯನ್ನು ಅರ್ಥಮಾಡಿಕೊಳ್ಳುವ ಮತ್ತು ಅತಿಯಾದ ಔಷಧೋಪಚಾರದ ಬಯಕೆಯನ್ನು ತೊಡೆದುಹಾಕೋಣ. ಪ್ರತಿಯೊಂದೂ, ಒಂದು ರಾಶ್ ಕೂಡ ಸಂಕೀರ್ಣವಾಗಿದೆ, ವಿಭಿನ್ನ ಪ್ರಚೋದಕಗಳು ಮತ್ತು, ಸಹಜವಾಗಿ, ಚಿಕಿತ್ಸೆ. ಒಂದು ಮಾತ್ರೆಯು ಎಲ್ಲವನ್ನೂ ಗುಣಪಡಿಸುವುದಿಲ್ಲ ಮತ್ತು ಗುಣಪಡಿಸುವುದಿಲ್ಲ; ಒಬ್ಬ ವೈದ್ಯರು ಮಾತ್ರ ಮಾಡಬಹುದು.

ಮೊದಲನೆಯದಾಗಿ, ಅಲರ್ಜಿ ಎಂದರೇನು? ವೈದ್ಯಕೀಯ ಪರಿಭಾಷೆಯಲ್ಲಿ, ಅಲರ್ಜಿಯು ಪ್ರತಿರಕ್ಷಣಾ ವ್ಯವಸ್ಥೆಗೆ ಅತಿಸೂಕ್ಷ್ಮತೆಯನ್ನು ಸಂಕೇತಿಸುತ್ತದೆ. ನಮ್ಮ ಪ್ರತಿರಕ್ಷಣಾ ವ್ಯವಸ್ಥೆಯು ನಮ್ಮ ತಕ್ಷಣದ ಪರಿಸರದಲ್ಲಿ ಕೆಲವು ವಿಷಯಗಳಿಗೆ ಪ್ರತಿಕ್ರಿಯಿಸಿದಾಗ ನಾವು ಅಲರ್ಜಿಯನ್ನು ಅನುಭವಿಸುತ್ತೇವೆ. ಈ ವಸ್ತುಗಳು ಸಾಮಾನ್ಯ ವ್ಯಕ್ತಿಗೆ ನಿರುಪದ್ರವವಾಗಿರುತ್ತವೆ, ಆದರೆ ಸೂಕ್ಷ್ಮ ಪ್ರತಿರಕ್ಷಣಾ ವ್ಯವಸ್ಥೆಯನ್ನು ಹೊಂದಿರುವ ಯಾರಾದರೂ ಅವರಿಗೆ ವಿಭಿನ್ನ ಪ್ರತಿಕ್ರಿಯೆಯನ್ನು ಹೊಂದಿರಬಹುದು. ದೇಹವು ಈ ವಸ್ತುಗಳನ್ನು ಆಕ್ರಮಣಕಾರಿ ವಿದೇಶಿ ಕಣಗಳಾಗಿ ಪರಿಗಣಿಸುತ್ತದೆ. ಮಳೆ ಮತ್ತು ಧೂಳಿನಿಂದ ಪರಾಗದವರೆಗೆ ಯಾವುದಾದರೂ ಅಲರ್ಜಿಯನ್ನು ಉಂಟುಮಾಡಬಹುದು. ಸಾಮಾನ್ಯವಾಗಿ, ಅಲರ್ಜಿಗಳು ಚರ್ಮದ ಉಲ್ಬಣಗಳು ಅಥವಾ ಉಸಿರಾಟದ ತೊಂದರೆಯಾಗಿ ಕಾಣಿಸಿಕೊಳ್ಳುತ್ತವೆ.ನಮ್ಮಲ್ಲಿ ಹೆಚ್ಚಿನವರು ಏನಾದರೂ ಅಲರ್ಜಿಯನ್ನು ಹೊಂದಿರುತ್ತಾರೆ, ಅದರ ತೀವ್ರತೆಯು ಮಾತ್ರ ಭಿನ್ನವಾಗಿರುತ್ತದೆ. ಅಲರ್ಜಿಯನ್ನು ನಿರ್ಲಕ್ಷಿಸಬೇಡಿ ಎಂದು ವೈದ್ಯರು ಶಿಫಾರಸು ಮಾಡುತ್ತಾರೆ, ಅದು ಎಷ್ಟು ಚಿಕ್ಕದಾಗಿದೆ ಎಂದು ತೋರುತ್ತದೆ.

ವಿರೋಧಿ ಅಲರ್ಜಿನ್ ಅನ್ನು ಪಾಪ್ ಮಾಡುವುದು ತಾತ್ಕಾಲಿಕ ಪರಿಹಾರವಾಗಿದೆ. ನಾವು ಪದೇ ಪದೇ ಸ್ವಯಂ-ಔಷಧಿ ಮಾಡುವಾಗ, ಸಮಸ್ಯೆ ಉಲ್ಬಣಗೊಳ್ಳುವ ಅಪಾಯವಿದೆ. ಕೆಲವೊಮ್ಮೆ, ಇದು ಜೀವಕ್ಕೆ ಅಪಾಯವನ್ನುಂಟುಮಾಡುತ್ತದೆ. ಮೊದಲ ಕೆಲವು ಹಂತಗಳಲ್ಲಿ ಅಲರ್ಜಿಯನ್ನು ವೈದ್ಯರಿಂದ ಸುಲಭವಾಗಿ ಗುಣಪಡಿಸಬಹುದು. ವೈದ್ಯರ ಭೇಟಿಯನ್ನು ತಪ್ಪಿಸುವ ಪ್ರಯತ್ನದಲ್ಲಿ, ಅನೇಕ ಜನರು ಅಲರ್ಜಿಯನ್ನು ತಮ್ಮದೇ ಆದ ಮೇಲೆ ಚಿಕಿತ್ಸೆ ನೀಡುತ್ತಾರೆ

ದೃಷ್ಟಿಕೋನಕ್ಕಾಗಿ, ಹಲವಾರು ನೂರು ವಿಧದ ಅಲರ್ಜಿಗಳಿವೆ; ಪ್ರತಿಯೊಂದೂ ವಿಭಿನ್ನ ಪ್ರಚೋದಕಗಳನ್ನು ಮತ್ತು ಪ್ರತ್ಯೇಕ ಔಷಧಿಗಳನ್ನು ಹೊಂದಿದೆ. ಜೆನೆರಿಕ್ ವಿರೋಧಿ ಅಲರ್ಜಿನ್ಗಳನ್ನು ತೆಗೆದುಕೊಳ್ಳುವುದು ಪರಿಣಾಮಕಾರಿಯಲ್ಲ. ವಿಶ್ವ ಅಲರ್ಜಿ ಜಾಗೃತಿ ದಿನವು ಜಾಗೃತಿ ಮೂಡಿಸಲು ಮತ್ತು ಮನಸ್ಥಿತಿಯನ್ನು ಬದಲಾಯಿಸಲು ಆಶಿಸುತ್ತದೆ.

ಸಂಜೆ ಮುಗಿಲು
ಬುಧವಾರ
16.10.2024


# ಭಾರತದ ಡೇಟಾವು ಭಾರತೀಯ ಡೇಟಾ ಕೇಂದ್ರಗಳಲ್ಲಿಯೇ ಇರಬೇಕು: ಆಕಾಶ್ ಅಂಬಾನಿ

**ನವದೆಹಲಿ:** ಭಾರತದ ಡೇಟಾವನ್ನು ಭಾರತೀಯ ಡೇಟಾ ಕೇಂದ್ರಗಳಲ್ಲಿಯೇ ಇರಿಸಬೇಕು ಎಂದು ರಿಲಯನ್ಸ್ ಜಿಯೋದ ಅಧ್ಯಕ್ಷರಾದ ಆಕಾಶ್ ಅಂಬಾನಿ ಅವರು ಪ್ರತಿಪಾದನೆ ಮಾಡಿದ್ದಾರೆ. ದೆಹಲಿಯಲ್ಲಿ ನಡೆಯುತ್ತಿರುವ ಇಂಡಿಯಾ ಮೊಬೈಲ್ ಕಾಂಗ್ರೆಸ್- 2024ರಲ್ಲಿ ಭಾಗವಹಿಸಿದ್ದ ಅವರು ಈ ಅಭಿಪ್ರಾಯ ಪಟ್ಟರು. ಭಾರತದಲ್ಲಿ ಡೇಟಾ ಉತ್ಪಾದನೆ ಪ್ರಮಾಣ ಹಾಗೂ ವೇಗ ಎರಡೂ ತೀವ್ರವಾಗಿ ಹೆಚ್ಚಾಗಿದೆ. ಇನ್ನು ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ನೊಂದಿಗೆ (ಕೃತಕ ಬುದ್ಧಿಮತ್ತೆ) ಇದು ಇನ್ನಷ್ಟು ವೇಗವನ್ನು ಪಡೆದುಕೊಳ್ಳುತ್ತದೆ. ಈ ಕಾರಣದಿಂದ ದೇಶದಲ್ಲಿಯೇ ಎಐ ಹಾಗೂ ಮಶೀನ್ ಲರ್ನಿಂಗ್ ಡೇಟಾ ಸೆಂಟರ್ ಗಳನ್ನು ಸ್ಥಾಪಿಸುವ ಅಗತ್ಯವಿದೆ. ಇದಕ್ಕಾಗಿ ಭಾರತೀಯ ಕಂಪನಿಗಳಿಗೆ ಸರ್ಕಾರದಿಂದ ಪ್ರೋತ್ಸಾಹ ಸಿಗಬೇಕು. ದತ್ತಾಂಶ ಕೇಂದ್ರ ನೀತಿ- 2020ರ ಕರಡನ್ನು ಶೀಘ್ರದಲ್ಲಿಯೇ ನವೀಕರಿಸಬೇಕು ಎಂದು ಅವರು ಸರ್ಕಾರನ್ನು ಮನವಿ ಮಾಡಿದರು.

ಆಕಾಶ್ ಅಂಬಾನಿ ಅವರು ಮಾತು ಮುಂದುವರಿಸಿ, ‘‘ಅಭಿವೃದ್ಧಿ ಹೊಂದಿದ ಭಾರತದ ಕನಸನ್ನು ನನಸಾಗಿಸಲು ಕೃತಕ ಬುದ್ಧಿಮತ್ತೆ (ಎಐ) ಅತ್ಯಂತ ಮುಖ್ಯವಾಗಿದೆ.



ಮತ್ತು ಕೃತಕ ಬುದ್ಧಿಮತ್ತೆಯ ಪ್ರಯೋಜನಗಳನ್ನು ಪ್ರತಿ ಭಾರತೀಯರಿಗೂ ತಲುಪಿಸಲು ಜಿಯೋ ಪ್ರಯತ್ನಗಳನ್ನು ಆರಂಭಿಸಿದೆ. ನಾವು ಮೊಬೈಲ್ ಬ್ರಾಡ್ಬ್ಯಾಂಡ್ನೊಂದಿಗೆ ಮಾಡಿದಂತೆಯೇ ಕೈಗೆಟುಕುವ ಬೆಲೆಯಲ್ಲಿ ಶಕ್ತಿಯುತವಾದ ಎಐ ಮಾದರಿಗಳು ಮತ್ತು ಸೇವೆಗಳನ್ನು ತಲುಪಿಸಲು ಬದ್ಧರಾಗಿದ್ದೇವೆ. ಇದಕ್ಕಾಗಿ, ನಾವು ರಾಷ್ಟ್ರೀಯ ಎಐ ಮೂಲಸೌಕರ್ಯದ ಆಧಾರ ಸಿದ್ಧಪಡಿಸುತ್ತಿದ್ದೇವೆ ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿಯ ನಾಯಕತ್ವವನ್ನು ಶ್ಲಾಘಿಸಿದ ಆಕಾಶ್ ಅಂಬಾನಿ, ‘‘ಇಂದು ಭಾರತೀಯ ಮೊಬೈಲ್ ಕಂಪನಿಗಳು ಮತ್ತು ಅಭಿವೃದ್ಧಿ ಹೊಂದುತ್ತಿರುವ ಸ್ಟಾರ್ಟ್-ಅಪ್ ಪರಿಸರ ವ್ಯವಸ್ಥೆಯಿಂದಾಗಿ ಭಾರತವು ಅಭಿವೃದ್ಧಿ ಹೊಂದಿದ ದೇಶಗಳು ಸೇರಿದಂತೆ ಜಗತ್ತಿಗೆ ಎಐ ಸಲ್ಯೂಷನ್ ಗಳನ್ನು ಒದಗಿಸಬಹುದು. ಸರ್ಕಾರವು ಉದ್ಯಮ ಮತ್ತು ನಾವೀನ್ಯತೆಗೆ ಹೆಚ್ಚು ಪ್ರೋತ್ಸಾಹ- ಉತ್ತೇಜನ ನೀಡುವುದರಿಂದ ಭಾರತದಲ್ಲಿ ಅತಿದೊಡ್ಡ ಡಿಜಿಟಲ್ ಕ್ರಾಂತಿ ಸಂಭವಿಸಿದೆ. ನವ ಭಾರತದಲ್ಲಿ ಈಗ ವ್ಯಾಪಾರ ಸಂಪೂರ್ಣ ಬದಲಾಗಿದೆ. 145 ಕೋಟಿ ಭಾರತೀಯರ ಅಗತ್ಯಗಳು ಮತ್ತು ನಿರೀಕ್ಷೆಗಳನ್ನು ಪೂರೈಸಲು ಸರ್ಕಾರ ಮತ್ತು ಉದ್ಯಮವು ಉತ್ತಮ ಬಾಂಧವ್ಯದಲ್ಲಿ ಕೆಲಸ ಮಾಡುತ್ತಿವೆ ಎಂದು ಅವರು ಹೇಳಿದರು.

ಭಾರತವು ಮೊಬೈಲ್ ಆವಿಷ್ಕಾರದಲ್ಲಿ ಮುಂಚೂಣಿಯಲ್ಲಿರುತ್ತದೆ. ಆದರೆ ನಾವು ಸಂಪರ್ಕಿತ (ಕನೆಕ್ಟೆಡ್), ಬುದ್ಧಿವಂತ (ಇಂಟೆಲಿಜೆಂಟ್) ಭವಿಷ್ಯಕ್ಕಾಗಿ ಎಐ ಶಕ್ತಿಯನ್ನು ಬಳಸಿಕೊಳ್ಳುತ್ತೇವೆ. ಕಂಪ್ಯೂಟರ್ ಮತ್ತು ಇಂಟರ್ನೆಟ್ ಅಳವಡಿಕೆ ಸಮಯದಲ್ಲಿ ಆದಂತೆಯೇ ಇದರಿಂದಲೂ ಉದ್ಯೋಗವೂ ಹೆಚ್ಚಾಗುತ್ತವೆ ಎಂದು ಅವರು ಅಭಿಪ್ರಾಯ ಪಟ್ಟರು.

## ಟ್ರಂಪ್ ವಿರುದ ಪಿತೂರಿ ನಿಲ್ಲಿಸಿ: ಅಮೆರಿಕ ಎಚ್ಚರಿಕೆ

**ವಾಶಿಂಗ್ಟನ್:** ರಿಪಬ್ಲಿಕನ್ ಅಧ್ಯಕ್ಷೀಯ ಅಭ್ಯರ್ಥಿ, ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿರುದ್ಧದ ಎಲ್ಲಾ ಪಿತೂರಿಗಳನ್ನೂ ನಿಲ್ಲಿಸುವಂತೆ ಇರಾನ್ ಗೆ ಅಮೆರಿಕ ಸರಕಾರ ಎಚ್ಚರಿಸಿದ್ದು ಅವರ ಹತ್ಯೆಗೆ ನಡೆಯುವ ಯಾವುದೇ ಪ್ರಯತ್ನವನ್ನು ಯುದ್ಧದ ಕೃತ್ಯವೆಂದು ಪರಿಗಣಿಸುವುದಾಗಿ ಹೇಳಿದೆ. ಟ್ರಂಪ್ ಹಾಗೂ ಅಮೆರಿಕನ್ನರ ವಿರುದ್ಧದ ಇರಾನಿನ ಪಿತೂರಿಗಳ ಬಗ್ಗೆ ಅಧ್ಯಕ್ಷ ಬೈಡನ್ ಗೆ ನಿಯಮಿತವಾಗಿ ವಿವರಿಸಲಾಗಿದೆ ಮತ್ತು ಈ ಬಗ್ಗೆ ಗಮನ ಹರಿಸುವಂತೆ ಅಧ್ಯಕ್ಷರು ಸೂಚಿಸಿದ್ದಾರೆ. ಬಳಿಕ ಉನ್ನತ ಮಟ್ಟದಲ್ಲಿ ಇರಾನ್ ಸರಕಾರಕ್ಕೆ ಎಚ್ಚರಿಕೆ ಸಂದೇಶ ರವಾನಿಸಲಾಗಿದೆ ಎಂದು ಅಮೆರಿಕದ ಮಾಧ್ಯಮಗಳು ವರದಿ ಮಾಡಿವೆ. ಅಮೆರಿಕದ ಆಂತರಿಕ ವ್ಯವಹಾರದಲ್ಲಿ ಹಸ್ತಕ್ಷೇಪದ ಆರೋಪಗಳನ್ನು ಇರಾನ್ ನಿರಾಕರಿಸಿದ್ದು, ಹಲವು ದಶಕಗಳಿಂದ ಇರಾನ್ನದ ಆಂತರಿಕ ವ್ಯವಹಾರದಲ್ಲಿ ಅಮೆರಿಕ ಹಸ್ತಕ್ಷೇಪ ನಡೆಸುತ್ತಿದೆ. 1953ರಲ್ಲಿ ಅಂದಿನ ಪ್ರಧಾನಿಯ ವಿರುದ್ಧದ ದಂಗೆ, 2020ರಲ್ಲಿ ಅಮೆರಿಕದ ಡ್ರೋನ್ ದಾಳಿಯಲ್ಲಿ ಇರಾನಿನ ಮಿಲಿಟರಿ ಕಮಾಂಡರ್ ಹತರಾಗಿರುವುದು ಇದಕ್ಕೆ ಕೆಲವು ಉದಾಹರಣೆಗಳು ಎಂದಿದೆ.



# ವಯನಾಡ್ ಉಪಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿ ಘೋಷಣೆ

**ನವದೆಹಲಿ:** ರಾಹುಲ್ ಗಾಂಧಿ ರಾಜೀನಾಮೆಯಿಂದ ತೆರವಾಗಿದ್ದ ಕೇರಳದ ವಯನಾಡ್ ಲೋಕಸಭಾ ಕ್ಷೇತ್ರಕ್ಕೆ ಉಪಚುನಾವಣೆಗೆ ಆಯೋಗ ದಿನಾಂಕ ಪ್ರಕಟಿಸಿದೆ.

ಇದರ ಬೆನ್ನಲ್ಲೇ ಎಐಸಿಸಿ ತನ್ನ ಅಭ್ಯರ್ಥಿಯನ್ನು ಘೋಷಣೆ ಮಾಡಿದ್ದು, ವಯನಾಡ್ ಲೋಕಸಭಾ ಕ್ಷೇತ್ರದಿಂದ ಪ್ರಿಯಾಂಕಾ ಗಾಂಧಿ ವಾದ್ರಾ ಸ್ಪರ್ಧೆ ಮಾಡಲಿದ್ದಾರೆ. ಈ ಬಗ್ಗೆ ಇಂದು (ಅಕ್ಟೋಬರ್ 15) ಎಐಸಿಸಿ ಅಧಿಕೃತವಾಗಿ ಘೋಷಿಸಿದೆ. ಇದು ಪ್ರಿಯಾಂಕಾ ಗಾಂಧಿ ಅವರ ಮೊದಲ ಚುನಾವಣೆಯಾಗಿದೆ.



ವಯನಾಡ್ ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಕಣ್ಣಕ್ಕಿಳಿದರೆ, ಇನ್ನುಳಿದಂತೆ ಪಾಲಕ್ಕಾಡ್ ವಿಧಾನಸಭಾ ಕ್ಷೇತ್ರದಿಂದ ರಾಹುಲ್ ಮಾಂಕೂಟತ್ತಿಲ್ ಹಾಗೂ ಚೆಲ್ಲಕ್ಕಾರ ಮೀಸಲು ಕ್ಷೇತ್ರಕ್ಕೆ ರಮ್ಯಾ ಹರಿದಾಸ ಅವರನ್ನು ಕಣಕ್ಕಿಳಿಸಿದೆ.

ಕಳೆದ ಲೋಕಸಭಾ ಚುನಾವಣೆಯಲ್ಲಿ ರಾಹುಲ್ ಗಾಂಧಿ ಅವರು ವಯನಾಡ್ ಹಾಗೂ ಉತ್ತರ ಪ್ರದೇಶದ ರಾಯ್ಬರೇಲಿ ಕ್ಷೇತ್ರದಿಂದ ಸ್ಪರ್ಧೆ ಮಾಡಿದ್ದು, ಎರಡೂ ಕ್ಷೇತ್ರದಲ್ಲಿ ಗೆದ್ದಿದ್ದರು. ಆದ್ರೆ, ತಮ್ಮ ಕುಟುಂಬದ ಪ್ರತಿಷ್ಠೆಯ ಕ್ಷೇತ್ರವಾಗಿದ್ದ ರಾಯ್ಬರೇಲಿಯನ್ನು ಉಳಿಸಿಕೊಳ್ಳಲು ರಾಹುಲ್ ಗಾಂಧೀ ಅವರು ವಯನಾಡು ಎಂಪಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಹೀಗಾಗಿ ವಯನಾಡ್ ಲೋಕಸಭಾ ಕ್ಷೇತ್ರಕ್ಕೆ ಉಪಚುನಾವಣೆ ಎದುರಾಗಿದ್ದು, ಈಗ ಅಣ್ಣನ ಜಾಗಕ್ಕೆ ತಂಗಿ ಸ್ಪರ್ಧೆ ಮಾಡಲಿದ್ದಾರೆ.

52 ವರ್ಷದ ಪ್ರಿಯಾಂಕಾ ಗಾಂಧಿ 1999ರಿಂದಲೂ ಸಕ್ರಿಯವಾಗಿ ರಾಜಕೀಯದಲ್ಲಿ ತೊಡಗಿಕೊಂಡಿದ್ದು, ಆರಂಭದಲ್ಲಿ ಅಮೇಠಿಯಲ್ಲಿ ತಮ್ಮ ತಾಯಿ ಸೋನಿಯಾ ಗಾಂಧಿಯವರ ಪರ ಪ್ರಚಾರ ಮಾಡಿದ್ದರು. ಈ ಮೂಲಕ ರಾಜಕೀಯದಲ್ಲಿ ತನ್ನ ಸುದೀರ್ಘ ಉಪಸ್ಥಿತಿಯ ಹೊರತಾಗಿಯೂ ಪ್ರಿಯಾಂಕಾ ಎಂದೂ ಚುನಾವಣೆಯಲ್ಲಿ ಸ್ಪರ್ಧಿಸಿರಲಿಲ್ಲ. ಈಗ ತಮ್ಮ ಚೊಚ್ಚಲ ಚುನಾವಣೆಗೆ ಸ್ಪರ್ಧಿಸುತ್ತಿದ್ದು, ಒಂದು ವೇಳೆ ವಯನಾಡ್ನಲ್ಲಿ ಪ್ರಿಯಾಂಕ ಗೆಲುವು ಸಾಧಿಸಿದರೆ, ಗಾಂಧಿ ಕುಟುಂಬದ ಮೂವರು ಸಂಸತ್ತಿಗೆ ಪ್ರವೇಶಿಸಿದಂತಾಗುತ್ತದೆ.

ಕಳೆದ ಲೋಕಸಭಾ ಚುನಾವಣೆಯಲ್ಲಿ ವಯನಾಡ್ ಕ್ಷೇತ್ರದಲ್ಲಿ ರಾಹುಲ್ ಗಾಂಧಿ ಶೇಕಡ 64ರಷ್ಟು ಮತ ಪಡೆದಿದ್ದರು. ಸಮೀಪದ ಸ್ಪರ್ಧಿ ಸಿಪಿಐನ ಅನ್ನಿ ರಾಜಾ ವಿರುದ್ಧ 3.64 ಲಕ್ಷ ಮತಗಳ ಅಂತರದಿಂದ ಗೆದ್ದು ಬೀಗಿದ್ದರು. ಇನ್ನು ಬಿಜೆಪಿಯಿಂದ ಕಣಕ್ಕಿಳಿದಿದ್ದ ರಾಜ್ಯಾಧ್ಯಕ್ಷ ಸುರೇಂದ್ರನ್ 1.3 ಲಕ್ಷ ಮತಗಳನ್ನು ಪಡೆದು ಮೂರನೇ ಸ್ಥಾನಕ್ಕೆ ತೃಪ್ತಿಪಟ್ಟಿದ್ದರು. ರಾಯ್ಬರೇಯಲ್ಲೂ ಸಹ ರಾಹುಲ್ ಗಾಂಧಿ 3.9 ಲಕ್ಷ ಮತಗಳ ಅಂತರರಿಂದ ಗೆದ್ದಿದ್ದರು.

# ಅಮೆರಿಕದೊಂದಿಗೆ ಐತಿಹಾಸಿಕ ಒಪ್ಪಂದಕ್ಕೆ ಸಹಿ ಹಾಕಿದ ಭಾರತ

**ದೆಹಲಿ:** ಭಾರತ ಮತ್ತು ಅಮೆರಿಕ 31 ಪ್ರಿಡೇಟರ್ ಡ್ರೋನ್‌ಗಳಿಗಾಗಿ 32,000 ಕೋಟಿ ರೂ.ಗಳ ಒಪ್ಪಂದವನ್ನು ಅಂತಿಮಗೊಳಿಸಲಾಗಿದೆ. ಇದು ಭಾರತೀಯ ಸೇನೆಯ ಕಣ್ಗಾವಲು ಸಾಮರ್ಥ್ಯವನ್ನು ಹೆಚ್ಚಿಸಲಿದೆ. ಇಂದು ನಡೆದ ಭದ್ರತಾ ಕ್ಯಾಬಿನೆಟ್ ಸಮಿತಿಯಲ್ಲಿ ಸ್ವಾಧೀನಪಡಿಸಿಕೊಳ್ಳಲು ಅನುಮೋದನೆ ನೀಡಲಾಗಿದ್ದು ನೌಕಾಪಡೆಗೆ 15 ಡ್ರೋನ್ಗಳನ್ನು ಪೂರೈಸಲಾಗುತ್ತದೆ.

ಉಳಿದವುಗಳನ್ನು ಭಾರತೀಯ ಸೇನೆ ಮತ್ತು ವಾಯುಪಡೆಯ ನಡುವೆ ಸಮಾನವಾಗಿ ಹಂಚಲಾಗುತ್ತದೆ.

ಭಾರತದಲ್ಲಿ ನಿರ್ವಹಣೆ, ದುರಸ್ತಿ ಮತ್ತು ಕೂಲಂಕುಷ ಪರೀಕ್ಷೆ ಸೌಲಭ್ಯಕ್ಕಾಗಿ ವಿದೇಶಿ ಮಿಲಿಟರಿ ಮಾರಾಟ ಒಪ್ಪಂದಕ್ಕೆ ಇಂದು ಸಹಿ ಹಾಕಲಾಯಿತು. ಈ ಒಪ್ಪಂದದ ಕುರಿತು ಕೆಲವು ವಾರಗಳ ಹಿಂದೆ ರಕ್ಷಣಾ ಸ್ವಾಧೀನ ಮಂಡಳಿಯ ಸಭೆಯಲ್ಲಿ ಚರ್ಚೆ ನಡೆಸಲಾಗಿತ್ತು. ಚೆನ್ನೈ ಬಳಿಯ ಐಎನ್‌ಎಸ್ ರಾಜಾಲಿ, ಗುಜರಾತ್ನ ಪೋರಬಂದರ್ ಮತ್ತು ಸರ್ಸಾವಾ ಮತ್ತು ಉತ್ತರ ಪ್ರದೇಶದ ಗೋರಖ್ಪುರದಂತಹ ಸ್ಥಳಗಳಿಗೆ ಭಾರತ ಡ್ರೋನ್ಗಳನ್ನು ನಿಯೋಜಿಸಲಿದೆ. ಮಿಲಿಟರಿ ಅಗತ್ಯಗಳ ವೈಜ್ಞಾನಿಕ ವಿಶ್ಲೇಷಣೆಯ ಆಧಾರದ ಮೇಲೆ ತ್ರಿ-ಸೇವಾ ಒಪ್ಪಂದದ ಮೂಲಕ ಡ್ರೋನ್ಗಳನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ.



ಡೆಲವೇರ್ನಲ್ಲಿ ನಡೆದ ಕ್ವಾಡ್ ಲೀಡರ್ಸ್ ಶೃಂಗಸಭೆಯ ಹೊರತಾಗಿ ಪ್ರಧಾನಿ ನರೇಂದ್ರ ಮೋದಿ ಮತ್ತು ಯುಎಸ್ ಅಧ್ಯಕ್ಷ ಜೋ ಬೈಡೆನ್ ಡ್ರೋನ್ಗಳನ್ನು ಸ್ವಾಧೀನಪಡಿಸಿಕೊಳ್ಳುವ ಕುರಿತು ಮಾತುಕತೆ ನಡೆಸಿದ ಒಂದು ತಿಂಗಳ ನಂತರ ಈ ಬೆಳವಣಿಗೆಯಾಗಿದೆ. ಈ ಯೋಜನೆಗೆ ಕಳೆದ ವಾರ ಭದ್ರತೆಯ ಕ್ಯಾಬಿನೆಟ್ ಸಮಿತಿ ಅನುಮೋದನೆ ನೀಡಿತ್ತು.

# ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ಆರೋಪ ಸತ್ಯವಲ್ಲ: ಭಾರತ

**ದೆಹಲಿ:** ಖಾಲಿಸ್ತಾನಿ ಪ್ರತ್ಯೇಕತಾವಾದಿ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆ ಪ್ರಕರಣದಲ್ಲಿ ಭಾರತಕ್ಕೆ ಸಾಕ್ಷ್ಯಗಳನ್ನು ಹಂಚಿಕೊಳ್ಳಲಾಗಿದೆ ಎಂಬ ಕೆನಡಾದ ಹೇಳಿಕೆಯನ್ನು ಭಾರತ ತಿರಸ್ಕರಿಸಿದೆ.ದೆ.

ತನ್ನ ನೆಲದಲ್ಲಿ ಪ್ರಜೆಗಳನ್ನು ಗುರಿಯಾಗಿಸಿಕೊಂಡು ರಹಸ್ಯ ಕಾರ್ಯಾಚರಣೆಗಳನ್ನು ನಡೆಸುವ ಚಟುವಟಿಕೆಗಳಲ್ಲಿ ಭಾರತ ತೊಡಗಿಸಿಕೊಂಡಿದೆ ಎಂದು ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಆರೋಪ ಮಾಡಿದ್ದರು.

ಆದರೆ ಇದು ಸತ್ಯವಲ್ಲ ಎಂದು ಭಾರತ ತಿರುಗೇಟು ನೀಡಿದೆ.

ನಿಜ್ಜರ್ ಹತ್ಯೆ ಪ್ರಕರಣದಲ್ಲಿ ಭಾರತದ ಏಜೆಂಟರ ಪಾತ್ರ ಇರುವುದನ್ನು ಸಾಬೀತುಪಡಿಸುವ ನಂಬಲರ್ಹ ಪುರಾವೆಗಳನ್ನು ಒದಗಿಸಲಾಗಿದೆ ಎಂಬ ಕೆನಡಾದ ಅಧಿಕಾರಿಗಳ ಆರೋಪಗಳನ್ನು ಭಾರತ ನಿರಾಕರಿಸಿದೆ.

ಕೆನಡಾದಲ್ಲಿರುವ ತನ್ನ ಹೈಕಮಿಷನರ್ ಅವರನ್ನು ಸೋಮವಾರ ಭಾರತ ವಾಪಸ್ ಕರೆಸಿಕೊಳ್ಳುವುದರೊಂದಿಗೆ ಉಭಯ ದೇಶಗಳ ನಡುವಣ ರಾಜತಾಂತ್ರಿಕ ಸಂಬಂಧದಲ್ಲಿ ಮತ್ತಷ್ಟು ಬಿರುಕು ಮೂಡಿತ್ತು. ನಿಜ್ಜರ್ ಹತ್ಯೆ ಪ್ರಕರಣದಲ್ಲಿ ಭಾರತದ ಹೈಕಮಿಷನರ್ ಮತ್ತು ಇತರ ರಾಜತಾಂತ್ರಿಕ ಅಧಿಕಾರಿಗಳನ್ನೂ ತನಿಖೆಗೆ ಒಳಪಡಿಸುವುದಾಗಿ ಕೆನಡಾ ಸರ್ಕಾರ ಹೇಳಿತ್ತು. ಇದರ ಬೆನ್ನಲ್ಲೇ ಭಾರತ ಈ ನಿರ್ಧಾರ ತೆಗೆದುಕೊಂಡಿತ್ತು.



## ಯೂಟ್ಯೂಬ್ ನೋಡಿ ಗನ್ ಶೂಟಿಂಗ್ ಕಲಿತಿದ್ದ ಬಾಬಾ ಸಿದ್ದಿಕಿ ಹಂತಕರು!

**ಮುಂಬೈ :** ಮಹಾರಾಷ್ಟ್ರದ ಸ್ಟಾರ್ ರಾಜಕಾರಣಿ ಬಾಬಾ ಸಿದ್ದಿಕ್ ಹತ್ಯೆ, ಮಹಾನಗರಿ ಮುಂಬೈಯನ್ನು ಬೆಚ್ಚಿ ಬೀಳಿಸಿದೆ. ಪೊಲೀಸರು ಮರ್ಡರ್ ಕೇಸ್ ಸಂಬಂಧ ತನಿಖೆ ಚುರುಕುಗೊಳಿಸಿದ್ದಾರೆ. ಹತ್ಯೆಗೈದ ಮೂವರು ದುಷ್ಕರ್ಮಿಗಳು ಶೂಟ್ ಮಾಡೋದನ್ನ ಎಲ್ಲಿ ಕಲಿತಿದ್ದರು ಎಂಬ ಮಾಹಿತಿ ಲಭ್ಯವಾಗಿದೆ.ಇಬ್ಬರು ಶೂಟರ್ ಗಳಾದ ಗುರ್ಮೈಲ್ ಸಿಂಗ್ ಹಾಗೂ ಧರ್ಮರಾಜ್ ಕಶ್ಯಪ್ ಇಬ್ಬರೂ ಯೂಟ್ಯೂಬ್ ವಿಡಿಯೋ ನೋಡಿ ಶೂಟ್ ಮಾಡೋದನ್ನ ಕಲಿತಿದ್ದರು ಎಂಬ ಆತಂಕಕಾರಿ ಅಂಶವನ್ನು ಪೊಲೀಸರು ಹೊರಹಾಕಿದ್ದಾರೆ. ಅಲ್ಲದೆ 3 ತಿಂಗಳ ಹಿಂದೆಯೇ ಸಿದ್ದಕಿ ಹತ್ಯೆಗೆ ಸಂಚು ರೂಪಿಸಲಾಗಿತ್ತು. ದುಷ್ಕರ್ಮಿಗಳು ಇದಕ್ಕಾಗಿ ಅಗತ್ಯ ಸಿದ್ಧತೆ ನಡೆಸಿದ್ದರು. ಮತ್ತೋರ್ವ ಆರೋಪಿಯಿಂದ 2 ಲಕ್ಷ ಹಣ, ಗನ್ ಎಲ್ಲವನ್ನ ಪಡೆಯಲಾಗಿತ್ತು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಸಿದ್ದಿಕಿ ಚಲನವಲನದ ಬಗ್ಗೆ ಆರೋಪಿಗಳು ತೀವ್ರ ನಿಗಾ ಇಟ್ಟಿದ್ದರು. ಕೊಲೆ ಮಾಡೋಕೆ ಪಕ್ಕಾ ಪ್ಲಾನ್ ರೂಪಿಸಲಾಗಿತ್ತು ಎಂದು ಪೊಲೀಸರು ಹೇಳಿದ್ದಾರೆ. ಕಳೆದ ಶನಿವಾರ ರಾತ್ರಿ ಮುಂಬೈನ ಬಾಂದ್ರಾ ಪ್ರದೇಶದಲ್ಲಿ ಮೂವರು ಅಪರಿಚಿತ ದುಷ್ಕರ್ಮಿಗಳು ಮಾಜಿ ಸಚಿವ, ಆಡಳಿತ ಪಕ್ಷ ಅಜಿತ್ ಪವಾರ್ ಅವರ ಪಕ್ಷದ ಪ್ರಭಾವಿ ರಾಜಕಾರಣಿ ಬಾಬಾ ಸಿದ್ದಿಕಿ ಅವರನ್ನ ಮರ್ಡರ್ ಮಾಡಿದ್ದರು. ಇದು ಇಡೀ ಮುಂಬೈ ನಗರವನ್ನ ತಲ್ಲಣಗೊಳಿಸಿತ್ತು.



# ಪಾಕಿಸ್ತಾನಕ್ಕೆ ತೆರಳಿದ ಕೇಂದ್ರ ಸಚಿವ ಜೈಶಂಕರ್‌ಗೆ ಆತ್ಮೀಯ ಸ್ವಾಗತ

**ದೆಹಲಿ:** ವಿದೇಶಾಂಗ ವ್ಯವಹಾರಗಳ ಸಚಿವ ಎಸ್ ಜೈಶಂಕರ್ ಅವರು ಶಾಂಘೈ ಸಹಕಾರ ಸಂಘಟನೆಯ ಸಮಾವೇಶದಲ್ಲಿ ಭಾಗವಹಿಸಲು ಇಸ್ಲಾಮಾಬಾದ್ಗೆ ತೆರಳಿದ್ದಾರೆ. ಸುಮಾರು 9 ವರ್ಷಗಳ ಬಳಿಕ ಜೈಶಂಕರ್ ಪಾಕಿಸ್ತಾನಕ್ಕೆ ಭೇಟಿ ನೀಡುತ್ತಿದ್ದ ಜೈಶಂಕರ್ ಅವರನ್ನು ದಕ್ಷಿಣ ಏಷ್ಯಾದ ಮಹಾನಿರ್ದೇಶಕ ಇಲ್ಯಾಸ್ ಮೆಹಮೂದ್ ನಿಜಾಮಿ ಆತ್ಮೀಯವಾಗಿ ಬರಮಾಡಿಕೊಂಡರು.



ಶಾಂಘೈ ಸಹಕಾರ ಸಂಸ್ಥೆಯ ಸರ್ಕಾರದ ಮುಖ್ಯಸ್ಥರ ಮಂಡಳಿಯ 23ನೇ ಸಭೆಗೆ ಮುನ್ನ ಅವರು ಆಯೋಜಿಸಿದ್ದ ಔತಣಕೂಟಕ್ಕೂ ಮುನ್ನ ವಿದೇಶಾಂಗ ಸಚಿವ ಎಸ್ ಜೈಶಂಕರ್ ಮತ್ತು ಪಾಕ್ ಪ್ರಧಾನಿ ಶೆಹಬಾಜ್ ಷರೀಫ್ ಅವರು ಹಸ್ತಲಾಘವ ಮಾಡಿ ಶುಭಾಶಯ ವಿನಿಮಯ ಮಾಡಿಕೊಂಡರು.

SCO ಒಳಗೆ ಎರಡನೇ ಅತ್ಯುನ್ನತ ವೇದಿಕೆಯಾದ ಖಅಔ ಅಉಊ ಯ ಎರಡು ದಿನಗಳ ಸಭೆಯು ಕೌನ್ಸಿಲ್ನ ಪ್ರಸ್ತುತ ಅಧ್ಯಕ್ಷರಾಗಿ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಹೇಳಿಕೆ ತಿಳಿಸಿದೆ.

ಕಾಶ್ಮೀರ ಸಮಸ್ಯೆ ಮತ್ತು ಭಯೋತ್ಪಾದನೆ ವಿಚಾರಕ್ಕೆ ಸಂಬಂಧಿಸಿದಂತೆ ಎರಡು ದೇಶಗಳ ಮಧ್ಯೆ ದ್ವೇಷಮಯ ವಾತಾವರಣ ಇರುವಾಗ ಸುಮಾರು 9 ವರ್ಷದ ನಂತರ ಭಾರತದ ಮಂತ್ರಿ ಮೊದಲ ಬಾರಿಗೆ ಪಾಕಿಸ್ತಾನಕ್ಕೆ ಭೇಟಿ ನೀಡಿದ್ದಾರೆ. ಇದಕ್ಕೂ ಮೊದಲು ವಿದೇಶಾಂಗ ಸಚಿವೆಯಾಗಿದ್ದ ದಿ. ಸುಷ್ಮಾ ಸ್ವರಾಜ್ ಅವರು ಪಾಕಿಸ್ತಾನಕ್ಕೆ 2015ರ ಡಿಸೆಂಬರ್ನಲ್ಲಿ ಭೇಟಿ ನೀಡಿದ್ದರು.

# ಪ್ರತಿಭಟನೆ ರದ್ದುಗೊಳಿಸಿದ ಇಮ್ರಾನ್ ಖಾನ್ ಪಕ್ಷ

**ಇಸ್ಲಾಮಾಬಾದ್:** ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್ ನಲ್ಲಿ ನಡೆಯುವ ಶಾಂಘೈ ಸಹಕಾರ ಸಂಘಟನೆಯ(ಎಸ್ ಸಿ ಒ) ಶೃಂಗಸಭೆಯ ಹಿನ್ನೆಲೆಯಲ್ಲಿ ದೇಶದಾದ್ಯಂತ ಆಯೋಜಿಸಿದ್ದ ಪ್ರತಿಭಟನೆಯನ್ನು ರದ್ದುಗೊಳಿಸುವುದಾಗಿ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ಪಾಕಿಸ್ತಾನ್ ತೆಹ್ರೀಕೆ ಇನ್ಸಾಫ್(ಪಿಟಿಐ) ಪಕ್ಷ ಮಂಗಳವಾರ ಘೋಷಿಸಿದೆ.

ಜೈಲಿನಲ್ಲಿರುವ ಇಮ್ರಾನ್ ಖಾನ್ ರ ಆರೋಗ್ಯ ವಿಚಾರಿಸಲು ವೈದ್ಯಕೀಯ ತಂಡವನ್ನು ರವಾನಿಸಲು ಪಾಕ್ ಸರಕಾರ ಸಮ್ಮತಿಸಿದ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ಮುಂದೂಡುವುದಾಗಿ ಪಕ್ಷದ ಮೂಲಗಳು ಘೋಷಿಸಿವೆ. ಈ ಮಧ್ಯೆ, ರಾಜಧಾನಿ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಭದ್ರತಾ ವ್ಯವಸ್ಥೆಗಳನ್ನು ಬಿಗಿಗೊಳಿಸಲಾಗಿದ್ದು ಲಾಕ್ ಡೌನ್ ಜಾರಿಗೊಳಿಸಲಾಗಿದೆ.

ಎಸ್ ಸಿ ಒ ಸದಸ್ಯ ದೇಶಗಳ ಪ್ರತಿನಿಧಿಗಳು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಇಸ್ಲಾಮಾಬಾದ್ ಮತ್ತು ರಾವಲ್ಪಿಂಡಿಯಲ್ಲಿ ಸೋಮವಾರದಿಂದ ಬುಧವಾರದವರೆಗೆ ರಜಾದಿನ ಘೋಷಿಸಲಾಗಿದೆ. ಪ್ರಮುಖ ರಸ್ತೆಗಳಲ್ಲಿ ಸೇನಾ ತುಕಡಿಯನ್ನು ನಿಯೋಜಿಸಲಾಗಿದ್ದು ಬ್ಯಾರಿಕೇಡ್ ನಿರ್ಮಿಸಲಾಗಿದೆ. ಮಂಗಳವಾರ ಆರಂಭಗೊಂಡಿರುವ



ಸಭೆಯ ಮುಖ್ಯ ಕಾರ್ಯಕ್ರಮ ಬುಧವಾರ ನಡೆಯಲಿದ್ದು ಭದ್ರತಾ ಸಹಕಾರ ಮತ್ತು ಆರ್ಥಿಕ ಸಂಬಂಧಗಳನ್ನು ಬಲಪಡಿಸುವ ಬಗ್ಗೆ ಮುಖಂಡರು ಹಾಗೂ ಅಧಿಕಾರಿಗಳು ಚರ್ಚಿಸಲಿದ್ದಾರೆ. ಪಾಶ್ಚಿಮಾತ್ಯ ಒಕ್ಕೂಟಕ್ಕೆ ಪ್ರತಿಯಾಗಿ 2001ರಲ್ಲಿ ರಶ್ಯ ಮತ್ತು ಚೀನಾ ಎಸ್ಸಿಒ ಸಂಘಟನೆಯನ್ನು ಸ್ಥಾಪಿಸಿದ್ದು ಇರಾನ್, ಭಾರತ, ಪಾಕಿಸ್ತಾನ, ಕಝಕಸ್ತಾನ, ಕಿರ್ಗಿಸ್ತಾನ, ತಝಿಕಿಸ್ತಾನ ಮತ್ತು ಉಜ್ಬೇಕಿಸ್ತಾನಗಳು ಸದಸ್ಯರಾಗಿವೆ. ಇತರ 16 ದೇಶಗಳು ವೀಕ್ಷಕ ಸ್ಥಾನಮಾನ ಪಡೆದಿವೆ

## ಭಾರತ ನಮಗೆ ಮಹತ್ವದ ನೆರೆರಾಷ್ಟ್ರ - ಪಾಕ್ ಮಾಜಿ ಪ್ರಧಾನಿ

**ಪಾಕಿಸ್ತಾನ:** ಭಾರತ ಯಾವತ್ತಿಗೂ ನಮ್ಮ ಪ್ರಮುಖ ನೆರೆಯ ರಾಷ್ಟ್ರ . ಅದರ ಜತೆ ಉತ್ತಮ ಬಾಂಧವ್ಯ ಹೊಂದುವುದು ಅತಿಮುಖ್ಯ ಎಂದು ಪಾಕ್ ಮಾಜಿ ಪ್ರಧಾನಿ ಅನ್ವರ್ ಉಲ್ ಹಕ್ ಕಕರ್ ಹೇಳಿದ್ದಾರೆ. ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನದಲ್ಲಿ ಎಸ್ ಸಿ ಓ ಶೃಂಗಸಭೆ ನಡೆಯುತ್ತಿದ್ದು, ಕೇಂದ್ರ ಮಂತ್ರಿ ಜೈ ಶಂಕರ್ ಭೇಟಿ ನೀಡಿರೋ ಬೆನ್ನಲ್ಲೇ ಈ ಹೇಳಿಕೆ ಸಾಕಷ್ಟು ಕುತೂಹಲ ಸೃಷ್ಟಿ ಮಾಡಿದೆ. ಉಭಯ ರಾಷ್ಟ್ರಗಳ ಮಧ್ಯೆ ಸಾಮ್ಯತೆ ಇರಬೇಕು . ವ್ಯಾಪಾರ-ವಹಿವಾಟು ಸೇರಿದಂತೆ ಅನೇಕ ವಲಯಗಳ ಸುಧಾರಣೆ ಕ್ರಮಗಳ ಬಗ್ಗೆ ಪಾರದರ್ಶಕ ಚರ್ಚೆಗೆ ಪ್ರತ್ಯೇಕ ವೇದಿಕೆ ಚರ್ಚೆ ಆಗಬೇಕು ಎಂದು ಹೇಳಿದರು. ಸದಾ ಭಾರತದ ವಿರುದ್ಧ ವೈರುಧ್ಯದ ಹೇಳಿಕೆ ಕೊಡುವ ಪಾಕಿಸ್ತಾನದ ನಾಯಕರ ಮಧ್ಯೆ ಮಾಜಿ ಪಿಎಂ ಅನ್ವರ್ ಉಲ್ ಹಕ್ ಈ ರೀತಿಯ ಹೇಳಿಕೆ ನೀಡಿರೋದು ಸಾಕಷ್ಟು ಕೌತುಕ ಸೃಷ್ಟಿಮಾಡಿದೆ. ಅ.15 ಮತ್ತು ಅ.16 ಪಾಕಿಸ್ತಾನದಲ್ಲಿ ಎಸ್ ಸಿ ಓ ಶೃಂಗಸಭೆ ನಡೆಯುತ್ತಿದ್ದು, ಇದಕ್ಕಾಗಿ ಭಾರಿ ಭದ್ರತೆ ಕೈಗೊಳ್ಳಲಾಗಿದೆ. 2 ದಿನ ಲಾಕ್ ಡೌನ್ ಕೂಡ ಮಾಡಲಾಗಿದೆ.



# ಗಡ್ಕರಿಯನ್ನು ಭೇಟಿಯಾದ ಸೋಮಣ್ಣ- ತುಮಕೂರು ರಾಷ್ಟ್ರೀಯ ಹೆದ್ದಾರಿ ನಿರ್ಮಾಣಗಳ ಬಗ್ಗೆ ಚರ್ಚೆ

**ನವದೆಹಲಿ:** ತುಮಕೂರಿನ ರಾಷ್ಟೀಯ ಹೆದ್ದಾರಿ ಅಭಿವೃದ್ಧಿಗೆ ವಿಚಾರಕ್ಕೆ ಸಂಬಂದಿಸಿದಂತೆ ಕೇಂದ್ರ ಭೂ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರನ್ನು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಖಾತೆ ಸಚಿವ ವಿ ಸೋಮಣ್ಣ ಭೇಟಿಯಾಗಿ ಸುಧೀರ್ಘ ಚರ್ಚೆ ನಡೆಸಿದ್ದಾರೆ.

ಈ ಭೇಟಿ ವೇಳೆ (ಎನ್ ಹೆಚ್-69) ಶಿರಾ, ಮಧುಗಿರಿ, ಬೈರನಹಳ್ಳಿ ವಿಭಾಗದ 52 ಕಿ.ಮೀ. ಚತುಷ್ಪಥ ರಸ್ತೆ ಅಭಿವೃದ್ಧಿಗೆ ಪ್ರಸ್ತುತ 2024-25ರ ಬಜೆಟ್‌ನಲ್ಲಿ 1 ಕೋಟಿ ರೂ. ಮೀಸಲಿಟ್ಟ ಬಗ್ಗೆ ತುಮಕೂರಿನ ಜನತೆಯ ಪರವಾಗಿ ಸಚಿವ ನಿತಿನ ಗಡ್ಕರಿಯವರಿಗೆ ಸೋಮಣ್ಣ ಧನ್ಯವಾದಗಳನ್ನು ತಿಳಿಸಿದ್ದಾರೆ. ಈ ರಸ್ತೆ ಕಾಮಗಾರಿ ಜಾರಿಯಾಗುವಲ್ಲಿ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ ಅವರ ಪ್ರಯತ್ನಕ್ಕೂ ಅಭಿನಂದನೆ ಸಲ್ಲಿಸಿದ್ದಾರೆ.



ತುಮಕೂರು ಜಿಲ್ಲೆಯು ಕರ್ನಾಟಕ ರಾಜ್ಯದಲ್ಲಿ ಮುಖ್ಯ ಜಿಲ್ಲೆಯಾಗಿ ಅಭಿವೃದ್ಧಿ ಪಥದಲ್ಲಿ ಸಾಗುವಲ್ಲಿ ರಸ್ತೆ ಅಭಿವೃದ್ಧಿಯ ಪ್ರಾಮುಖ್ಯತೆಯ ಬಗ್ಗೆ ಹಾಗೂ ತುಮಕೂರು, ಶಿವಮೊಗ್ಗ (ಮಲಸಂದ್ರ) ಮತ್ತು ಎನ್‌ಹೆಚ್ 206ರಲ್ಲಿ (ತುಮಕೂರು ಸಿಟಿಯಲ್ಲಿ) ಬೈಪಾಸ್ ನಿರ್ಮಾಣದ ಅಗತ್ಯತೆಯ ಬಗ್ಗೆ ಚರ್ಚೆ ನಡೆದಿದೆ. ಈ ಬೈಪಾಸ್ ನಿರ್ಮಾಣ ಮಾಡುವುದರಿಂದ ಸಾರಿಗೆ ದಟ್ಟಣೆ ಹಾಗೂ ಅಪಘಾತಗಳು ಕಡಿಮೆಯಾಗುವ ಬಗ್ಗೆ ಕೇಂದ್ರ ಮಂತ್ರಿಗಳಿಗೆ ವಿವರಿಸಿದ್ದಾರೆ. ಇದನ್ನೂ ಓದಿ: ಏಜಡಿಚಿಟಚಿ । ಕಾರ್ಯಕ್ರಮದಲ್ಲಿ ಬಹಿರಂಗ ಟೀಕೆ- ಒಂದು ದಿನದ ಬಳಿಕ ಶವವಾಗಿ ಪತ್ತೆಯಾದ ಅಧಿಕಾರಿ

ಎನ್‌ಹೆಚ್ 206 (ತುಮಕೂರು ಸಿಟಿ), 12.30 ಕಿ.ಮೀ ಮತ್ತು ಗುಬ್ಬಿ ಟೌನ್ 8.5 ಕಿ.ಮೀ ಇಲ್ಲಿ ಟ್ರಾಫಿಕ್ ದಟ್ಟಣೆ ತಗ್ಗಿಸುವ ಸಲುವಾಗಿ 4 ಚತುಷ್ಪಥ ಪ್ರಸ್ತಾವನೆಯನ್ನು ಸಹ ಕೇಂದ್ರ ಸಚಿವರ ಮುಂದೆ ಪ್ರಸ್ತಾಪಿಸಿ ಇದಕ್ಕು ಅನುಮೋದನೆಯನ್ನು ನೀಡುವಂತೆ ಮನವಿ ಮಾಡಿದ್ದಾರೆ.

ಸೋಮಣ್ಣನವರ ಮನವಿಗೆ ಅತ್ಯಂತ ಸಹಕಾರಾತ್ಮಕವಾಗಿ ನಿತಿನ್ ಗಡ್ಕರಿಯವರು ಸ್ಪಂದಿಸಿದ್ದಾರೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿರುತ್ತಾರೆ.

# ಚಂದ್ರನ ಮೇಲೆ ಬಾಹ್ಯಾಕಾಶ ಕೇಂದ್ರ, ಜೀವಿಸಬಲ್ಲ ಗ್ರಹ ಸಂಶೋಧನೆ: ಚೀನಾ



**ಬೀಜಿಂಗ್:** ಚೀನಾ ತನ್ನ ಮುಂದಿನ ಬಾಹ್ಯಾಕಾಶ ಯೋಜನೆಗಳನ್ನು ಮಂಗಳವಾರ ಘೋಷಣೆ ಮಾಡಿದೆ. ಮಾನವ ಸಹಿತ ಚಂದ್ರಯಾನ, ಚಂದ್ರ ಮೇಲೆ ಬಾಹ್ಯಾಕಾಶ ಕೇಂದ್ರ, ಜೀವಿಸಲು ಸಾಧ್ಯವಾಗುವ ಗ್ರಹಗಳ ಹುಡುಕಾಟ ನಡೆಸಲಾಗುವುದು ಎಂದು ಚೀನಾ ಹೇಳಿದೆ.ಇದು 2024ರಿಂದ 2050ರವರೆಗೆ ನಡೆಯುವ ಯೋಜನೆಗಳಾಗಿವೆ.2028ರಿಂದ 2035ರವರೆಗೆ ಚೀನಾ ಬಾಹ್ಯಾಕಾಶ ಕೇಂದ್ರ ಯೋಜನೆ ಕೈಗೊಳ್ಳಲಿದೆ. ಇದೇ ಸಮಯದಲ್ಲಿ ಮಾನವ ಸಹಿತ ಗಗನಯಾನವನ್ನು ಕೈಗೊಳ್ಳಲಿದೆ. ಇದಲ್ಲದೇ ಭೂಮಿಯನ್ನು ಹೊರತುಪಡಿಸಿ ಇತರ ಗ್ರಹಗಳಲ್ಲಿ ಮಾನವ ಬದುಕಲು ಸಾಧ್ಯವೇ ಎಂಬುದರ ಬಗ್ಗೆಯೂ ಚೀನಾ ಸಂಶೋಧನೆ ನಡೆಸಲಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಈಗಾಗಲೇ ಭೂಮಿಯ ಮೇಲ್ಭಾಗದಲ್ಲಿ ಬಾಹ್ಯಾಕಾಶ ಕೇಂದ್ರವನ್ನು ನಿರ್ಮಾಣ ಮಾಡಿ, ಬಾಹ್ಯಾಕಾಶ ಕ್ಷೇತ್ರದಲ್ಲಿ ಚೀನಾ ಸಾಧಿಸಿರುವ ಉನ್ನತಿಯನ್ನು ತೋರ್ಪಡಿಸುತ್ತದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

## ಕಾಶಿನಾಥ್ ಪುತ್ರನ ಚಿತ್ರದ ಟ್ರೈಲರ್ ಬಿಡುಗಡೆಗೊಳಿಸಿ ಕಿಚ್ಚ ಸುದೀಪ್!



ಹಿರಿಯ ನಟ, ನಿರ್ದೇಶಕ ಕಾಶಿನಾಥ್ ಅವರ ಪುತ್ರ ಅಭಿಮನ್ಯು ನಟಿಸಿರುವ ಚಿತ್ರ 'ಎಲ್ಲಿಗೆ ಪಯಣ ಯಾವುದೋ ದಾರಿ'. ಈ ಸಿನಿಮಾದ ಟ್ರೈಲರ್ ಅನ್ನು ಕಿಚ್ಚಾ ಸುದೀಪ್ ಪ್ರೀತಿಯಿಂದ ಬಿಡುಗಡೆಗೊಳಿಸಿದ್ದಾರೆ. ಅಚ್ಚುಕಟ್ಟಾಗಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಟ್ರೈಲರ್ ಲಾಂಚ್ ಆಗಿದೆ. ಬಿಗ್ ಬಾಸ್ ಶೋ ಹಾಗೂ ಸಿನಿಮಾ ಒತ್ತಡಗಳ ನಡುವೆಯೂ ಪ್ರೀತಿಯಿಂದ ಆಗಮಿಸಿದ ಸುದೀಪ್, ಕಾಶೀನಾಥ್ ಅವರು ಕನ್ನಡ ಚಿತ್ರರಂಗಕ್ಕೆ ಕೊಟ್ಟ ಕೊಡುಗೆಯನ್ನು ಸ್ಮರಿಸುತ್ತಾ, ಅವರ ಪುತ್ರ ಅಭಿಮನ್ಯು ಕಾಶೀನಾಥ್ ಅವರಿಗೆ ಶುಭ ಕೋರುತ್ತಾ, ಟ್ರೈಲರ್ ಅನ್ನು ಲೋಕಾರ್ಪಣೆಗೊಳಿಸಿದ್ದಾರೆ. ಅಂದಹಾಗೆ, ಈ ಚಿತ್ರ ಇದೇ ಅಕ್ಟೋಬರ್ 25ರಂದು ತೆರೆಗಾಣಲಿದೆ.



'ಕನ್ನಡ ಚಿತ್ರರಂಗ ಎಂದಿಗೂ ಕಾಶಿನಾಥ್ ಅವರ ಕೊಡುಗೆಗಳನ್ನು, ಅವರಿಂದಾದ ಒಳಿತುಗಳನ್ನು ಮರೆಯಲು ಸಾಧ್ಯವಿಲ್ಲ. ಅದರ ಮುಂದೆ ಅಭಿಮನ್ಯುಗೆ ನಾವು ಕೊಡುತ್ತಿರುವ ಬೆಂಬಲ ತೀರಾ ಚಿಕ್ಕದು' ಎಂದಿರುವ ಸುದೀಪ್, ಈ ಟ್ರೈಲರಿನಲ್ಲಿ ಅಭಿಮನ್ಯು ಕಾಣಿಸಿಕೊಂಡಿರುವ ರೀತಿಯನ್ನೂ ಮೆಚ್ಚಿಕೊಂಡಿದ್ದಾರೆ. ಸದರಿ ಟ್ರೈಲರ್ ಭರವಸೆ ಮೂಡಿಸಿದೆ ಎನ್ನುತ್ತಲೇ ನಿರ್ದೇಶಕ ಕಿರಣ್ ಎಸ್ ಸೂರ್ಯ ಹಾಗೂ ತಂಡದ ಪರಿಶ್ರಮಕ್ಕೂ ಮೆಚ್ಚುಗೆ ಸೂಚಿಸಿದ್ದಾರೆ. ಜೊತೆಗೆ ಖುದ್ದು ತಾವೇ ಈ ಸಿನಿಮಾಕ್ಕಾಗಿ ಹಾಡಿರುವ ಹಾಡಿನ ಕುರಿತೂ ಮಾತಾಡಿದ್ದಾರೆ. ಒಟ್ಟಾರೆಯಾಗಿ ಈ ಟ್ರೈಲರ್ ಪ್ರಾಮಿಸಿಂಗ್ ಆಗಿ ಮೂಡಿ ಬಂದಿದೆ ಎಂದಿರುವ ಕಿಚ್ಚ, ಚಿತ್ರಕ್ಕೆ ಶುಭ ಕೋರಿದ್ದಾರೆ. ನಂತರ ಮಾತಾಡಿದ ನಾಯಕನಟ ಅಭಿಮನ್ಯು, ಆರಂಭಿಕವಾಗಿ ಈ ಸಿನಿಮಾ ಸಾಗಿ ಬಂದ ರೀತಿಯ ಬಗ್ಗೆ ಸವಿವರವಾಗಿ ಮಾತಾಡಿದ್ದಾರೆ. ನಿರ್ದೇಶಕರ ಸೂಕ್ಷ್ಮವಂತಿಕೆಯನ್ನು ಮೆಚ್ಚಿಕೊಳ್ಳುತ್ತಲೇ, ಆರಂಭದಲ್ಲಿ ಕಥಾ ಎಳೆ ಹೇಳಿದಂತೆಯೇ ಚೆಂದಗೆ ಈ ಸಿನಿಮಾವನ್ನು ರೂಪಿಸಿದ್ದಾರೆಂಬ ಮೆಚ್ಚುಗೆಯ ಮಾತುಗಳನ್ನಾಡಿದ್ದಾರೆ. ಇದೇ ಹಂತದಲ್ಲಿ ಸಿನಿಮಾದ ಕೆಲ ಪಾತ್ರಗಳ ಚಹರೆಗಳನ್ನು ಪ್ರೇಕ್ಷಕರಿಗೆ ದಾಟಿಸಿದ್ದಾರೆ. ಸುದರ್ಶನ ಆರ್ಟ್ಸ್ ಬ್ಯಾನರಿನಡಿಯಲ್ಲಿ ಈ ಚಿತ್ರವನ್ನು ಜತಿನ್ ಪಟೇಲ್ ನಿರ್ಮಾಣ ಮಾಡಿದ್ದಾರೆ. ಆತಿನ್ ಅವರು ಈ ಸಿನಿಮಾ ನಿರ್ಮಾದ ಅನುಭವಗಳ ಬಗ್ಗೆ ಮಾತಾಡುತ್ತಲೇ, ಇಂಥಾ ಚೆಂದದ ಚಿತ್ರ ಮಾಡಲು ಸಾಥ್ ಕೊಟ್ಟವರನ್ನೆಲ್ಲ ಸ್ಮರಿಸಿದ್ದಾರೆ. ನಾಯಕಿ ಸ್ಫೂರ್ತಿ ಉಡಿಮನೆ ಈ ಸಮಾರಂಭದಲ್ಲಿ ಹಾಜರಿದ್ದ, ತಾನು ನಾಯಕಿಯಾಗಿ ಆಯ್ಕೆಯಾದ ಕುರಿತಾಗಿ ಒಂದಷ್ಟು ಇಂಟರೆಸ್ಟಿಂಗ್ ವಿಚಾರಗಳನ್ನು ತೆರೆದಿಟ್ಟಿದ್ದಾರೆ. ತನ್ನ ಪಾತ್ರದ ಒಂದಷ್ಟು ಸುಳಿವುಗಳನ್ನೂ ಬಿಟ್ಟುಕೊಟ್ಟಿದ್ದಾರೆ. ಪ್ರಧಾನ ಪಾತ್ರದಲ್ಲಿ ನಟಿಸಿರುವ ವಿಜಯಶ್ರೀ ಕಲಬುರ್ಗಿ ಹಾಜರಿದ್ದು ಒಂದಷ್ಟು ವಿವರಗಳನ್ನು ಹಂಚಿಕೊಂಡಿದ್ದಾರೆ. ಕಥೆ, ಚಿತ್ರಕಥೆ ಮತ್ತು ಸಂಭಾಷಣೆಯೊಂದಿಗೆ ಕಿರಣ್ ಎಸ್ ಸೂರ್ಯ ನಿರ್ದೇಶನ ಮಾಡಿದ್ದಾರೆ. ಅಭಿಮನ್ಯು ಕಾಶಿನಾಥ್ ಅವರಿಗೆ ಸ್ಫೂರ್ತಿ ಉಡಿಮನೆ ನಾಯಕಿಯಾಗಿ ಸಾಥ್ ಕೊಟ್ಟಿದ್ದಾರೆ. ವಿಜಯಶ್ರೀ ಕಲಬುರ್ಗಿ ಪ್ರಧಾನ ಪಾತ್ರದಲ್ಲಿ ನಟಿಸಿದ್ದಾರೆ. ಬಲ ರಾಜವಾಡಿ, ಶೋಭನ್, ಅಯಾಂಕ್, ರಿನಿ ಬೋಪಣ್ಣ, ಪ್ರದೀಪ್, ರವಿತೇಜ, ಕಿಶೋರ್, ಅಶ್ವಿನಿ ರಾವ್, ಪ್ರಿಯಾ ಮುಂತಾದವರ ತಾರಾಗಣವಿದೆ. ಪ್ರಣವ್ ರಾವ್ ಸಂಗೀತ ನಿರ್ದೇಶನ, ಸತ್ಯ ರಾಮ್ ಛಾಯಾಗ್ರಹಣವಿರುವ ಈ ಚಿತ್ರಕ್ಕೆ ಪ್ರಮೋದ್ ಮರವಂತೆ ಸಾಹಿತ್ಯವಿದೆ.



## ಬೆಡ್‌ರೂಮ್ ಫೋಟೋ ಶೇರ್ ಮಾಡಿದ ನಿವೇದಿತಾ ಗೌಡ

'ಬಿಗ್ ಬಾಸ್' ಬೆಡಗಿ ನಿವೇದಿತಾ ಗೌಡ ಅವರು ಸದಾ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ಸದ್ದು ಮಾಡುತ್ತಲೇ ಇರುತ್ತಾರೆ. ಡಿವೋರ್ಸ್ ಬಳಿಕ ಸೋಶಿಯಲ್ ಮೀಡಿಯಾದಲ್ಲಿ ಮತ್ತಷ್ಟು ಆಕ್ಟೀವ್ ಆಗಿರುವ ನಟಿ ಈಗ ಬೆಡ್‌ರೂಮ್ ಫೋಟೋಶೂಟ್‌ವೊಂದನ್ನು ಶೇರ್ ಮಾಡಿದ್ದಾರೆ. ಕೇಸರಿ ಬಣ್ಣದ ಲೆಹೆಂಗಾ ಧರಿಸಿರುವ ಕೆಲ ಫೋಟೋಗಳನ್ನು ನಟಿ ಶೇರ್ ಮಾಡಿದ್ದಾರೆ. ಬೆಡ್ ಮೇಲೆ ಕುಳಿತು ವಿವಿಧ ಭಂಗಿಯಲ್ಲಿ ನಟಿ ಪೋಸ್ ನೀಡಿದ್ದಾರೆ. ಎದೆಯ ಸೀಳು ಕಾಣುವಂತೆ ಬೋಲ್ಡ್ ಆಗಿ ಪೋಸ್ ಕೊಟ್ಟಿರುವ ನಿವೇದಿತಾ ಲುಕ್‌ಗೆ ಬಗೆ ಬಗೆಯ ಕಾಮೆಂಟ್ ಜೊತೆಗೆ ಸಿಕ್ಕಾಪಟ್ಟೆ ಟ್ರೋಲ್ ಆಗ್ತಿದೆ. ನಿಮಗೆ ಡಿವೋರ್ಸ್ ಆಗಿದೆ ಅನ್ನೋದು ನೆನಪಿದ್ಯಾ? ಎಂದೆಲ್ಲಾ ನಟಿಗೆ ನೆಟ್ಟಿಗರು ಪ್ರಶ್ನೆ ಮಾಡಿದ್ದಾರೆ. ಆದರೆ ಈ ಯಾವ ಕಾಮೆಂಟ್‌ಗಳಿಗೂ ತಲೆಕೆಡಿಸಿಕೊಳ್ಳದೇ ನಟಿ ಸೈಲೆಂಟ್ ಆಗಿದ್ದಾರೆ. ಇನ್ನೂ ಚಂದನ್ ಶೆಟ್ಟಿ ಜೊತೆ 'ಮುದ್ದು ರಾಕ್ಷಸಿ' ಎಂಬ ಸಿನಿಮಾದಲ್ಲಿ ನಟಿಸಿದ್ದಾರೆ. ಇದರ ರಿಲೀಸ್‌ಗೆ ನಟಿ ಎದುರು ನೋಡ್ತಿದ್ದಾರೆ. ಸೃಜನ್ ಲೋಕೇಶ್ ನಟನೆಯ 'ಜಿಎಸ್‌ಟಿ' ಸಿನಿಮಾದಲ್ಲಿ ನಿವೇದಿತಾ ನಟಿಸಿದ್ದಾರೆ.

## ಟ್ರೈಲರ್ ಮೂಲಕ ಬೆರಗು ಮೂಡಿಸಿತು ಸೈಕ್ಯಾಡೆಲಿಕ್ ಥ್ರಿಲ್ಲರ್ ಅಂಶು!



ಸಾಮಾಜಿಕ ಪಲ್ಲಟಗಳಿಗೆ ಕಣ್ಣಾದ ಕಥೆ ಹೊಂದಿರುವ ಚಿತ್ರಗಳೆಂದರೆ ಕನ್ನಡದ ಪ್ರೇಕ್ಷಕರಲ್ಲಿ ಒಂದು ಬಗೆಯ ಸೆಳೆತವಿದೆ. ಅಂಥಾದ್ದೊಂದು ಕಥೆ ಭಿನ್ನ ಜಾನರಿನಲ್ಲಿ, ಪಕ್ಕಾ ಕಮರ್ಶಿಯಲ್ ಬಗೆಯಲ್ಲಿ ರೂಪುಗೊಂಡಿದೆಯೆಂದರೆ ಅಂಥಾ ಸೆಳೆತ ಮತ್ತಷ್ಟು ತೀವ್ರವಾಗಿರುತ್ತದೆ. ಸದ್ಯ ಬಿಡುಗಡೆಗೊಂಡಿರುವ 'ಅಂಶು' ಚಿತ್ರದ ಟ್ರೈಲರ್ ನಲ್ಲಿಯೂ ಅಂಥಾದ್ದೊಂದು ಸೆಳೆತವಿದ್ದಂತಿದೆ. ಇದೀಗ ಬಿಡುಗಡೆಗೆ ಸಜ್ಜುಗೊಂಡಿರುವ 'ಅಂಶು' ಮಹಿಳಾ ಪ್ರಧಾನ ಕಥಾನಕವನ್ನು ಒಳಗೊಂಡಿರುವ ಚಿತ್ರ. ಅದರ ಒಟ್ಟಾರೆ ಸಾರದತ್ತ ಕುತೂಹಲ ಕೇಂದ್ರೀಕರಿಸುವಂತೆ ಮಾಡುವಲ್ಲಿ ಈ ಟ್ರೈಲರ್ ಯಶ ಕಂಡಿದೆ.

ಈ ಚಿತ್ರದಲ್ಲಿ ನಿಶಾ ರವಿಕೃಷ್ಣನ್ ನಾಯಕಿಯಾಗಿ ನಟಿಸಿದ್ದಾರೆ. ಗಟ್ಟಿಮೇಳ ಸೀರಿಯಲ್ಲಿನ ಅಮೂಲ್ಯಾ ಪಾತ್ರದ ಮೂಲಕ ಮಿಂಚಿದ್ದ ನಿಶಾ ಈ ಟ್ರೈಲರ್‌ನಲ್ಲಿ ಸೀರಿಯಲ್ ಇಮೇಜನ್ನು ಮೀರಿದ ಪಾತ್ರವೊಂದರಲ್ಲಿ ಕಾಣಿಸಿಕೊಂಡಿದ್ದಾರೆ. ಎಂ.ಸಿ ಚನ್ನಕೇಶವ ನಿರ್ದೇಶನದ ಚೊಚ್ಚಲ ಚಿತ್ರ ಅಂಶು. 'ನಾವು ನಂಬೋದೆಲ್ಲ ನಿಜ ಅಲ್ಲ, ಸಹಿಸೋಕ್ ಆಗ್ದೆ ಇರೋದೆಲ್ಲ ಸುಳ್ಳಲ್ಲ' ಅಂತ ಶುರುವಾಗುವ ಈ ಟ್ರೈಲರ್ ನೋಡಿದ ಮಂದಿಯಲ್ಲಿ ಒಂದಷ್ಟು ಪ್ರಶ್ನೆಗಳು ಮೂಡಿಕೊಂಡಿವೆ. ಅದಕ್ಕುತ್ತರವೆಂಬಂಥಾ, ಬೆರಗಿನ ಸಂಗತಿಗಳನ್ನು ಚಿತ್ರತಂಡ ತೆರೆದಿಟ್ಟಿದೆ. ಅದರ ಪ್ರಕಾರ ಹೇಳೋದಾದರೆ, ಇದೊಂದು ಸೈಕ್ಯಾಡೆಲಿಕ್ ಥ್ರಿಲ್ಲರ್ ಜಾನರಿನ ಚಿತ್ರ. ಈ ಸಮಾಜದಲ್ಲಿ ಇಂದಿನ ದಿನಮಾನದಲ್ಲಿ ಘಟಿಸುತ್ತಿರುವ ವಿಚಾರಗಳನ್ನಿಲ್ಲಿ ಅತ್ಯಂತ ಪರಿಣಾಮಕಾರಿಯಾಗಿ ದೃಷ್ಯೀಕರಿಸಲಾಗಿದೆಯಂತೆ. ಅದರ ಆವೇಗ ಎಂಥಾದ್ದಿದೆ ಎಂಬುದಕ್ಕೆ ಸಾಕ್ಷಿ ಎಂಬಂತೆ ಈ ಟ್ರೈಲರ್ ಮೂಡಿ ಬಂದಿದೆ. ಗ್ರಹಣ ಎಲ್ ಎಲ್ ಪಿ ಬ್ಯಾನರಿನಡಿಯಲ್ಲಿ ಈ ಸಿನಿಮಾ ನಿರ್ಮಾಣಗೊಂಡಿದೆ. ರತನ್ ಗಂಗಾಧರ್,ಸಂಪತ್ ಶಿವಶಂಕರ್, ಕೃತಿ ನಾಣಯ್ಯ ನಿರ್ಮಾಣ ಕಾರ್ಯದ ಮುಂಚೂಣಿಯಲ್ಲಿ ಕಾರ್ಯನಿರ್ವಹಿಸಿದ್ದಾರೆ. ಭಜರಂಗಿ2, ವೇದ ಚಿತ್ರಗಳಲ್ಲಿ ವಿಲನ್ ಆಗಿ ನಟಿಸಿದ , ಈಗ ಬಾಲಿವುಡ್ಡಿನಲ್ಲೂ ಸಕ್ರಿಯರಾಗಿರುವ ಚಲುವರಾಜ್ ನಿರ್ಮಾಣದಲ್ಲಿ ಸಾಥ್ ಕೊಟ್ಟಿದ್ದಾರೆ. ಜೈಚಂದ್ರ, ಪ್ರಮೋದ್ ಡಾ.ಮಧುರಾಜ್, ಮತ್ತು ವೀರನ್ ಗೌಡ ಕೂಡಾ ಅಂಶು ನಿರ್ಮಾಣದಲ್ಲಿ ಸಹಭಾಗಿಗಳಾಗಿದ್ದಾರೆ. ಈ ಹಿಂದೆ ಅಂಶು ಚಿತ್ರದ ಫಸ್ಟ್ ಲುಕ್ ಟೀಸರ್ ಬಿಡುಗಡೆಗೊಂಡಿತ್ತು. ಲಂಡನ್ನಿನಲ್ಲಿ ಡಾಕ್ಟರ್ ಆಗಿರುವ ಮಧುರಾಜ್ ಅದನ್ನು ನೋಡಿ ಥ್ರಿಲ್ ಆಗಿ ನಿರ್ಮಾಣ ತಂಡಕ್ಕೆ ಸೇರಿಕೊಂಡಿದ್ದರಂತೆ. ಇನ್ನುಳಿದಂತೆ ನಿರ್ದೇಶಕ ಚನ್ನಕೇಶವ ಸೇಂಟ್ ಜೋಸೆಫ್ಸ್ ಯೂನಿವರ್ಸಿಟಿಯಲ್ಲಿ ಫಿಲಂ ಮೇಕಿಂಗ್ ಕೋರ್ಸ್ ಮುಗಿಸಿಕೊಂಡಿರುವವರು. ಅವರಿಲ್ಲಿ ಸಮಾಜಮುಖಿ ಕಥನವೊಂದಕ್ಕೆ ಕಮರ್ಶಿಯಲ್ ಧಾಟಿಯಲ್ಲಿ ದೃಷ್ಯ ರೂಪ ನೀಡಿದ್ದಾರೆ. ಇನ್ನುಳಿದಂತೆ ದೂಡಿ ಎಂಬ ತಮಿಳು ಚಿತ್ರ, ಕನ್ನಡದ ಗರುಡ ಪುರಾಣ ಮುಂತಾದ ಸಿನಿಮಾಗಳಿಗೆ ಕೆಲಸ ಮಾಡಿದ್ದ ಸುನೀಲ್ ನರಸಿಂಹಮೂರ್ತಿ ಛಾಯಾಗ್ರಾಹಕರಾಗಿ ಈ ಚಿತ್ರ ಭಾಗವಾಗಿದ್ದಾರೆ. ಜಿ.ವಿ ಪ್ರಕಾಶ್, ವಿದ್ಯಾಸಾಗರ್ ಜೊತೆ ಪ್ರೋಗ್ರಾಮರ್ ಆಗಿದ್ದ ಕೆ.ಸಿ ಬಾಲಸಾರಂಗನ್ ಸಂಗೀತ ನಿರ್ದೇಶನ ಮಾಡಿದ್ದಾರೆ. ನವ ಪ್ರತಿಭೆ ವಿಘ್ನೇಶ್ ಹಿನ್ನೆಲೆ ಸಂಗೀತ ನೀಡಿದ್ದಾರೆ. ಮಹೇಂದ್ರ ಗೌಡ ಸಂಭಾಷಣೆ ಮತ್ತು, ಸಾಹಿತ್ಯದ ಜವಾಬ್ದಾರಿ ನಿಭಾಯಿಸಿದ್ದಾರೆ. ಇವರು ಬರೆದಿರುವ ಎರಡು ಹಾಡುಗಳು ಈಗಾಗಲೇ ಬಿಡುಗಡೆಗೊಂಡು ಕೇಳುಗರ ಮೆಚ್ಚುಗೆ ಪಡೆದುಕೊಂಡಿವೆ. ಇನ್ನುಳಿದ ಮತ್ತೊಂದು ಹಾಡು ಇಷ್ಟರಲ್ಲಿಯೇ ಬಿಡುಗಡೆಗೊಳ್ಳಲಿದೆ. ಅದರ ಬೆನ್ನಲ್ಲಿಯೇ ಅಂಶು ಚಿತ್ರ ಪ್ರೇಕ್ಷಕರ ಮುಂದೆ ಬರಲಿದೆ.

### ನ್ಯೂಜಿಲೆಂಡ್ ವಿರುದ್ಧದ ಪಂದ್ಯದಲ್ಲಿ ಬರೋಬ್ಬರಿ 8 ಕ್ಯಾಚ್ ಬಿಟ್ಟ ಪಾಕ್

## ಚರ್ಚೆ ಹುಟ್ಟುಹಾಕಿದ ಕಳಪೆ ಫೀಲ್ಡಿಂಗ್





**ನವದೆಹಲಿ:** ಮಹಿಳಾ ಟಿ20 ವಿಶ್ವಕಪ್ ಟೂರ್ನಿಯಲ್ಲಿ ಸೋಮವಾರ ನ್ಯೂಜಿಲೆಂಡ್ ವಿರುದ್ಧ ನಡೆದ ಪಂದ್ಯದಲ್ಲಿ ಪಾಕಿಸ್ತಾನದ ಹೀನಾಯ ಸೋಲಿನೊಂದಿಗೆ ಭಾರತ ಟೂರ್ನಿಯಿಂದ ಹೊರಬಿದ್ದಿದೆ. ಇದೀಗ ಪಾಕಿಸ್ತಾನದ ಕಳಪೆ ಫೀಲ್ಡಿಂಗ್ ಬಗ್ಗೆ ಸೋಷಿಯಲ್ ಮೀಡಿಯಾದಲ್ಲಿ ಚರ್ಚೆ ಜೋರಾಗಿದೆ.

ನಿನ್ನೆ ನಡೆದ ನ್ಯೂಜಿಲೆಂಡ್ ವಿರುದ್ಧದ ಮ್ಯಾಚ್ ನಲ್ಲಿ ಪಾಕಿಸ್ತಾನವು ಪಂದ್ಯಾವಳಿಯ ಇತಿಹಾಸದಲ್ಲಿ ಅತ್ಯಂತ ಕೆಟ್ಟ ಪ್ರದರ್ಶನವನ್ನು ನೀಡಿತು. ಒಂದಲ್ಲ, ಎರಡಲ್ಲ ಬರೋಬ್ಬರಿ ಎಂಟು ಕ್ಯಾಚ್‌ಗಳನ್ನು ಆಟಗಾರರು ಬಿಟ್ಟಿದ್ದರಿಂದ 54 ರನ್‌ಗಳಿಂದ ಪಾಕ್ ಸೋಲನುಭವಿಸಿತು.

ಪಾಕಿಸ್ತಾನವು ನ್ಯೂಜಿಲೆಂಡ್ ಅನ್ನು 20 ಓವರ್ ಗಳಲ್ಲಿ 6 ವಿಕೆಟ್ ನಷ್ಟಕ್ಕೆ 110 ರನ್‌ಗಳ ಸಾಧಾರಣ ಮೊತ್ತಕ್ಕೆ ಕಟ್ಟಿಹಾಕಿತ್ತು. ಆದರೆ ಎಂಟು ಕ್ಯಾಚ್ ಗಳನ್ನು ಕೈಚೆಲ್ಲಿದ್ದಲ್ಲದೇ, ಒಂದೆರಡು ರನ್-ಔಟ್ ಸಾಧ್ಯತೆಗಳನ್ನು ಸಹ ಮಾಡಲಿಲ್ಲ. ಪಾಕಿಸ್ತಾನದ ಫಾತಿಮಾ ಸನಾ ಸ್ವತಃ 4 ಕ್ಯಾಚ್‌ಗಳನ್ನು ಬಿಟ್ಟರು. ಇದು ಕಿವೀಸ್ ಗೆಲುವಿಗೆ ಅವಕಾಶಗಳನ್ನು ಮಾಡಿಕೊಟ್ಟಿತು.

111 ರನ್‌ಗಳ ಗುರಿಯನ್ನು ಬೆನ್ನಟ್ಟಿದ ಪಾಕಿಸ್ತಾನವು ತಮ್ಮ ಎದುರಾಳಿಗಳ ಬೌಲಿಂಗ್‌ನ ಮೇಲೆ ಹಿಡಿತ ಸಾಧಿಸುವಲ್ಲಿ ಯಶಸ್ವಿಯಾಗಲಿಲ್ಲ. ಕೆಲವು ಕಳಪೆ ಶಾಟ್ ಆಯ್ಕೆ ಮತ್ತು ರೂಜ್ ಶೈಲಿಯ ಆಟದ ಪರಿಣಾಮವಾಗಿ ಪಾಕ್ 56 ಆಲೌಟ್ ಆಗಿ ಹೀನಾಯ ಸೋಲನುಭವಿಸಿತು. ಈ ಮೊತ್ತವು ಮಹಿಳೆಯರ ಟಿ20 ವಿಶ್ವಕಪ್ ಇತಿಹಾಸದಲ್ಲೇ ಎರಡನೇ ಅತ್ಯಂತ ಕೆಟ್ಟ ಇತಿಹಾಸ ಬರೆದಿದೆ. ಪಾಕಿಸ್ತಾನ ತಂಡದ ಸೋಲು ಈಗ ಚರ್ಚೆ ಹುಟ್ಟುಹಾಕಿದೆ. ಪಾಕಿಸ್ತಾನದ ಮಾಜಿ



ಮಹಿಳಾ ತಂಡದ ನಾಯಕಿ ಸನಾ ಮಿರ್ ಕೂಡ ತಮ್ಮ ತಂಡದ ಆಟಗಾರರ ಪ್ರದರ್ಶನ ಕುರಿತು ಅಚ್ಚರಿ ವ್ಯಕ್ತಪಡಿಸಿದ್ದಾರೆ. 15 ವರ್ಷಗಳ ಆಟದಲ್ಲಿ ನಾನು ಇದನ್ನು ನೋಡಿಲ್ಲ ಎಂದು ಮಿರ್ ಪ್ರತಿಕ್ರಿಯಿಸಿದ್ದಾರೆ.

ನ್ಯೂಜಿಲೆಂಡ್ ವಿರುದ್ಧ ಪಾಕಿಸ್ತಾನದ ಕೈಬಿಟ್ಟ ಕ್ಯಾಚ್‌ಗಳು: ಓವರ್‌ಗಳು 4.2, 5.2, 7.3, 15.5, 17.2, 19.1, 19.3 ಮತ್ತು 19.5 ಎಂದು ಮುಫದ್ದಲ್ ವೋಹ್ರಾ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ. 'ನ್ಯೂಜಿಲೆಂಡ್ ವಿರುದ್ಧದ ಪಂದ್ಯದಲ್ಲಿ ಪಾಕಿಸ್ತಾನ ಎಷ್ಟು ಕ್ಯಾಚ್ ಬಿಟ್ಟಿದೆ ಎಂಬುದು ನಿಮಗೆ ಗೊತ್ತೆ?' ಎಂದು ಟೀಂ ಇಂಡಿಯಾ ಮಾಜಿ ಆಟಗಾರ ಮುನಾಫ್ ಪಟೇಲ್ ಎಕ್ಸ್‌ನಲ್ಲಿ ಪೋಸ್ಟ್ ಹಾಕಿದ್ದಾರೆ.

## ಕೇವಲ 89 ರನ್‌ಗೆ ವೆಸ್ಟ್ ಇಂಡೀಸ್ ಆಲೌಟ್



ದಂಬುಲ್ಲಾದಲ್ಲಿ ನಡೆದ ಆತಿಥೇಯ ಶ್ರೀಲಂಕಾ ವಿರುದ್ಧದ 2ನೇ ಟಿ20 ಪಂದ್ಯದಲ್ಲಿ ವೆಸ್ ಇಂಡೀಸ್ ಹೀನಾಯ ಸೋಲನುಭವಿಸಿದೆ. ರಣ್ ಗಿರಿ ಇಂಟರ್ ನ್ಯಾಶನಲ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಶ್ರೀಲಂಕಾ ತಂಡವು ಬ್ಯಾಟಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಲಂಕಾ ತಂಡಕ್ಕೆ ಪಾತುಮ್ ನಿಸ್ಸಂಕಾ ಹಾಗೂ ಕುಸಾಲ್ ಮೆಂಡಿಸ್ ಉತ್ತಮ ಆರಂಭ ಒದಗಿಸಿದ್ದರು. ಮೊದಲ ವಿಕೆಟ್‌ಗೆ 77 ರನ್ ಪೇರಿಸಿದ ಬಳಿಕ ಮೆಂಡಿಸ್ (26) ಔಟಾದರು.

ಮತ್ತೊಂದೆಡೆ ಉತ್ತಮ ಬ್ಯಾಟಿಂಗ್ ಮುಂದುವರೆಸಿದ ಪಾತುಮ್ ನಿಸ್ಸಂಕಾ (54) ಅರ್ಧಶತಕ ಬಾರಿಸಿ ನಿರ್ಗಮಿಸಿದರು. ಇನ್ನು ಕುಸಾಲ್ ಪೆರೇರಾ 24 ರನ್ ಗಳಿಸಿದರೆ, ಕಮಿಂದು ಮೆಂಡಿಸ್ 19 ರನ್ ಬಾರಿಸಿದರು. ಈ ಮೂಲಕ ಶ್ರೀಲಂಕಾ ತಂಡವು 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 162 ರನ್ ಕಲೆಹಾಕಿತು. 163 ರನ್‌ಗಳ ಸ್ಪರ್ಧಾತ್ಮಕ ಗುರಿ ಬೆನ್ನತ್ತಿದ ವೆಸ್ಟ್ ಇಂಡೀಸ್ ತಂಡವು 38 ರನ್ ಗಳಿಸುವಷ್ಟರಲ್ಲಿ ಅಗ್ರ ಕ್ರಮಾಂಕದ ಐವರು ಬ್ಯಾಟರ್‌ಗಳು ಪೆವಿಲಿಯನ್ ಗೆ ಹಿಂತಿರುಗಿದ್ದರು. ಈ ಆರಂಭಿಕ ಆಘಾತದಿಂದ ಪಾರಾಗುವ ಮುನ್ನವೇ ವೆಸ್ಟ್ ಇಂಡೀಸ್ ತಂಡವನ್ನು ಕೇವಲ 89 ರನ್ ಗಳಿಗೆ ಆಲೌಟ್ ಮಾಡುವಲ್ಲಿ ಲಂಕಾ ಬೌಲರ್‌ಗಳು ಯಶಸ್ವಿಯಾದರು. ವೆಸ್ಟ್ ಇಂಡೀಸ್ ಪರ ನಾಯಕ ರೋವ್‌ಮನ್ ಪೊವೆಲ್ 20 ರನ್ ಗಳಿಸಿದ್ದು ಗರಿಷ್ಠ ಸ್ಕೋರ್. ಇನ್ನು ಶ್ರೀಲಂಕಾ ಪರ ದುನಿತ್ ವೆಲ್ಲಲಾಗೆ ಓವರ್‌ಗಳಲ್ಲಿ ಕೇವಲ 9 ರನ್ ನೀಡಿ 3 ವಿಕೆಟ್ ಪಡೆದರೆ, ಮಹೀಶ್ ತೀಕ್ಷಣ, ಚರಿತ್ ಅಸಲಂಕಾ ಮತ್ತು ವನಿಂದು ಹಸರಂಗ ತಲಾ 2 ವಿಕೆಟ್ ಕಬಳಿಸಿ ಮಿಂಚಿದರು. ಈ ಗೆಲುವಿನೊಂದಿಗೆ ಶ್ರೀಲಂಕಾ - ವೆಸ್ಟ್ ಇಂಡೀಸ್ ನಡುವಣ ಮೂರು ಪಂದ್ಯಗಳ ಟಿ20 ಸರಣಿಯು 1-1 ಅಂತರದಿಂದ ಸಮಬಲವಾಗಿದೆ. ಅಲ್ಲದೆ ಮೂರನೇ ಪಂದ್ಯವು ಫೈನಲ್ ಫೈಟ್ ಆಗಿ ಮಾರ್ಪಟ್ಟಿದೆ.

## ಮುಡಾ ಬೆನ್ನಲ್ಲೇ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರಿಗೆ ಮತ್ತೊಂದು ದೂರು

**ಬೆಂಗಳೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಹಗರಣದ ಬೆನ್ನಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮತ್ತೊಂದು ಸಂಕಷ್ಟ ಎದುರಾಗಿದೆ. ಅರ್ಕಾವತಿ ಲೇಔಟ್ ನಿವೇಶನದಾರರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಿದ್ದಾರೆ.

ಅರ್ಕಾವತಿ ಲೇಔಟ್‌ನಲ್ಲಿ ನಿವೇಶನ ಪಡೆದಿದ್ದ ಶಿವಲಿಂಗಪ್ಪ, ವೆಂಕಟಕೃಷ್ಣಪ್ಪ, ರಾಮಚಂದ್ರಯ್ಯ ರಾಜಶೇಖರ್ ಎಂಬುವರು ಸಿಎಂ ಸಿದ್ದರಾಮಯ್ಯ, ಬಿಡಿಎ ಆಯುಕ್ತ ಹಾಗೂ ಬಿಡಿಎ ಅಧಿಕಾರಿಗಳು ''ಅಧಿಕಾರ ದುರ್ಬಳಕೆ ಮಾಡಿಕೊಂಡಿದ್ದಾರೆ. ಅರ್ಕಾವತಿ ಲೇಔಟ್‌ನಲ್ಲಿ ಹಂಚಿಕೆಯಾಗಿದ್ದ ನಿವೇಶನ ಭೂಗಳ್ಳರ ಪಾಲಾಗುತ್ತಿದೆ. ಅಧಿಕಾರ ದುರ್ಬಳಕೆಯಿಂದ ನಿವೇಶನದಾರರಿಗೆ ತೊಂದರೆಯಾಗುತ್ತಿದೆ'' ಎಂದು ರಾಜ್ಯಪಾಲರಿಗೆ ದೂರು ನೀಡಿದ್ದಾರೆ.

**ಏನಿದು ಅರ್ಕಾವತಿ ಲೇಔಟ್ ವಿವಾದ?:** ಥಣಿಸಂದ್ರ, ಸಂಪಿಗೆಹಳ್ಳಿ, ಜಕ್ಕೂರು, ಕೆ.ನಾರಾಯಣಪುರ ಸೇರಿ 16 ಹಳ್ಳಿಗಳ ಸುಮಾರು 800 ಎಕರೆ ಜಮೀನನ್ನು ರೈತರಿಂದ ಖರೀದಿಸಿ, ಬಿಡಿಎ ನಿವೇಶನಗಳಾಗಿ ಪರಿವರ್ತನೆ ಮಾಡಿದೆ.



ಈ ನಿವೇಶನಗಳಿಗೆ ಬಿಡಿಎ ಅರ್ಕಾವತಿ ಲೇಔಟ್ ಅಂತ ನಾಮಕರಣ ಮಾಡಿದೆ. 2004ರಲ್ಲಿ ಬಿಡಿಎ ಅರ್ಕಾವತಿ ಲೇಔಟ್‌ನಲ್ಲಿನ ನಿವೇಶನಕ್ಕೆ ಅರ್ಜಿ ಆಹ್ವಾನಿಸಿತ್ತು. ಸುಮಾರು ಒಂದು ಲಕ್ಷಕ್ಕೂ ಹೆಚ್ಚು ಜನರು ನಿವೇಶನಕ್ಕಾಗಿ ಅರ್ಜಿ ಹಾಕಿದ್ದರು.

2006 ರಲ್ಲಿ ಬಿಡಿಎ 20 ಸಾವಿರ ಜನರನ್ನು ಫಲಾನುಭವಿಗಳಾಗಿ ಮತ್ತು 12 ಸಾವಿರ ಜನರನ್ನು ನಿವೇಶನ ಕೊಂಡುಕೊಳ್ಳುವುವವರಾಗಿ ಪರಿಗಣಿಸಿತ್ತು. ರೈತರಿಗೆ ಪರಿಹಾರ ನೀಡಿ ಬಿಡಿಎ ಕೈತೊಳೆದುಕೊಂಡಿತು. ಮತ್ತು 30ಫಿ40 ನಿವೇಶನಕ್ಕೆ ಎರಡೂವರೆ ಲಕ್ಷ ರೂ. ಮತ್ತು 40ಫಿ60 ನಿವೇಶನಕ್ಕೆ ನಾಲ್ಕೂವರೆ ಲಕ್ಷ ರೂ. ಅಂತೆ ಹಣ ಪಡೆದು ಬಿಡಿಎ 12 ಸಾವಿರ ಜನರಿಗೆ ನಿವೇಶನ ಹಂಚಿಕೆ ಮಾಡಿತ್ತು. ಇವರಿಗೆ ಬಿಡಿಎ ರಿಜಿಸ್ಟರ್ ಕಮ್ ಸೇಲ್ ಡೀಡ್ ನೀಡಿತ್ತು. ರಿಜಿಸ್ಟರ್ ಕಮ್ ಸೇಲ್ ಡೀಡ್ ಆಗಿದ್ದರಿಂದ ನಿವೇಶನದಾರರು ನಿವೇಶನವನ್ನು ಕನಿಷ್ಠ ಹತ್ತು ವರ್ಷ ಮಾರಾಟ ಮಾಡುವಂತಿಲ್ಲ. ನಿವೇಶನದಾರರು 2006ರಿಂದ ಈವರೆಗೂ ನಿವೇಶನ ಸಂಬಂಧ ತೆರಿಗೆ ಕಟ್ಟುತ್ತಿದ್ದಾರೆ.

ಆದರೆ 2014ರಲ್ಲಿ ಸಿಎಂ ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಅರ್ಕಾವತಿ ನಿವೇಶನಗಳ ಹಿಂಪಡೆಯಿತು. ಇದರಿಂದ ನಿವೇಶನದಾರರಿಗೆ ತಮ್ಮ ನಿವೇಶನಕ್ಕೆ ಹೋಗಲು ಬಿಡುತ್ತಿಲ್ಲ. ಇತ್ತ ವಶಪಡಿಸಿಕೊಂಡ ಜಮೀನು ರೈತರಿಗೂ ಹಿಂದುರುಗಿಸಿಲ್ಲ. ಈ ಬಗ್ಗೆ ಪ್ರಶ್ನೆ ಮಾಡಿದರೇ ಅರ್ಕಾವತಿಯಲ್ಲಿ ನಿವೇಶನ ಇಲ್ಲ ಕೆಂಪೇಗೌಡ ಲೇಔಟ್‌ನಲ್ಲಿ ಕೊಡಿಸೋಣ ಅಂತ ಅಧಿಕಾರಿಗಳು ಹೇಳುತ್ತಿದ್ದಾರೆ.

ಇವೆಲ್ಲವನ್ನು ಗಮನಿಸಿದರೇ ಅರ್ಕಾವತಿ ಲೇಔಟ್‌ನಲ್ಲಿ ಅಕ್ರಮ ಎಸಗಲಾಗಿದೆ. ಅರ್ಕಾವತಿ ಲೇಔಟ್‌ನಲ್ಲಿ ವಶಪಡಿಸಿಕೊಂಡಿರುವ ಜಾಗ ಭೂಗಳ್ಳರ ಪಾಲಾಗುತ್ತಿದೆ. ಇದರಿಂದ ಅಸಲಿ ಫಲಾನುಭವಿಗಳಾಗಿರುವ ನಿವೇಶನದಾರರಿಗೆ ತೊಂದರೆಯಾಗುತ್ತಿದೆ ಎಂದು ದೂರು ನೀಡಲಾಗಿದೆ.

## ದಾಖಲೆ ತೋರಿಸಿದ್ರೆ ರಾಜಕೀಯ ಸನ್ಯಾಸತ್ವ ಸ್ವೀಕರಿಸುತ್ತೇನೆ; ಸಿಟಿ ರವಿ

**ಗುಲ್ಬರ್ಗ:** ನನ್ನ ಮೇಲಿನ ಯಾವ ಕೇಸ್ ವಾಪಸ್ ಪಡೆದಿದ್ದಾರೆ? ಅದರ ಬಗ್ಗೆ ದಾಖಲೆ ತೋರಿಸಿದರೆ ನಾನು ಎಂಎಲ್‌ಸಿ ಸ್ಥಾನಕ್ಕೆ ರಾಜೀನಾಮೆ ನೀಡಿ ರಾಜಕೀಯ ಸನ್ಯಾಸತ್ವ ಸ್ವೀಕರಿಸುತ್ತೇನೆ ಎಂದು ಕಲಬುರಗಿಯಲ್ಲಿ ಬಿಜೆಪಿ ಎಂಎಲ್‌ಸಿ ಸಿ.ಟಿ.ರವಿ ಹೇಳಿದ್ದಾರೆ.

ಈ ಬಗ್ಗೆ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನನ್ನ ಮೇಲೆ ಯಾವ ಕೇಸ್ ಇಲ್ಲ. ಕ್ಯಾಬಿನೆಟ್‌ನಲ್ಲಿ ನನ್ನ ಮೇಲಿನ ಯಾವ ಕೇಸ್ ಕೂಡ ವಾಪಸ್ ಪಡೆದಿಲ್ಲ. ನಾನು ಚಾಲೆಂಜ್ ಮಾಡುತ್ತೇನೆ. ನನ್ನ ಮೇಲೆ ಯಾವ ಕೇಸ್ ಇದೆ? ಯಾವುದು ವಾಪಸ್ ತೆಗೆದುಕೊಂಡಿದ್ದಾರೆ ಎಂದು ಹೇಳಲಿ. ಇವರು ಜನರನ್ನು ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಹೀಗಾಗಿ ಪ್ರಿಯಾಂಕ್ ಖರ್ಗೆ, ಹೆಚ್ ಕೆ ಪಾಟೀಲ್ ನನ್ನ ಚಾಲೆಂಜ್ ಸ್ವೀಕರಿಸಲಿ ಎಂದು ಸವಾಲ್ ಹಾಕಿದರು.

ಅವರು ನನ್ನ ರುಜುವಾತು ಮಾಡಬೇಕು. ಇಲ್ಲದೇ ಹೋದ್ರೆ, ಜನತೆ ಎದುರು ಕ್ಷಮೆ ಕೇಳಿ ರಾಜೀನಾಮೆ ಕೊಡಬೇಕು. ಮುಸ್ಲಿಮರ



ಓಲೈಕೆಗಾಗಿ ಕೇಸ್ ವಾಪಸ್ ಪಡೆದಿದ್ದಾರೆ. ನನ್ನ ಮೇಲೆ ಕೋಲಾರ, ಚಿಕ್ಕಬಳ್ಳಾಪುರದಲ್ಲಿ ಯಾವುದೇ ಕೇಸ್ ಇರಲಿಲ್ಲ. ಕುಕ್ಕರ ಬಾಂಬ್ ಬ್ಲಾಸ್ಟ್ ಪ್ರಕರಣ ಆರೋಪಿಗಳನ್ನು ಕಾಂಗ್ರೆಸ್‌ನವರು 'ದೇ ಆರ್ ಮೈ ಬ್ರದರ್ಸ್' ಅಂತಾ ಮುಸ್ಲಿಮರನ್ನು ಓಲೈಕೆ ಮಾಡಿದ್ದಾರೆ ಎಂದರು.

ಇನ್ನು ಖರ್ಗೆ ಕುಟುಂಬದ ಸಿದ್ಧಾರ್ಥ ಟ್ರಸ್ಟ್ ಜಮೀನು ವಾಪಸ್ ನೀಡಿರುವ ವಿಚಾರವಾಗಿ ಪ್ರತಿಕ್ರಿಯಿಸಿ, ಸದ್ಯ ರಾಜ್ಯದಲ್ಲಿ ಹೊಸ ಟ್ರೆಂಡ್ ಶುರುವಾಗಿದೆ. ಕದ್ದ ಮಾಲನ್ನ ವಾಪಸ್ ಕೊಡ್ತಾ ಇದ್ದಾರೆ. ಕದ್ದ ಮಾಲನ್ನ ವಾಪಸ್ ಕೊಟ್ಟರೆ ಅದನ್ನ ಸಾಕ್ಷಿಯಾಗಿ ಪರಿಗಣಿಸುತ್ತಾರೆ. ಆತ್ಮಸಾಕ್ಷಿ ಬಗ್ಗೆ ಮಾತಾಡುವ ಇವರು ಒಂದು ಕೇಸ್ ವಾಪಸ್ ಪಡೆಯಲು ಒಬ್ಬ ವ್ಯಕ್ತಿಗೆ ಎಷ್ಟು ಕೊಟ್ಟಿದ್ದಾರೆ ಎಂದು ನನಗೆ ಗೊತ್ತಿದೆ. ಸಮಯ ಬಂದಾಗ ಅದನ್ನ ಬಹಿರಂಗ ಪಡಿಸುತ್ತೇನೆ. ಕೇಸ್ ವಾಪಸ್ ಪಡೆಯಲು ಯಾವ ಹಂತಕ್ಕೆ ಹೋಗಿದ್ದಾರೆ ಎಂದೂ ಗೊತ್ತಿದೆ. ನ್ಯಾಯಾಂಗ ವ್ಯವಸ್ಥೆಯಲ್ಲೂ ಕೂಡ ಖರೀದಿ ಮಾಡಬಹುದು ಅಂತಾ ಅಂದುಕೊಂಡಿದ್ದಾರೆ ಎಂದು 'ಕೈ' ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com